ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

**ಒಟ್ಟು ಪ್ರಶ್ನೆಗಳು – ೧೧೭**

# ಪಟ್ಟಿ – ೦೭

# ಕರ್ನಾಟಕ ವಿಧಾನ ಪರಿಷತ್ತು

ನೂರ ಇಪ್ಪತ್ತೇಳನೇ ಅಧಿವೇಶನ

**ಬುಧವಾರ, ದಿನಾಂಕ: ೧೧ನೇ ಫೆಬ್ರವರಿ, ೨೦೧೫**

---

## ಸಮೂಹ – III

೧. ಅರಣ್ಯ ಸಚಿವರು

೨. ಕಂದಾಯ ಸಚಿವರು

೩. ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು

೪. ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲ ಸಾರಿಗೆ ಸಚಿವರು

೫. ಸಣ್ಣ ನೀರಾವರಿ ಸಚಿವರು

೬. ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು

೭. ಕಾರ್ಮಿಕ ರಾಜ್ಯ ಸಚಿವರು

---

## ಮೈಸೂರಿನ ಬೃಂದಾವನ ಉದ್ಯಾನವನದ ನವೀಕರಣ

**ಡಾ॥ ಮತ್ತಿಕಟ್ಟಿ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೪೫ (೮೪೮) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಶ್ವವಿಖ್ಯಾತವಾದ ಬೃಂದಾವನ ಉದ್ಯಾನವು ಸೂಕ್ತ ನಿರ್ವಹಣೆ ಮತ್ತು ಸ್ವಚ್ಛತೆ ಇಲ್ಲದೆಯೇ ಒಣಗಿದ್ದು, ದೇಶಿ ಮತ್ತು ವಿದೇಶಿ ಪ್ರವಾಸಿಗರಿಗೆ ತೀವ್ರ ನಿರಾಶೆ ಉಂಟು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಬೃಂದಾವನ ಉದ್ಯಾನವನವನ್ನು ಅಂತರಾಷ್ಟ್ರೀಯ ಮಟ್ಟಕ್ಕೆ ಉನ್ನತೀಕರಿಸಿ ಸಿವಿಲ್ ಮತ್ತು ತೋಟಗಾರಿಕೆ ಕಾಮಗಾರಿಗಳನ್ನು ರೂಪಿಸುವ ಬಗ್ಗೆ ಹಾಗೂ ಸಮರ್ಪಕ ನಿರ್ವಹಣೆಗಾಗಿ ಪ್ರತ್ಯೇಕ "ಪ್ರಾಧಿಕಾರ" ವನ್ನು ರಚಿಸಲಾಗುವುದೇ ;

(ಇ) ಪ್ರವಾಸಿಗರ ಮನ ತಣಿಸಲು ವಿಫಲವಾಗಿರುವ ಸಂಗೀತ ನೃತ್ಯ ಕಾರಂಜಿಯನ್ನು ಉನ್ನತ ದರ್ಜೆಗೇರಿಸಿ, ಆಕರ್ಷಣೆಯ ಕಾರ್ಯಕ್ರಮಗಳನ್ನು ರೂಪಿಸಲಾಗುವುದೇ ;

(ಈ) ಅಕ್ರಮವಾಗಿ ಕಡಲೆಕಾಯಿ/ಮಂಡಕ್ಕಿ ಮಾರಾಟ ಮಾಡುವವರಿಂದ ಉಂಟಾಗುತ್ತಿರುವ ಮಾಲಿನ್ಯ ತಡೆಗಟ್ಟಿ ಅಂತರಾಷ್ಟ್ರೀಯ ಗುಣಮಟ್ಟದ ಸ್ವಚ್ಛ ವಾತಾವರಣ ರೂಪಿಸಲು ಕ್ರಮಗಳನ್ನು ಕೈಗೊಳ್ಳಲಾಗುವುದೇ ; ಹಾಗಿದ್ದಲ್ಲಿ ಯಾವಾಗ ;



(ಉ) ಕೆ.ಆರ್.ಎಸ್. ಡ್ಯಾಂ.ನ ನಿರ್ಮಾತೃ ಡಾ॥ ಸರ್.ಎಂ. ವಿಶ್ವೇಶ್ವರಯ್ಯ ರವರ ಪ್ರತಿಮೆಯನ್ನು ಉದ್ಯಾನವನದ ಒಳಗಿನ ಸೂಕ್ತ ಸ್ಥಳದಲ್ಲಿ ಸ್ಥಾಪಿಸಲು ಕ್ರಮ ಕೈಗೊಳ್ಳಲಾಗುವುದೇ ?

## ಯುವಕರನ್ನು ಸಶಕ್ತಗೊಳಿಸುವ ಬಗ್ಗೆ

**ಡಾ॥ ಮತ್ತಿಕಟ್ಟಿ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೪೬ (೮೪೯) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಉಜ್ವಲ ಭವಿಷ್ಯಕ್ಕಾಗಿ ಯುವಕರನ್ನು ಸಶಕ್ತಗೊಳಿಸುವ ಅವಶ್ಯಕತೆ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಮಾಹಿತಿ ತಂತ್ರಜ್ಞಾನ ಮತ್ತು ವೃತ್ತಿಪರ ಕ್ಷೇತ್ರಗಳಲ್ಲಿ ತರಬೇತಿ ನೀಡಲು ಯಾವ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ;

(ಇ) ಯುವಶಕ್ತಿಯನ್ನು ಸ್ಥಳೀಯವಾಗಿ ಸದ್ಬಳಕೆ ಮಾಡಿಕೊಳ್ಳುವ ನಿಟ್ಟಿನಲ್ಲಿ ಸರ್ಕಾರವು ರೂಪಿಸಿರುವ ಯೋಜನೆಗಳೇನು ?

## ಕಾರ್ಮಿಕ ಯೋಜನೆಗಳು

**ಶ್ರೀ ಸೈಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು):–**

೭೪೭ (೮೫೦) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರ್ಮಿಕ ಇಲಾಖೆಯ ವ್ಯಾಪ್ತಿಯಲ್ಲಿರುವ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಯೋಜನೆಗಳಾವುವು ; (ಯೋಜನೆವಾರು ವಿವರ ಒದಗಿಸುವುದು)

(ಆ) ಇಲಾಖೆಯ ವಿವಿಧ ಯೋಜನೆಗಳ ಅಡಿಯಲ್ಲಿ ಕಳೆದ ಮೂರು ವರ್ಷಗಳಿಂದ ಎಷ್ಟು ಯೋಜನೆಗಳನ್ನು ಜಾರಿಗೆ ತರಲಾಗಿದೆ ; (ಯೋಜನೆವಾರು ವಿವರ ಒದಗಿಸುವುದು)

(ಇ) ಪ್ರಗತಿಯಲ್ಲಿರುವ ಯೋಜನೆಗಳಾವುವು ? (ಯೋಜನೆವಾರು ವಿವರ ನೀಡುವುದು)

## ಸಂಘ ಸಂಸ್ಥೆಗಳಿಗೆ ಸರ್ಕಾರಿ ಭೂಮಿಯನ್ನು ಮಂಜೂರು

**ಶ್ರೀ ಸೈಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೪೮ (೮೫೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ಹಾಗೂ ಬೆಂಗಳೂರು ಗ್ರಾಮಾಂತರ ಪ್ರದೇಶ ಸೇರಿದಂತೆ ಕರ್ನಾಟಕ ರಾಜ್ಯದಲ್ಲಿ ಕಳೆದ ಹತ್ತು ವರ್ಷಗಳಿಂದ ಯಾವ ಯಾವ ಸಂಸ್ಥೆಗಳಿಗೆ ಎಷ್ಟೆಷ್ಟು ಸರ್ಕಾರಿ ಭೂಮಿಯನ್ನು ಮಂಜೂರು ಮಾಡಲಾಗಿದೆ ; (ಸಂಸ್ಥೆಯ ಹೆಸರು ಹಾಗೂ ವಿಳಾಸ, ಭೂಮಿಯ ವಿಸ್ತೀರ್ಣ, ಉದ್ದೇಶ ಮತ್ತು ಮಂಜೂರು ಮಾಡಿರುವ ವಿಧ ಅಂದರೆ ಕ್ರಯ ಅಥವಾ ಗುತ್ತಿಗೆ ಗುತ್ತಿಗೆಯಾಗಿದ್ದಲ್ಲಿ ಅದರ ಅವಧಿಯೊಂದಿಗೆ ಸಂಪೂರ್ಣ ವಿವರ ನೀಡುವುದು)

(ಆ) ಯಾವ ಉದ್ದೇಶಕ್ಕಾಗಿ ಭೂಮಿಯನ್ನು ಮಂಜೂರು ಮಾಡಲಾಗಿದೆ ; ಅಂತಹ ಉದ್ದೇಶಕ್ಕಾಗಿ ಸದರಿ ಭೂಮಿಯನ್ನು ಬಳಸಲಾಗುತ್ತಿದೆಯೇ ; ಇಲ್ಲದಿದ್ದಲ್ಲಿ, ಅಂತಹ ಸಂಸ್ಥೆಗಳ ಮೇಲೆ ಸರ್ಕಾರವು ಯಾವ ಕ್ರಮ ಕೈಗೊಂಡಿದೆ ; (ಸಂಸ್ಥೆಗಳ ಹೆಸರು, ವಿಳಾಸದೊಂದಿಗೆ ಸಂಪೂರ್ಣ ವಿವರ ನೀಡುವುದು)



(ಇ) ಧಾರ್ಮಿಕ ಸಂಸ್ಥೆಗಳಿಗೆ ಹಾಗೂ ಮಠ ಮಾನ್ಯಗಳಿಗೆ ಕಳೆದ ಹತ್ತು ವರ್ಷಗಳಿಂದ ಮಂಜೂರು ಮಾಡಿರುವ ಭೂಮಿ ಎಷ್ಟು ; (ಪಂಗಡವಾರು ವಿಸ್ತೀರ್ಣವಾರು ವಿವರ ನೀಡುವುದು)

## ಬಳ್ಳಾರಿ ಜಿಲ್ಲೆಯಲ್ಲಿ ಕೆರೆಗಳ ಹೂಳೆತ್ತುವ ಮೂಲಕ ಅಂತರ್ಜಲ ಹೆಚ್ಚಿಸುವ ಕುರಿತು

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೪೯ (೮೫೨) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಳ್ಳಾರಿ ಜಿಲ್ಲೆಯಲ್ಲಿ ಎಷ್ಟು ಕೆರೆಗಳ ಹೂಳೆತ್ತುವ ಕಾರ್ಯ ಕೈಗೊಳ್ಳಲಾಗಿದೆ ;

(ಆ) ಕೆರೆಗಳ ಹೂಳೆತ್ತುವ ಕಾರ್ಯದಿಂದ ಅಂತರ್ಜಲ ಮಟ್ಟ ಹೆಚ್ಚಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಇ) ಈವರೆವಿಗೂ ಕೆರೆಗಳ ಹೂಳೆತ್ತುವ ಮೂಲಕ ಅಂತರ್ಜಲ ಹೆಚ್ಚಿಸಿರುವ ಕೆರೆಗಳ ಸಂಖ್ಯೆ ಎಷ್ಟು ? (ತಾಲ್ಲೂಕುವಾರು, ಕೆರೆಗಳವಾರು ವಿವರ ನೀಡುವುದು)

## ರಾಜ್ಯದಲ್ಲಿ ಮಿನಿ ವಿಧಾನಸೌಧ ಕಟ್ಟಡ ಕಾಮಗಾರಿ ವಿಳಂಬ

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೫೦ (೮೫೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಯಾವ ಯಾವ ಸ್ಥಳಗಳಲ್ಲಿ ಮಿನಿ ವಿಧಾನಸೌಧ ಸ್ಥಾಪಿಸಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಇನ್ನು ಯಾವ ಜಿಲ್ಲೆಗಳಲ್ಲಿ ಸ್ಥಾಪಿಸಬೇಕಾಗಿದೆ; (ಜಿಲ್ಲಾವಾರು ವಿವರ ನೀಡುವುದು)

(ಇ) ಯಾವ ಯಾವ ಜಿಲ್ಲೆಗಳಲ್ಲಿ ಮಿನಿ ವಿಧಾನಸೌಧ ಕಟ್ಟಡ ಕಾಮಗಾರಿ ಪ್ರಾರಂಭಿಸಲಾಗಿದೆ ; (ವಿವರ ನೀಡುವುದು)

(ಈ) ಪ್ರಗತಿಯಲ್ಲಿರುವ ಕಟ್ಟಡ ಕಾಮಗಾರಿಗಳು ಸಮರ್ಪಕವಾಗಿ ನಡೆಯದೇ ವಿಳಂಬವಾಗುತ್ತಿರಲು ಕಾರಣಗಳೇನು ?

## ಬಾಲ ಕಾರ್ಮಿಕ ಪದ್ಧತಿ ತಡೆಗಟ್ಟಲು ಹೊಸ ಯೋಜನೆ ರೂಪಿಸುವ ಕುರಿತು

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೫೧ (೯೩೫) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಳ್ಳಾರಿ ಜಿಲ್ಲೆಯಲ್ಲಿ ಬಾಲಕ ಕಾರ್ಮಿಕ ಅನಿಷ್ಠ ಪದ್ಧತಿ ಇನ್ನೂ ಜೀವಂತವಿದ್ದು, ಇದನ್ನು ಸಂಪೂರ್ಣವಾಗಿ ತಡೆಗಟ್ಟಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಆ) ಈ ಅನಿಷ್ಠ ಪದ್ಧತಿಯನ್ನು ತಡೆಗಟ್ಟಲು ಈವರೆವಿಗೂ ಕೈಗೊಂಡ ಯೋಜನೆಗಳ ಬದಲಾಗಿ ಹೊಸ ಯೋಜನೆಗಳನ್ನು ರೂಪಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ? (ಯೋಜನಾವಾರು ವಿವರ ನೀಡುವುದು)



## ಖುಷ್ಕಿ ಜಮೀನುಗಳಿಗೆ ರೂಪಿಸಲಾದ ಯೋಜನೆಗಳು

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೫೨ (೯೩೪) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಳ್ಳಾರಿ ಜಿಲ್ಲೆಯಲ್ಲಿ ಸಣ್ಣ ನೀರಾವರಿ ಇಲಾಖೆ ವತಿಯಿಂದ ಖುಷ್ಕಿ ಜಮೀನುಗಳಿಗೆ ಯಾವ ಯಾವ ಯೋಜನೆಗಳನ್ನು ರೂಪಿಸಲಾಗಿದೆ ; (ಯೋಜನಾವಾರು ವಿವರ ನೀಡುವುದು)

(ಆ) ಪ್ರಸಕ್ತ ವರ್ಷ ಈ ಯೋಜನೆಗಳ ಅಡಿಯಲ್ಲಿ ಎಷ್ಟು ಖುಷ್ಕಿ ಭೂಮಿಗಳಿಗೆ ಇದರ ಪ್ರಯೋಜನವಾಗಿದೆ ;

(ಇ) ಈ ಯೋಜನೆಗಳನ್ನು ಯಾವ ಆಧಾರ ಅಥವಾ ನಿಯಮಗಳಿಗೆನುಸಾರ ಅನುಷ್ಠಾನಗೊಳಿಸಲಾಗುತ್ತದೆ ? (ವಿವರ ನೀಡುವುದು)

## ಭೂ ಕಬಳಿಕೆ/ಒತ್ತುವರಿ ಭೂಮಿಯ ಸ್ವಾಧೀನ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) :–**

೭೫೩ (೮೫೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಗಳಲ್ಲಿ ಒತ್ತುವರಿಯಿಂದ ಕಬಳಿಕೆಯಾಗಿರುವ ಸರ್ಕಾರಿ ಭೂಮಿ ಎಷ್ಟು; (ಒತ್ತುವರಿ/ಕಬಳಿಕೆದಾರರ ವಿವರ ನೀಡುವುದು)

(ಆ) ಈ ಒತ್ತುವರಿ/ಕಬಳಿಕೆ ಭೂಮಿಯನ್ನು ಸ್ವಾಧೀನ ಪಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಈ ಒತ್ತುವರಿ/ಕಬಳಿಕೆದಾರರ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಪೋಡಿಗಳನ್ನು ಪಡೆಯಲು ಆಗಿರುವ ಅನಾನುಕೂಲ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) :–**

೭೫೪ (೮೫೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಗಳಲ್ಲಿ ಜಮೀನುಗಳ ಪೋಡಿ, ಮೋಜಣಿ ಹಾಗೂ 11(E) ಸ್ಕೇಚ್ ಇತ್ಯಾದಿ ಕಂದಾಯ ದಾಖಲಾತಿಗಳಿಗಾಗಿ ಸಾರ್ವಜನಿಕರಿಂದ ಬಹಳಷ್ಟು ಅಹವಾಲುಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ನಾಗರೀಕರ ಈ ಅಹವಾಲುಗಳನ್ನು ಬಗೆಹರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಬಾಲ ಕಾರ್ಮಿಕ ಪದ್ಧತಿ ನಿರ್ಮೂಲನೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೭೫೫ (೮೫೬+೮೫೭) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಹೋಟೆಲ್‌ಗಳಲ್ಲಿ, ಮನೆಗಳಲ್ಲಿ, ವ್ಯಾಪಾರ ಮಳಿಗೆಗಳಲ್ಲಿ, ಸಣ್ಣ ಕೈಗಾರಿಕೆಗಳಲ್ಲಿ ಮತ್ತು ಗುಡಿ ಕೈಗಾರಿಕೆಗಳಲ್ಲಿ ಬಾಲ ಕಾರ್ಮಿಕರ



ಕೆಲಸ ಮಾಡುತ್ತಿರುವ ವಿಚಾರವು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದು ಕಾನೂನು ಬಾಹಿರವಲ್ಲವೇ ;

(ಆ) ಹಾಗಿದ್ದಲ್ಲಿ, ಸರ್ಕಾರವು ಇಂತಹ ಪ್ರಕರಣಗಳನ್ನು ಪತ್ತೆ ಹಚ್ಚುವಲ್ಲಿ ಕೈಗೊಂಡ ಕ್ರಮಗಳೇನು ; ಈಗಾಗಲೇ ೨೦೧೧–೧೨ ರಿಂದ ೨೦೧೩–೧೪ನೇ ಸಾಲಿನಲ್ಲಿ ಎಷ್ಟು ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದೆ. ;

(ಇ) ಇಂತಹ ಪ್ರಕರಣಗಳಲ್ಲಿ ಭಾಗಿಯಾದ ಎಷ್ಟು ಜನರಿಗೆ ಶಿಕ್ಷೆ ವಿಧಿಸಲಾಗಿದೆ ಮತ್ತು ಶಿಕ್ಷೆಯ ಪ್ರಮಾಣವೇನು ;

(ಈ) ಬಾಲ ಕಾರ್ಮಿಕ ಪದ್ಧತಿ ನಿರ್ಮೂಲನೆಗಾಗಿ ಸರ್ಕಾರವು ಕೈಗೊಂಡ ಕ್ರಮಗಳೇನು ?

## ಡಾ॥ ಕಸ್ತೂರಿ ರಂಗನ್ ವರದಿ

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೫೬ (೮೫೯) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಡಾ॥ ಕಸ್ತೂರಿ ರಂಗನ್ ವರದಿಯ ಬಗ್ಗೆ ರಚನೆಯಾದ ಉಪ ಸಮಿತಿಯು ಯಾವ ಯಾವ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಸಭೆಗಳನ್ನು ನಡೆಸಿದೆ ; (ವಿವರ ಒದಗಿಸುವುದು)

(ಆ) ಸದರಿ ಸಭೆಗಳಲ್ಲಿ ಕೈಗೊಂಡ ತೀರ್ಮಾನಗಳೇನು ? (ವಿವರ ಒದಗಿಸುವುದು)

## ಶಿವಮೊಗ್ಗ ತಾಲ್ಲೂಕಿನ ಮತ್ತೂರು ಹೊಸಹಳ್ಳಿಯಲ್ಲಿ ತುಂಗಾನದಿಗೆ ತಡೆಗೋಡೆ

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೫೭ (೯೩೯) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಿವಮೊಗ್ಗ ತಾಲ್ಲೂಕಿನ ಮತ್ತೂರು ಹೊಸಹಳ್ಳಿಯಲ್ಲಿ ತುಂಗಾನದಿಗೆ ನಿರ್ಮಿಸಲಾಗುತ್ತಿರುವ ತಡೆಗೋಡೆ (Protection Wall) ಕಾಮಗಾರಿಯು ಯಾವ ವರ್ಷದಲ್ಲಿ ಮಂಜೂರಾಯಿತು ; ಮಂಜೂರಾದ ಹಣ ಎಷ್ಟು ;

(ಆ) ಈ ಪೈಕಿ ಉಳಿದಿರುವ ಕಾಮಗಾರಿಗಳು ಯಾವುವು ; (ಎರಡು ಹಳ್ಳಿಗಳಿಗೂ ಪ್ರತ್ಯೇಕವಾಗಿ ವಿವರ ನೀಡುವುದು)

(ಇ) ಈ ಕಾಮಗಾರಿಗೆ ಮಂಜೂರಾದ/ಬಿಡುಗಡೆಯಾದ ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರದ ಪಾಲು ಎಷ್ಟು ; (ವಿವರ ಒದಗಿಸುವುದು)

(ಈ) ಈ ಕಾಮಗಾರಿಯು ಮುಕ್ತಾಯಗೊಳ್ಳುವುದು ಯಾವಾಗ ?

## ಕಟ್ಟಡ ಕಾರ್ಮಿಕರ ಕಲ್ಯಾಣ ನಿಧಿ

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೫೮ (೮೫೮) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇದುವರೆವಿಗೂ ಕಟ್ಟಡ ಕಾರ್ಮಿಕರ ಕಲ್ಯಾಣ ನಿಧಿಗೆ ಒಟ್ಟು ಎಷ್ಟು ವಂತಿಗೆ ಜಮಾ ಆಗಿದೆ ; (ವರ್ಷವಾರು ಮಾಹಿತಿ ನೀಡುವುದು)



(ಆ) ಈ ಹಣವನ್ನು ಎಷ್ಟು ಕಟ್ಟಡ ಕಾರ್ಮಿಕರಿಗೆ ವ್ಯಯಿಸಲಾಗಿದೆ; ವ್ಯಯಿಸಲಾಗಿರುವ ಉದ್ದೇಶದ ವಿವರ ಒದಗಿಸುವುದು ;

(ಇ) ಕಟ್ಟಡ ಕಾರ್ಮಿಕರಿಗೆ ಅನುಕೂಲವಾಗುವಂತೆ ಇನ್ನಿತರೆ ಯೋಜನೆಗಳನ್ನು ಹಮ್ಮಿಕೊಳ್ಳುವ ಪ್ರಸ್ತಾವ ಸರ್ಕಾರದ ಮುಂದಿದೆಯೇ ;

(ಈ) ಹಾಗಿದ್ದಲ್ಲಿ, ಅದರ ರೂಪುರೇಷೆಗಳೇನು? (ವಿವರ ನೀಡುವುದು)

## ಶ್ರೀರಾಮಲಿಂಗೇಶ್ವರ ಮಠದ ಆಸ್ತಿಯ ಪರವಾಗಿ ಕಾನೂನು ಬದ್ಧ ಹಕ್ಕುದಾರಿಕೆ ಬಗ್ಗೆ

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) :–**

೭೫೯ (೮೬೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶ್ರೀ ರಾಮಲಿಂಗೇಶ್ವರ ಮಠಕ್ಕೆ ಸೇರಿದ ೩೪೩೫.೨೬ ಚದರ ಮೀಟರ್ ವಿಸ್ತೀರ್ಣ ಹಾಗೂ ೩೬೨೭.೯೫ ಚದರ ಮೀಟರ್ ವಿಸ್ತೀರ್ಣ ಅನುಕ್ರಮವಾಗಿ ಬೆಂಗಳೂರು ನಗರ ಜಿಲ್ಲೆ, ಉತ್ತರ ತಾಲ್ಲೂಕು ಯಶವಂತಪುರ ಹೋಬಳಿ ವ್ಯಾಪ್ತಿಗೆ ಬರುವ ನಾಗಸಂದ್ರ ಗ್ರಾಮದ ಸರ್ವೆ ನಂ. ೧೧, ೧೨ ಮತ್ತು ೧೩ರಲ್ಲಿ ಬೆಂಗಳೂರು ಮೆಟ್ರೋ ರೈಲು ನಿಗಮ ಸ್ವಾಧೀನಪಡಿಸಿಕೊಂಡು ಪರಿಹಾರ ಧನ ಪಾವತಿಗಾಗಿ ಆವಾರ್ಡ್ ಮಾಡಲಾಗಿದೆಯೇ ; ಮಾಡಲಾಗಿದ್ದರೆ, ಅನುಕ್ರಮವಾಗಿ ಎಷ್ಟು ಆವಾರ್ಡ್ ಮೊತ್ತವನ್ನು ಕೊಡಲಾಗಿದೆ ; (ಸರ್ವೆ ನಂಬರ್‌ವಾರು ಮಾಹಿತಿ ನೀಡುವುದು)

(ಆ) ಆ ಮೊತ್ತವನ್ನು ಮಠದ ಪರವಾಗಿ ಹಕ್ಕುದಾರಿಕೆಯನ್ನು ಕಾನೂನು ರೀತಿಯಲ್ಲಿ ಸಾಬೀತುಪಡಿಸಿ ಹಣ ಪಡೆದಿದ್ದಾರೆಯೇ ; ಪಡೆದಿದ್ದರೆ, ಯಾರಿಗೆ ಎಷ್ಟು ಹಣ ನೀಡಲಾಗಿದೆ ಮತ್ತು ಯಾವ ರೀತಿಯ ಹಕ್ಕುದಾರಿಕೆಯನ್ನು ಸಾಬೀತು ಮಾಡಿದ್ದಾರೆ ? (ವಿವರ ನೀಡುವುದು)

## ಬೆಂಗಳೂರು ನಗರ ಗ್ರಾಮಾಂತರ ಜಿಲ್ಲೆಯಲ್ಲಿ ಸರ್ಕಾರಿ ಜಮೀನು ಒತ್ತುವರಿ

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) :–**

೭೬೦ (೮೬೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಯಲ್ಲಿ ಸರ್ಕಾರದ ಜಮೀನುಗಳನ್ನು ಯಾವ ಯಾವ ಪ್ರದೇಶಗಳಲ್ಲಿ ಎಷ್ಟೆಷ್ಟು ಪ್ರದೇಶಗಳನ್ನು ಒತ್ತುವರಿ ಮಾಡಿಕೊಳ್ಳಲಾಗಿದೆ ; (ಹೆಸರಿನೊಂದಿಗೆ ಪೂರ್ಣ ವಿವರ ನೀಡುವುದು)

(ಆ) ಈವರೆವಿಗೆ ಒಟ್ಟು ಎಷ್ಟು ಒತ್ತುವರಿ ಪ್ರದೇಶವನ್ನು ವಶಪಡಿಸಿಕೊಳ್ಳಲಾಗಿದೆ ; ಯಾರ್‍ಯಾರಿಂದ ಎಷ್ಟೆಷ್ಟು ಪ್ರದೇಶವನ್ನು ವಶಪಡಿಸಿಕೊಳ್ಳಲಾಗಿದೆ ; ವಶಪಡಿಸಿಕೊಳ್ಳಲಾದ ಜಮೀನಿನ ಮೌಲ್ಯ ಎಷ್ಟು ; (ಪ್ರಕರಣವಾರು ಮಾಹಿತಿ ನೀಡುವುದು) ಒತ್ತುವರಿ ಮಾಡಿಕೊಂಡ ವ್ಯಕ್ತಿಗಳ ಮೇಲೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ? (ವಿವರ ನೀಡುವುದು)



## ಕಳಸ ಬಂಡೂರಿ ನದಿ ನೀರಿನ ಬಳಕೆ

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) :–**

೭೬೧ (೮೬೦) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳಸ–ಬಂಡೂರಿ ನದಿಗಳಲ್ಲಿ ಪ್ರತಿವರ್ಷ ಹರಿದು ಹೋಗುವ ನೀರಿನ ಪ್ರಮಾಣ ಎಷ್ಟು ; ಈ ನೀರನ್ನು ಬಳಸಿಕೊಳ್ಳಲು ರಾಜ್ಯ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

(ಆ) ಅಂತರರಾಜ್ಯ ನದಿ ನ್ಯಾಯ ಮಂಡಳಿಯ ಮುಂದೆ ವಿಚಾರಣೆ ಯಾವ ಹಂತದಲ್ಲಿದೆ ? (ವಿವರ ನೀಡುವುದು)

## ಹೊಸ ತಾಲ್ಲೂಕುಗಳ ರಚನೆ

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೬೨ (೮೬೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜನಪ್ರಿಯ ಯೋಜನೆಗಳಲ್ಲಿ ಒಂದಾದ ಹೊಸ ತಾಲ್ಲೂಕುಗಳ ರಚನೆಯ ಯೋಜನೆಯ ಪ್ರಸ್ತಾಪ ಸರ್ಕಾರದ ಮುಂದಿದೆಯೇ ; ಹೊಸ ಸರ್ಕಾರ ಬಂದಾಗಿನಿಂದ ಇಂದಿನವರೆಗೆ ಈ ಯೋಜನೆಯನ್ನು ಜಾರಿಗೆ ತರದಿರಲು ಕಾರಣವೇನು ; ಕೈಗೆತ್ತಿಕೊಳ್ಳುವುದಾದರೆ ಇನ್ನೆಷ್ಟು ಸಮಯದಲ್ಲಿ ಈ ಯೋಜನೆಯನ್ನು ಜಾರಿಗೊಳಿಸಲಾಗುತ್ತದೆ ;

(ಆ) ಹೊಸ ತಾಲ್ಲೂಕುಗಳ ರಚನೆಗೆ ಯಾವ ಯಾವ ಪ್ರದೇಶಗಳನ್ನು ಗುರುತಿಸಲಾಗಿದೆ ; (ಗುರುತಿಸಿರುವ ಪ್ರದೇಶದ ಹೆಸರು ಮತ್ತು

ಜಿಲ್ಲಾವಾರು ವಿವರ ನೀಡುವುದು) ; ಈ ಯೋಜನೆಗೆ ಸರ್ಕಾರ ಮೀಸಲಿಟ್ಟಿರುವ ಅನುದಾನವೆಷ್ಟು ; ಮತ್ತು ಪ್ರತಿ ತಾಲ್ಲೂಕು ಅವಶ್ಯವಿರುವ ವೆಚ್ಚ ಎಷ್ಟು ; (ವಿವರ ನೀಡುವುದು)

(ಇ) ಮೇಲ್ಕಂಡ ಯೋಜನೆ ಜಾರಿಗೆ ತರಲು ವಿಳಂಬ ಕಾರಣಕ್ಕೆ ಹಣಕಾಸಿನ ಮುಗ್ಗಟ್ಟು ಕಾರಣವೇ ? (ಪೂರ್ಣ ಮಾಹಿತಿ ಒದಗಿಸುವುದು)

## ಕಂದಾಯ ಗ್ರಾಮಗಳನ್ನಾಗಿ ಪರಿವರ್ತಿಸುವ ಕುರಿತು

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :–**

೭೬೩ (೮೬೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಲಂಬಾಣಿ ತಾಂಡಾ, ಗೊಲ್ಲರಹಟ್ಟಿ, ನಾಯಕರಹಟ್ಟಿ, ವಡ್ಡರಹಟ್ಟಿ, ಮಜರೆ ಗ್ರಾಮ, ಹಾಡಿಗಳು, ಹ್ಯಾಮ್ಲೆಟ್ ಮತ್ತು ಕ್ಯಾಂಪ್ ಕಾಲೋನಿಗಳ ಸಂಖ್ಯೆ ಎಷ್ಟು ;

(ಆ) ಸರ್ಕಾರಿ ಆದೇಶ ಸಂಖ್ಯೆ:ಕಂಇ:೪೬:ಭೂದಾಪು:೨೦೧೩, ಬೆಂಗಳೂರು, ದಿನಾಂಕ: ೨೦–೦೭–೨೦೧೩ರ ಆದೇಶದ ರೀತ್ಯಾ ೫೦ ಮನೆಗಳು ಹಾಗೂ ೨೫೦ ಜನಸಂಖ್ಯೆ ಇರುವ ಗ್ರಾಮಗಳ ಸಂಖ್ಯೆ ಎಷ್ಟು ;

(ಇ) ಅರ್ಹತೆ ಇರುವ ಗ್ರಾಮಗಳನ್ನು ಸರ್ಕಾರ ಸ್ವಇಚ್ಛೆಯಿಂದ ಕಂದಾಯ ಗ್ರಾಮಗಳನ್ನಾಗಿ ಪರಿವರ್ತಿಸಿ ಹತ್ತಿರದ ಗ್ರಾಮ ಪಂಚಾಯಿತಿಗಳಿಗೆ ಸೇರಿಸಲು ಕೈಗೊಂಡಿರುವ ಕ್ರಮಗಳೇನು ;



(ಈ) ಹಾಸನ ಜಿಲ್ಲೆಯಲ್ಲಿ ಈ ರೀತಿಯ ಪರಿವರ್ತನೆ ಮಾಡಬೇಕಾಗಿರುವ ಪ್ರದೇಶಗಳೆಷ್ಟು ; ನೂತನ ಆದೇಶ ರೀತ್ಯಾ ಪರಿವರ್ತನೆಗೊಂಡ ಗ್ರಾಮಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಉ) ಕಂದಾಯ ಗ್ರಾಮಗಳನ್ನಾಗಿ ಪರಿವರ್ತಿಸಿದ ಗ್ರಾಮಗಳಿಗೆ ಹೆಚ್ಚಿನ ಯಾವ ಯಾವ ಸೌಲಭ್ಯಗಳನ್ನು ಒದಗಿಸಲಾಗುವುದು ?

## ಬೇಲೂರಿನ ವಿಷ್ಣು ಕೆರೆಗೆ ತಡೆಗೋಡೆ

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :–**

೭೬೪ (೮೬೯) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾಸನ ಜಿಲ್ಲೆಯ ಬೇಲೂರಿನ ವಿಷ್ಣು ಕೆರೆಗೆ ಎರಡೂ ಕಡೆ ತಡೆಗೋಡೆ ನಿರ್ಮಿಸಲಾಗಿದೆಯೇ ;

(ಆ) ಕಳೆದ ವರ್ಷ ಈ ಕೆರೆಯಲ್ಲಿ ಕೆ.ಎಸ್.ಆರ್.ಟಿ.ಸಿ. ಬಸ್ ಬಿದ್ದು ೮ ಜನ ಮೃತಪಟ್ಟ ನಂತರ ಈ ಕೆರೆಗೆ ಎರಡೂ ಕಡೆ ತಡೆಗೋಡೆ ನಿರ್ಮಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ವಿಷ್ಣು ಸಮುದ್ರ ಕೆರೆಯಲ್ಲಿ ಪ್ರವಾಸಿಗರ ಅನುಕೂಲಕ್ಕೆ ಕೆರೆಯ ಹೂಳನ್ನು ತೆಗೆದು ದೋಣಿ ವಿಹಾರ ಕಲ್ಪಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ ;

(ಈ) ಸದರಿ ಕೆರೆಯ ಏರಿಯ ಮೇಲೆ ಕೆಲವು ಮರಗಳು ಜೀರ್ಣಾವಸ್ಥೆಯಲ್ಲಿರುವುದರಿಂದ ಇವುಗಳನ್ನು ತೆರವುಗೊಳಿಸಲು ಕೈಗೊಂಡಿರುವ ಕ್ರಮಗಳೇನು ?

## ನೀರಾವರಿ ಯೋಜನೆಯ ಕ್ರಿಯಾ ಯೋಜನೆಗಳು

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೬೫ (೯೭೮) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಭಾರಿ ನೀರಾವರಿ ಇಲಾಖೆಗೆ ೨೦೧೩–೧೪ ಹಾಗೂ ೨೦೧೪–೧೫ನೇ ಸಾಲಿನ ಮುಂಗಡ ಪತ್ರದಲ್ಲಿ ಒದಗಿಸಲಾದ ಹಣವೆಷ್ಟು; ಒದಗಿಸಲಾದ ಹಣದಲ್ಲಿ ರೂಪಿಸಿರುವ ಕ್ರಿಯಾ ಯೋಜನೆಗಳು ಯಾವುವು; ಈ ಯೋಜನೆಗೆ ಬಿಡುಗಡೆ ಮಾಡಿರುವ ಹಣವೆಷ್ಟು ; (ವರ್ಷವಾರು ವಿವರಗಳನ್ನು ನೀಡುವುದು)

(ಆ) ರೈತರು ಬೆಳೆಗೆ ಉಪಯೋಗಿಸುವ ನೀರನ್ನು ಅವೈಜ್ಞಾನಿಕವಾಗಿ ಉಪಯೋಗಿಸಿ ನೀರು ಉಪಯೋಗಕ್ಕೆ ಬಾರದೇ ನದಿ ಮೂಲಕ ಸಮುದ್ರ ಪಾಲಾಗುತ್ತಿದೆ ಇದರ ಬಗ್ಗೆ ಇಲಾಖೆ ತೆಗೆದುಕೊಂಡಿರುವ ಕ್ರಮವೇನು ;

(ಇ) ನೀರಾವರಿ ವ್ಯಾಪ್ತಿಯಲ್ಲಿ ಕಾಡಾ ಮುಖೇನ ಪ್ರಾರಂಭಿಸಲಾದ ನೀರು ಬಳಕೆದಾರರ ಸಂಘ ಪ್ರಾರಂಭಿಸಿ ಅವರನ್ನು ನಿರ್ಧಿಷ್ಟವಾಗಿ ಬಳಸಿಕೊಳ್ಳದೇ ಅವರಿಗೆ ಯಾವುದೇ ರೀತಿಯ ಅನುಕೂಲವನ್ನು ನೀಡದೇ ಅವರನ್ನು ಕತ್ತಲೆಯಲ್ಲಿಡಲಾಗಿದೆ, ಈ ನಿಟ್ಟಿನಲ್ಲಿ ಸರ್ಕಾರ ಇವರಿಗೆ ನೀಡುವ ಅನುಕೂಲಗಳೇನು ?



## ಯುವಜನಸೇವೆ ಮತ್ತು ಕ್ರೀಡಾ ಇಲಾಖೆಗೆ ಬಿಡುಗಡೆ ಮಾಡಿದ ಹಣ

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೬೬ (೮೭೦) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೩–೧೪ ಮತ್ತು ೨೦೧೪–೧೫ ನೇ ಸಾಲಿನಲ್ಲಿ ಯುವಜನ ಸೇವೆ ಹಾಗೂ ಕ್ರೀಡಾ ಇಲಾಖೆಗೆ ಬಿಡುಗಡೆ ಮಾಡಿದ ಹಣವೆಷ್ಟು ;

(ಆ) ಕಳೆದ ೨ ವರ್ಷಗಳಲ್ಲಿ ರಾಜ್ಯದಲ್ಲಿ ಯಾವ ಯಾವ ಕ್ರೀಡೆಗಳನ್ನು ನಡೆಸಲಾಯಿತು; ಯಾವ ಯಾವ ಕ್ರೀಡೆಗಳಿಗೆ ಎಷ್ಟು ಹಣವನ್ನು ಬಿಡುಗಡೆ ಮಾಡಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ಖಾಸಗಿಯಾಗಿ ಜರುಗಿದ ಯಾವ ಯಾವ ಕ್ರೀಡೆಗಳಿಗೆ ಎಷ್ಟು ಪ್ರೋತ್ಸಾಹ ಧನವನ್ನು ನೀಡಲಾಗಿದೆ ?

## ಉಪ ನೋಂದಣಾಧಿಕಾರಿಗಳ ಕಛೇರಿಯಲ್ಲಿ ಮೂಲಭೂತ ಸೌಲಭ್ಯಗಳು

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೬೭ (೮೭೧) ಮಾನ್ಯ ಕಂದಾಯ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದಲ್ಲಿರುವ ಉಪ ನೋಂದಣಾಧಿಕಾರಿಗಳ ಕಛೇರಿಯಲ್ಲಿ ನಿವೇಶನ/ಜಮೀನು ನೋಂದಣಿ ಮತ್ತು ಇತರೆ ಕೆಲಸಗಳಿಗೆ ಬರುವ ಸಾರ್ವಜನಿಕರಿಗೆ, ಕಛೇರಿಯಲ್ಲಿ ಮೂಲಭೂತ ಸೌಕರ್ಯಗಳಾದ ಶೌಚಾಲಯ, ಆಸನ ಮತ್ತು ಕುಡಿಯುವ

ನೀರು ಹಾಗೂ ಇನ್ನಿತರೆ ವ್ಯವಸ್ಥೆಗಳಿಲ್ಲದೆ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ತೆಗೆದುಕೊಂಡಿರುವ ಕ್ರಮವೇನು ?

## ನೀರಾವರಿ ಇಲಾಖೆಗೆ ಬಿಡುಗಡೆ ಮಾಡಿರುವ ಹಣ

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೬೮ (೮೭೨) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೩–೧೪ ಮತ್ತು ೨೦೧೪–೧೫ ನೇ ಸಾಲಿನಲ್ಲಿ ನೀರಾವರಿ ಇಲಾಖೆಗೆ ಬಿಡುಗಡೆ ಮಾಡಿದ ಹಣವೆಷ್ಟು; ಅದರಲ್ಲಿ ಕ್ರಿಯಾ ಯೋಜನೆಯಡಿ ಬಿಡುಗಡೆಯಾಗಿರುವ ಹಣವೆಷ್ಟು ;

(ಆ) ಯಾವ ಯಾವ ಕಾಮಗಾರಿಗಳಿಗೆ ಹಣವನ್ನು ನೀಡಲಾಗಿದೆ; ಕಾಮಗಾರಿ ಯಾವ ಹಂತದಲ್ಲಿದೆ ? (ಜಿಲ್ಲಾವಾರು ವಿವರ ನೀಡುವುದು)

## ಮಹಿಳಾ ಉದ್ಯೋಗಿಗಳಿಗೆ ಸಾರಿಗೆ ಸೌಲಭ್ಯ

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೭೬೯ (೮೭೩) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರಿನಲ್ಲಿ ಗಾರ್ಮೆಂಟ್ ಮತ್ತಿತರೆ ಉದ್ಯೋಗಗಳಿಗಾಗಿ ತೆರಳುವ ಮಹಿಳಾ ಉದ್ಯೋಗಿಗಳಿಗೆ ಸಾರಿಗೆ ಸೌಕರ್ಯಗಳನ್ನು ಒದಗಿಸುವ ಸದುದ್ದೇಶದಿಂದ ರೂಪಿಸಲಾಗಿರುವ ಯೋಜನೆಗಳಾವುವು ; (ವಿವರ ನೀಡುವುದು)



(ಆ) ಇಲ್ಲದಿದ್ದಲ್ಲಿ, ಕಾರ್ಮಿಕ ಮಂಡಳಿಗಳಲ್ಲಿ ಶೇಖರಣೆಯಾಗಿರುವ ಹಣವನ್ನು ಉಪಯೋಗಿಸಿಕೊಂಡು, ಮಹಿಳಾ ಉದ್ಯೋಗಿಗಳಿಗೆ ಸಾರಿಗೆ ಸೌಕರ್ಯವನ್ನು ವಿಶೇಷವಾಗಿ ಒದಗಿಸಲು ಚಿಂತಿಸುವುದೇ ?

## ನಗರ ಪ್ರದೇಶಗಳಲ್ಲಿ ಮೀನು ಮಾರಾಟ ಅಂಗಡಿ

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೭೭೦ (೮೭೪) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಗರ ಪ್ರದೇಶಗಳಲ್ಲಿ ಚಿಕನ್ ಸ್ಟಾಲ್‌ಗಳು ಹೆಚ್ಚಳವಾಗುತ್ತಿರುವ ವೇಗದಲ್ಲಿಯೇ, ಮೀನು ಸ್ಟಾಲ್ ಉಪಹಾರ ಕೇಂದ್ರ, ಹೋಟೆಲ್‌ಗಳನ್ನು ಹೆಚ್ಚಳ ಮಾಡಿ, ಮೀನುಗಾರಿಕೆ ಉದ್ಯಮವನ್ನು ರಾಜ್ಯದಲ್ಲಿ ಮತ್ತಷ್ಟು ಅಭಿವೃದ್ಧಿಪಡಿಸಲು ಸರ್ಕಾರ ಚಿಂತಿಸುವುದೇ ;

(ಆ) ಮೀನುಗಾರಿಕೆ ಉದ್ಯಮದಲ್ಲಿ ತೊಡಗಿರುವ ಕಾರ್ಮಿಕರ/ ಉದ್ಯೋಗಿಗಳ ಕಲ್ಯಾಣ ಕಾರ್ಯಕ್ರಮಗಳು ಯಾವುವು; ಸದರಿ ಕಾರ್ಯಕ್ರಮಗಳ ಪ್ರಯೋಜನವು ನಿರ್ಧಿಷ್ಟ ಫಲಾನುಭವಿಗಳಿಗೆ ತಲುಪಿಸಲು ರೂಪಿಸಿರುವ ಯೋಜನೆಗಳಾವುವು ; (ವಿವರ ನೀಡುವುದು)

(ಇ) ರಾಜ್ಯದಲ್ಲಿ ಮೀನುಗಾರಿಕೆ ಉದ್ಯಮವನ್ನು ಅಭಿವೃದ್ಧಿಪಡಿಸಲು ಸರ್ಕಾರ ಯಾವ ಹೊಸ ಯೋಜನೆಗಳನ್ನು ರೂಪಿಸಿದೆ ? (ವಿವರಗಳನ್ನು ನೀಡುವುದು)

## ಚಂದ್ರಶೇಖರ್ ಪಾಟೀಲ್ ಕ್ರೀಡಾಂಗಣ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೭೭೧ (೯೭೧) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿಯ ಚಂದ್ರಶೇಖರ್ ಪಾಟೀಲ್ ಕ್ರೀಡಾಂಗಣದಲ್ಲಿ ಸಿಂಥೆಟಿಕ್ ಅಥ್ಲೆಟಿಕ್ ಟ್ರ್ಯಾಕ್ ನಿರ್ಮಾಣ ಕಾಮಗಾರಿಯ ಪ್ರಗತಿ ಯಾವ ಹಂತದಲ್ಲಿದೆ ; (ಮಾಹಿತಿ ನೀಡುವುದು)

(ಆ) ಸದರಿ ಕಾಮಗಾರಿಕೆಯ ಗುಣಮಟ್ಟವು ಕಳಪೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈ ನಿಟ್ಟಿನಲ್ಲಿ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಇ) ಹಿರಿಯ ಸ್ವಾತಂತ್ರ ಹೋರಾಟಗಾರರಾದ ದಿವಂಗತ ಚಂದ್ರಶೇಖರ್ ಪಾಟೀಲ್ ಮಹಾಗಾಂವ್‌ರವರ ನಾಮಫಲಕ ಅಳವಡಿಸುವುದು ಹಾಗೂ ಪುತ್ಥಳಿಯ ಸುತ್ತಮುತ್ತಲು ಉದ್ಯಾನವನ ನಿರ್ಮಿಸಲು ಕೈಗೊಂಡ ಕ್ರಮಗಳೇನು ? (ಮಾಹಿತಿ ನೀಡುವುದು)

## ಹೈದರಾಬಾದ್–ಕರ್ನಾಟಕ ಭಾಗದ ಹಾಗೂ ದಾವಣಗೆರೆ ಜಿಲ್ಲೆಗಳ ನೀರಾವರಿ ಯೋಜನೆಗಳು

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೭೭೨ (೮೮೦ ಮತ್ತು ೮೮೧) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೈದರಾಬಾದ್–ಕರ್ನಾಟಕ ಪ್ರದೇಶದಲ್ಲಿ ಹಾಗೂ ದಾವಣಗೆರೆ ಜಿಲ್ಲೆಯಲ್ಲಿ ಕೈಗೊಂಡಿರುವ ನೀರಾವರಿ ಯೋಜನೆಗಳು ಯಾವುವು; ಪ್ರಾರಂಭಗೊಂಡಿದ್ದು ಯಾವಾಗ ; (ಅಣೆಕಟ್ಟು ಮಾಹಿತಿ, ಯೋಜನಾ ವೆಚ್ಚ, ನೀರು ಸಂಗ್ರಹ, ಎಕರೆವಾರು ನೀರಾವರಿ ಕ್ಷೇತ್ರ ಹಾಗೂ ಕಾಲುವೆಗಳ ಉದ್ದ ಸೇರಿದಂತೆ ಯೋಜನಾವಾರು ಮಾಹಿತಿ ಹಾಗೂ ನಕಾಶೆ ನೀಡುವುದು);



(ಆ) ಈ ಮೇಲ್ಕಂಡ ಯೋಜನೆಗಳ ಅಡಿಯಲ್ಲಿ ಮುಳುಗಡೆಯಾದ ಜಮೀನು ಎಷ್ಟು ; (ಯೋಜನಾವಾರು, ಗ್ರಾಮವಾರು ಮಾಹಿತಿ ನೀಡುವುದು)

(ಇ) ಈ ಯೋಜನೆಗಳ ಅಡಿಯಲ್ಲಿ ಮುಳುಗಡೆಯಾದ ಜಮೀನುಗಳಿಗೆ ಪರಿಹಾರ ನೀಡಲಾಗಿದೆಯೇ; ನೀಡಿದ್ದರೆ, ಯೋಜನಾವಾರು ಗ್ರಾಮವಾರು ಪ್ರತಿ ಎಕರೆಗೆ ಕೊಟ್ಟಿರುವಂತಹ ಪರಿಹಾರದ ಮಾಹಿತಿ ನೀಡುವುದು ?

## ಹೈದರಾಬಾದ್–ಕರ್ನಾಟಕ ಭಾಗದ ಅಭ್ಯರ್ಥಿಗಳಿಗೆ ಅರ್ಹತಾ ಪ್ರಮಾಣ ಪತ್ರ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೭೭೩ (೯೭೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರದ ಆದೇಶದಂತೆ ಹೈದರಾಬಾದ್–ಕರ್ನಾಟಕ ಭಾಗದ ಅಭ್ಯರ್ಥಿಗಳಿಗೆ ಕಲಂ ೩೭೧ (ಜೆ)ರನ್ವಯ ಅರ್ಹತಾ ಪ್ರಮಾಣ ಪತ್ರಗಳನ್ನು ಪಡೆದುಕೊಳ್ಳಲು ಸಲ್ಲಿಸಬೇಕಾದ ದಾಖಲೆಗಳು ಯಾವುವು : (ಮಾಹಿತಿ ಒದಗಿಸುವುದು)

(ಆ) ಹಾಗಿದ್ದರೆ, ಸರ್ಕಾರದ ಆದೇಶದಂತೆ ದಾಖಲೆಗಳನ್ನು ಸಲ್ಲಿಸಿದ್ದರೂ ಕೂಡ ಅನಗತ್ಯ ದಾಖಲಾತಿಗಳನ್ನು ಸಲ್ಲಿಸುವಂತೆ ಅಧಿಕಾರಿಗಳು

ಅಭ್ಯರ್ಥಿಗಳಿಗೆ ತೊಂದರೆ ನೀಡುತ್ತಿರುವ ವಿಷಯವು ಸರ್ಕಾರದ ಗಮನಕ್ಕೆ ಇದೆಯೇ; ಇದ್ದಲ್ಲಿ ಈ ನಿಟ್ಟಿನಲ್ಲಿ ಸರ್ಕಾರವು ಕೈಗೊಂಡ ಕ್ರಮವೇನು ;

(ಇ) ಹೈದರಾಬಾದ್–ಕರ್ನಾಟಕ ಭಾಗದ ಅಭ್ಯರ್ಥಿಗಳಿಗಾಗಿ ಕಲಂ ೩೭೧ (ಜೆ)ರನ್ವಯ ಶಿಕ್ಷಣ ಮತ್ತು ಉದ್ಯೋಗಕ್ಕಾಗಿ ಅನುಬಂಧ (ಎ) ಮತ್ತು ಅನುಬಂಧ (ಬಿ) ಪ್ರಮಾಣ ಪತ್ರಗಳನ್ನು ಶೀಘ್ರವಾಗಿ ಪಡೆದುಕೊಳ್ಳಲು ಸರ್ಕಾರವು ಕೈಗೊಂಡ ಕ್ರಮಗಳಾವುವು ? (ವಿವರ ನೀಡುವುದು)

## ಕಂದಾಯ ಅದಾಲತ್ ಕಾರ್ಯಕ್ರಮ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೭೭೪ (೮೭೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರವು ನೂತನವಾಗಿ ಜಾರಿಗೆ ತಂದಿರುವ ಕಂದಾಯ ಅದಾಲತ್ ಕಾರ್ಯಕ್ರಮದಲ್ಲಿ ಇಲ್ಲಿಯವರೆಗೆ ಸ್ವೀಕರಿಸಿದ ಒಟ್ಟು ಅರ್ಜಿಗಳು ಎಷ್ಟು; ಯಾವ ಯಾವ ಪ್ರಕರಣಗಳ ಅರ್ಜಿಗಳು ಸ್ವೀಕೃತವಾಗಿವೆ ; (ಹೈದರಾಬಾದ್–ಕರ್ನಾಟಕ ಭಾಗದ ಜಿಲ್ಲೆಗಳ ಮಾಹಿತಿ ನೀಡುವುದು)

(ಆ) ಸ್ವೀಕರಿಸಿರುವ ಅರ್ಜಿಗಳ ಪೈಕಿ ಇಲ್ಲಿಯವರೆಗೆ ಇತ್ಯರ್ಥಪಡಿಸಿರುವ ಹಾಗೂ ಬಾಕಿ ಇರುವ ಪ್ರಕರಣಗಳ ಸಂಖ್ಯೆ ಎಷ್ಟು ? (ಹೈದರಾಬಾದ್–ಕರ್ನಾಟಕ ಭಾಗದ ಜಿಲ್ಲೆಗಳ ಪ್ರಕರಣವಾರು ಮಾಹಿತಿ ನೀಡುವುದು)



## ಚಾಮರಾಜನಗರ ಜಿಲ್ಲೆಯಲ್ಲಿ ಸಣ್ಣ ರೈತರಿಗೆ ೧೧–A ನಕ್ಷೆ ನೀಡದೇ ಇರುವ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್)**

**(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೭೫ (೮೮೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೫ ಗುಂಟೆಗೆ ಒಳಪಟ್ಟ ಜಮೀನುಗಳಿಗೆ ಸಣ್ಣ ರೈತರು ಮಾರಾಟ ಮಾಡಲು ಅಗತ್ಯವಾದ ೧೧–A ನಕ್ಷೆಯನ್ನು ನೀಡದಂತೆ ಹಾಗೂ ಅಂತಹ ಸಣ್ಣ ಹಿಡುವಳಿಯ ಮಾರಾಟವನ್ನು ನೋಂದಣಿ ಮಾಡದಂತೆ ಚಾಮರಾಜನಗರ ಜಿಲ್ಲಾಧಿಕಾರಿಗಳು ಆದೇಶ ಹೊರಡಿಸಿರುವುದು ನಿಜವೇ ;

(ಆ) ಇಡೀ ರಾಜ್ಯದಲ್ಲಿ ಎಲ್ಲೂ ಇಲ್ಲದ ಆದೇಶವನ್ನು ಚಾಮರಾಜನಗರ ಜಿಲ್ಲೆಗೆ ಮಾತ್ರ ಏಕೆ ಹೊರಡಿಸಲಾಗಿದೆ; ಇದರಿಂದ ಒಂದು–ಎರಡು ಗುಂಟೆ ಜಮೀನು ಹೊಂದಿರುವ ವ್ಯವಸಾಯ ಮಾಡಲಾಗದ ಸಣ್ಣ ರೈತರು ತೊಂದರೆಗೆ ಒಳಗಾಗಿ ಪ್ರತಿಭಟನೆ ನಡೆಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ರೀತಿ ೧೧–A ನಕ್ಷೆ ಕೋರಿ ಸಲ್ಲಿಕೆಯಾಗಿರುವ ಅರ್ಜಿಗಳ ಸಂಖ್ಯೆ ಎಷ್ಟು; ವಜಾ ಮಾಡಲಾಗಿರುವ ಅರ್ಜಿಗಳ ಸಂಖ್ಯೆ ಎಷ್ಟು; ಸೆಪ್ಟೆಂಬರ್ ೧೪ ರವರೆಗೆ ಇಂತಹ ಜಮೀನಿಗೆ ೧೧–A ನಕ್ಷೆ ನೀಡಲಾಗುತ್ತಿದ್ದು ಈಗ ನಿಲ್ಲಿಸಲು ಕಾರಣಗಳೇನು ?

## ಚಾಮರಾಜನಗರ ಜಿಲ್ಲಾ ಕ್ರೀಡಾಂಗಣ ನಿರ್ಮಾಣದಲ್ಲಿ ವಿಳಂಬ

**ಶ್ರೀ ಎಸ್.ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೭೬ (೮೮೪) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಾಮರಾಜನಗರದಲ್ಲಿ ಅಂಬೇಡ್ಕರ್ ಜಿಲ್ಲಾ ಕ್ರೀಡಾಂಗಣ ನಿರ್ಮಾಣ ಕಾರ್ಯ ಪ್ರಾರಂಭವಾಗಿದ್ದು ಯಾವಾಗ; ಇದುವರೆಗೂ ಈ ಕ್ರೀಡಾಂಗಣ ನಿರ್ಮಾಣ ಕಾಮಗಾರಿ ಪೂರ್ಣಗೊಳ್ಳದೇ ಇರಲು ಕಾರಣಗಳೇನು; ಇದುವರೆಗೆ ಕೈಗೊಂಡ/ಮುಕ್ತಾಯಗೊಂಡ ಕಾಮಗಾರಿಗಳ ಸಂಖ್ಯೆ ಎಷ್ಟು; ಈ ಕಾಮಗಾರಿಗಳಿಗೆ ಖರ್ಚಾಗಿರುವ ಹಣ ಎಷ್ಟು; ಇನ್ನೂ ಯಾವ ಯಾವ ಕಾಮಗಾರಿಗಳು ಬಾಕಿ ಉಳಿದಿವೆ; ಇದಕ್ಕೆ ಬೇಕಾದ ಹಣ ಎಷ್ಟು; (ಕಾಮಗಾರಿ ವಿವರ ನೀಡುವುದು)

(ಆ) ನಿರ್ಮಾಣ ಕಾಮಗಾರಿ ಗುತ್ತಿಗೆ ಪಡೆದಿದ್ದ, ಖಾಸಗಿ ಗುತ್ತಿಗೆದಾರರು, ಪೊಲೀಸ್ ಹೌಸಿಂಗ್ ಕಾರ್ಪೋರೇಷನ್, ನಿರ್ಮಿತಿ ಕೇಂದ್ರ, ಭೂ ಸೇನಾ ನಿಗಮ ಇವುಗಳು ಸರಿಯಾಗಿ ಕಾಮಗಾರಿ ಮಾಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಬಗ್ಗೆ ತನಿಖೆ ನಡೆಸಿ ಸರ್ಕಾರ ಸೂಕ್ತ ಕ್ರಮ ತೆಗೆದುಕೊಳ್ಳುವುದೇ ?



## ರಕ್ಷಿತ ಅರಣ್ಯ, ವನ್ಯ ಜೀವಿಧಾಮಗಳಲ್ಲಿ ಸಿಬ್ಬಂದಿ ಕೊರತೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೭೭ (೮೮೩) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಾಗರಹೊಳೆ, ಬಂಡಿಪುರ, ಬಿಳಿಗಿರಿ ರಂಗನ ಬೆಟ್ಟ ಮತ್ತು ಮಲೆಮಹದೇಶ್ವರ ಬೆಟ್ಟ ಅರಣ್ಯ ವಲಯಗಳಲ್ಲಿ, ವನ್ಯ ಜೀವಿಧಾಮಗಳಲ್ಲಿ ಮಂಜೂರಾಗಿರುವ ಅರಣ್ಯ ಅಧಿಕಾರಿ ಹಾಗೂ ವಿವಿಧ ಸಿಬ್ಬಂದಿ ವರ್ಗದ ಸಂಖ್ಯೆ ಎಷ್ಟು; ಹಾಲಿ ಸೇವೆ ಸಲ್ಲಿಸುತ್ತಿರುವ ಮತ್ತು ಖಾಲಿಯಿರುವ ಅಧಿಕಾರಿ ಮತ್ತು ಸಿಬ್ಬಂದಿ ವರ್ಗದ ಸಂಖ್ಯೆ ಎಷ್ಟು ;

(ಆ) ಖಾಲಿಯಿರುವ ಅರಣ್ಯ ಅಧಿಕಾರಿ ಮತ್ತು ಸಿಬ್ಬಂದಿ ವರ್ಗದ ಹುದ್ದೆಗಳನ್ನು ಭರ್ತಿ ಮಾಡಲು ಕೈಗೊಂಡಿರುವ ಕ್ರಮಗಳೇನು ;

(ಇ) ಈ ಕಾಯ್ದಿಟ್ಟ ಅರಣ್ಯಗಳಲ್ಲಿ ಕೂಡಲೇ ಸಾಕಷ್ಟು ಸಂಖ್ಯೆಯ ಅಧಿಕಾರಿ ಮತ್ತು ಸಿಬ್ಬಂದಿಗಳನ್ನು ನೇಮಿಸಿ ಅರಣ್ಯದ ಮತ್ತು ವನ್ಯಜೀವಿಗಳ ರಕ್ಷಣೆಗೆ ಕ್ರಮ ತೆಗೆದುಕೊಳ್ಳಲಾಗುವುದೇ ?

## ಹಾವೇರಿ ಜಿಲ್ಲೆ ಕ್ರೀಡಾ ವಸತಿ ನಿಲಯ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೭೭೮ (೮೮೬) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾವೇರಿ ಜಿಲ್ಲಾ ಕ್ರೀಡಾ ವಸತಿ ನಿಲಯದಲ್ಲಿನ ಅವ್ಯವಸ್ಥೆ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದರೆ, ಯಾವ ಯಾವ ಸೌಲಭ್ಯಗಳನ್ನು ಕೈಗೊಳ್ಳಲಾಗಿದೆ; (ಮಾಹಿತಿ ಒದಗಿಸುವುದು)

(ಇ) ಇಲ್ಲಿ ಮಹಿಳಾ ವಾರ್ಡ್‌ನ್ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಯಾವಾಗ ನೇಮಿಸಲಾಗುವುದು ?

## ಹಾವೇರಿ ಜಿಲ್ಲಾ ಕ್ರೀಡಾಂಗಣದ ದುಸ್ಥಿತಿ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೭೯ (೯೪೦) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾವೇರಿ ನಗರದಲ್ಲಿ ಜಿಲ್ಲಾ ಕ್ರೀಡಾಂಗಣವನ್ನು ರೂ.೩.೮೫ ಕೋಟಿ ವೆಚ್ಚದಲ್ಲಿ ನಿರ್ಮಿಸಿದ್ದು, ಪ್ರಸ್ತುತ ಒಳಾಂಗಣ ಕ್ರೀಡಾಂಗಣ ಹಾಗೂ ಈಜುಕೊಳ ದುಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಕಳಪೆ ಕಾಮಗಾರಿಯಿಂದ ಒಳಾಂಗಣ ಕ್ರೀಡಾಂಗಣದ ಕಟ್ಟಡ ಕುಸಿದಿದ್ದು, ಈಜುಕೊಳದ ನೀರು ಬಸಿಯುತ್ತಿರುವುದು ಇತ್ಯಾದಿ ಕಳಪೆ ಕಾಮಗಾರಿಗಳ ಬಗ್ಗೆ ತನಿಖೆ ನಡೆಸಬೇಕೆಂದು ನಾಗರೀಕರು ಆಗ್ರಹಿಸುತ್ತಿರುವುದು ನಿಜವೇ;

(ಇ) ಹಾಗಿದ್ದಲ್ಲಿ, ಕಾಮಗಾರಿಯನ್ನು ನಿರ್ವಹಿಸಿದವರು ಯಾರು; ಈ ಕಳಪೆ ಕಾಮಗಾರಿ ನಿರ್ವಹಿಸಿರುವ ಬಗ್ಗೆ ತನಿಖೆ ನಡೆಸಿ ಸಂಬಂಧಪಟ್ಟವರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ?



## ಹಾವೇರಿ ಮತ್ತು ಧಾರವಾಡ ಜಿಲ್ಲೆಯಲ್ಲಿ ಉದ್ಯೋಗ ಮೇಳ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೮೦ (೯೪೧) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾವೇರಿ ಹಾಗೂ ಧಾರವಾಡ ಜಿಲ್ಲೆಗಳಲ್ಲಿ ಕಳೆದ ಒಂದು ವರ್ಷದಲ್ಲಿ ಎಷ್ಟು ಉದ್ಯೋಗ ಮೇಳವನ್ನು ನಡೆಸಲಾಗಿದೆ;

(ಆ) ಸದರಿ ಜಿಲ್ಲೆಗಳಲ್ಲಿ ಇರುವ ನಿರುದ್ಯೋಗಿ ಪದವೀಧರರ ಸಂಖ್ಯೆ ಎಷ್ಟು;

(ಇ) ಎಷ್ಟು ಪದವೀಧರರು ಉದ್ಯೋಗ ಕೋರಿ ಅರ್ಜಿ ಸಲ್ಲಿಸಿರುತ್ತಾರೆ;

(ಈ) ಎಷ್ಟು ಪದವೀಧರರನ್ನು ಉದ್ಯೋಗ ಮೇಳದ ಮೂಲಕ ಆಯ್ಕೆ ಮಾಡಿಕೊಳ್ಳಲಾಗಿದೆ? (ಅಂಕಿ ಅಂಶಗಳನ್ನು ಒದಗಿಸುವುದು)

## ಅರಣ್ಯ ಇಲಾಖೆಯಲ್ಲಿ ಅಕ್ರಮವಾಗಿ ಹುದ್ದೆ ಸೃಜಿಸಿ ಮುಂದುವರೆಸುತ್ತಿರುವ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೮೧ (೮೯೩) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೆ.ಸಿ.ಎಸ್.ಆರ್. ನಿಯಮ ೩೨ರಡಿಯಲ್ಲಿ ಸುಮಾರು ೧೫ ರಿಂದ ೨೦ ವರ್ಷಗಳಕಾಲ ೪೦೦ ಪ್ರಭಾರಿ ವಲಯ ಅರಣ್ಯಾಧಿಕಾರಿಗಳಾಗಿ ಕಾರ್ಯನಿರ್ವಹಿಸುತ್ತಿದ್ದು ಮಂಜೂರಾದ

ಹುದ್ದೆ ೬೩೩ ಮಾತ್ರ ಇದ್ದು; ಇದಕ್ಕೆ ಬದಲಾಗಿ ಸುಮಾರು ೯೦೦ ಹುದ್ದೆಗಳನ್ನು ಸೃಜಿಸಿ ನಿಯೋಜಿಸಿರುವುದರ ಉದ್ದೇಶ ಏನು; ಈ ರೀತಿ ನಿಯೋಜನೆ ಮಾಡಲು ೬ ತಿಂಗಳ ಕಾಲಾವಕಾಶ ಮಾತ್ರ ಇದೆ ಇಲ್ಲಿಯವರೆಗೆ ಇದರಿಂದ ಸರ್ಕಾರದ ಇಲಾಖೆಗೆ ಆರ್ಥಿಕ ನಷ್ಟ ಉಂಟು ಮಾಡಿದಂತಾಗಿಲ್ಲವೆ; ಇದಕ್ಕೆ ಯಾವ ಕ್ರಮ ಕೈಗೊಳ್ಳಲಾಗಿದೆ; ಸದರಿ ನೌಕರರುಗಳನ್ನು ಮುಂದುವರೆಸಲು ಕಾರಣ ಏನು ;

(ಆ) ನಿಯಮ ೩೨ರಡಿಯಲ್ಲಿ ನೇಮಕಗೊಂಡ ಪ್ರಭಾರ ವಲಯ ಅರಣ್ಯಾಧಿಕಾರಿಗಳು ೬ ತಿಂಗಳು ಮಾತ್ರ (ಪ್ರಭಾರ ಭತ್ಯೆ) ಪಡೆಯಲು ಅರ್ಹರಿದ್ದು, ಆದರೆ ಈ ಪ್ರಭಾರ ಭತ್ಯೆಯೊಂದಿಗೆ ನೇರ ನೇಮಕಾತಿ ಹುದ್ದೆಯವರು ಪಡೆಯುವ ರೀತ್ಯಾ ಎಲ್ಲಾ ಭತ್ಯೆ ಹಾಗೂ ಸವಲತ್ತುಗಳನ್ನು ಪಡೆದುಕೊಂಡು ಸುಮಾರು ೧೫–೨೦ ವರ್ಷಗಳಿಂದ ಸರ್ಕಾರಕ್ಕೆ ಕೋಟ್ಯಾಂತರ ರೂಪಾಯಿ ನಷ್ಟ ಉಂಟು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೇ; ಬಂದಿದ್ದರೆ, ಇದಕ್ಕೆ ಯಾವ ಕ್ರಮ ತೆಗೆದುಕೊಳ್ಳಲಾಗಿದೆ ;

(ಇ) ಇಲಾಖೆಯಲ್ಲಿ ಬೇರೆ ಬೇರೆ ವೃಂದದ ಹುದ್ದೆಗಳನ್ನು ಮಂಜೂರಾತಿ ಹುದ್ದೆಗಿಂತ ಹೆಚ್ಚಿನದಾಗಿ ಸೃಷ್ಟಿಸಿ ಪದನ್ನೋತಿಗೆ ಅರ್ಹತೆ ಇಲ್ಲದಿದ್ದರೂ ಸಹ ಆದೇಶ ಹೊರಡಿಸಿ ಇಲಾಖೆಗೆ ಕೋಟ್ಯಾಂತರ ರೂಪಾಯಿಗಳ ಆರ್ಥಿಕ ನಷ್ಟ ಉಂಟು ಮಾಡಿರುವ I.F.S. ಅಧಿಕಾರಿಗಳ ವಿರುದ್ಧ ಸರ್ಕಾರದ ಕ್ರಮಗಳೇನು; ಈ ಪ್ರಕರಣವನ್ನು ಲೋಕಾಯುಕ್ತ ತನಿಖೆಗೆ ವಹಿಸಲಾಗುವುದೇ ;

(ಈ) ಸರ್ಕಾರದ ಅನುಮತಿ ಇಲ್ಲದೆ ನಿಯಮ ೩೨ರಡಿಯಲ್ಲಿ ಹಾಲಿ ಕಾರ್ಯ ನಿರ್ವಹಿಸುತ್ತಿರುವ ವಲಯ ಅರಣ್ಯಾಧಿಕಾರಿಗಳನ್ನು ಹಿಂಬಡ್ತಿಗೊಳಿಸಿ ಉಪವಲಯ ಅರಣ್ಯಾಧಿಕಾರಿಗಳಾಗಿ ನೇಮಿಸಿ



ಕ್ರಮ ಕೈಗೊಳ್ಳಲು ಸರ್ಕಾರಕ್ಕೆ ಇರುವ ತೊಂದರೆ ಏನು; ಈ ರೀತಿ ಕಾನೂನು ಬಾಹಿರವಾಗಿ ನೇಮಕ ಮುಂದುವರೆಸಲು ಸರ್ಕಾರದ ಹಿರಿಯ ಅಧಿಕಾರಿಗಳು ಕೈ ಜೋಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಇದುವರೆಗೆ ತೆಗೆದುಕೊಂಡಿರುವ ಕ್ರಮಗಳೇನು ?

## ಅನುಕಂಪದ ಆಧಾರದ ಮೇಲೆ ಉದ್ಯೋಗ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೮೨ (೮೮೫) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ಅರಣ್ಯ ಕೈಗಾರಿಕಾ ನಿಗಮ ನಿಯಮಿತದಲ್ಲಿ ಅನುಕಂಪದ ಆಧಾರದ ಮೇಲೆ ಇದುವರೆವಿಗೆ ಎಷ್ಟು ಜನರಿಗೆ ಉದ್ಯೋಗ ಕಲ್ಪಿಸಿಕೊಡಲಾಗಿದೆ ; (ಅವರುಗಳ ಹೆಸರು, ಅರ್ಜಿ ಸಲ್ಲಿಸಿದ ದಿನಾಂಕದೊಂದಿಗೆ ವಿವರ ಒದಗಿಸುವುದು)

(ಆ) ಅನುಕಂಪದ ಆಧಾರದ ಮೇಲೆ ಉದ್ಯೋಗ ಕೋರಿ ಸ್ವೀಕೃತವಾಗಿರುವ ಮತ್ತು ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು ; (ಅರ್ಜಿದಾರರ ಹೆಸರು, ಅರ್ಜಿ ಸಲ್ಲಿಸಿದ ದಿನಾಂಕ ಸಹಿತ ವಿವರ ಒದಗಿಸುವುದು)

(ಇ) ಅರ್ಜಿದಾರರಿಗೆ ಜೇಷ್ಠತೆಯ ಮೇಲೆ ಉದ್ಯೋಗ ಒದಗಿಸದಿರಲು ಕಾರಣವೇನು ;

(ಈ) ಅನುಕಂಪದ ಆಧಾರದ ಮೇಲೆ ಉದ್ಯೋಗಕ್ಕಾಗಿ ಕಾಯುತ್ತಿರುವವರೆಲ್ಲರಿಗೂ ಒಂದೇ ಬಾರಿ ಉದ್ಯೋಗಾವಕಾಶ ಕಲ್ಪಿಸಿಕೊಡಲಾಗುವುದೇ; ಈ ಬಗ್ಗೆ ಸರ್ಕಾರದ ನಿಲುವೇನು ?

## ರಾಜ್ಯದಲ್ಲಿನ ಹುಲಿಗಳ ಸಂಖ್ಯೆ

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ):–**

೭೮೩ (೮೯೯) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯಾದ್ಯಂತ ಅರಣ್ಯಗಳಲ್ಲಿ ಹಾಲಿಯಿರುವ ಹುಲಿಗಳ ಸಂಖ್ಯೆ ಎಷ್ಟು ;

(ಆ) ಕಳೆದ ಐದು ವರ್ಷಗಳಲ್ಲಿ ಬಂಡಿಪುರ ಮತ್ತು ನಾಗರಹೊಳೆ ಅಭಯಾರಣ್ಯಗಳಲ್ಲಿ ವಿಷ ಪ್ರಾಶನದಿಂದ ಮತ್ತು ಜಾಟ್ರ್ಯಾಪ್‌ನಿಂದಾಗಿ ಸಾವಿಗೀಡಾಗಿರುವ ಹುಲಿಗಳ ಸಂಖ್ಯೆ ಎಷ್ಟು ? (ವಿವರ ನೀಡುವುದು)

## ರಾಜ್ಯ ಮತ್ಸ್ಯೋದ್ಯಮ

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ):–**

೭೮೪ (೮೮೮) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯಾದ್ಯಂತ ಮೀನುಗಳ ಸಾಕಾಣಿಕೆ ಮತ್ತು ಮಾರಾಟಕ್ಕಾಗಿ ಗುರುತಿಸಲ್ಪಟ್ಟ ಕೆರೆಗಳು ಎಷ್ಟು; (ಜಿಲ್ಲಾವಾರು ಪಟ್ಟಿ ನೀಡುವುದು) ಈ ಕೆರೆಗಳಲ್ಲಿ ಮತ್ಸ್ಯ ಉತ್ಪನ್ನಗಳ ಮಾರಾಟಕ್ಕಾಗಿ ಎಷ್ಟು ಮೊತ್ತಕ್ಕೆ ಗುತ್ತಿಗೆ ನೀಡಲಾಗಿದೆ ; (ಪ್ರತ್ಯೇಕ ಕೆರೆಯ ಗುತ್ತಿಗೆ ಮೊತ್ತವನ್ನು ನೀಡುವುದು)

(ಆ) ಮೀನು ಮಾರಾಟದ ವ್ಯವಹಾರದಲ್ಲಿ ತೊಡಗಿಕೊಂಡಿರುವ ಗುತ್ತಿಗೆ ವ್ಯವಹಾರದಲ್ಲಿ ಬಹಳ ದೊಡ್ಡ ಪ್ರಮಾಣ ಅಕ್ರಮ ನಡೆದಿರುವುದು



ಸರ್ಕಾರದ ಗಮನಕ್ಕೆ ಬಂದಿದೆಯೆ; ಕಳೆದ ಎರಡು ವರ್ಷಗಳಲ್ಲಿ ದಾಖಲಾಗಿರುವ ದೂರುಗಳ ಸಂಖ್ಯೆ ಎಷ್ಟು; ಎಷ್ಟು ಪ್ರಕರಣಗಳಲ್ಲಿ ತನಿಖೆ ನಡೆಸಲಾಗಿದೆ; ಕೈಗೊಂಡ ಕ್ರಮಗಳೇನು ; (ಜಿಲ್ಲಾವಾರು, ಪ್ರಕರಣವಾರು ವಿವರ ನೀಡುವುದು)

(ಇ) ಕರಾವಳಿ ಹೊರತು ಪಡಿಸಿದಂತೆ, ಒಳನಾಡಿನಲ್ಲಿ ಮೀನುಗಾರರ ವಸತಿ ಯೋಜನೆಗಾಗಿ ಕಳೆದ ಎರಡು ವರ್ಷಗಳಲ್ಲಿ ಮೀಸಲಿಟ್ಟ ಹಣವೆಷ್ಟು; ಎಷ್ಟು ಮನೆಗಳನ್ನು ನಿರ್ಮಿಸಲಾಗಿದೆ; ಎಷ್ಟು ಮನೆಗಳನ್ನು ಹಸ್ತಾಂತರಿಸಲಾಗಿದೆ; ಗುರಿ ಎಷ್ಟು ? (ಜಿಲ್ಲಾವಾರು, ವಿವರ ನೀಡುವುದು)

## ಕರ್ನಾಟಕ ಕಾರ್ಮಿಕ ಆಸ್ಪತ್ರೆಗಳು

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) :–**

೭೮೫ (೮೮೭) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರ್ಮಿಕರಿಗಾಗಿ ರಾಜ್ಯಾದ್ಯಂತ ಸ್ಥಾಪಿಸಲಾಗಿರುವ ಆಸ್ಪತ್ರೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು) ಪ್ರತಿಯೊಂದು ಆಸ್ಪತ್ರೆಯಲ್ಲಿ ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು; (ಹುದ್ದೆವಾರು ವಿವರ ನೀಡುವುದು) ಆ ಪೈಕಿ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು;

(ಆ) ಕಳೆದ ಎರಡು ವರ್ಷಗಳಲ್ಲಿ ಎಷ್ಟು ಹೊಸ ಆಸ್ಪತ್ರೆಗಳನ್ನು ತೆರೆಯಲಾಗಿದೆ; ಸದರಿ ಆಸ್ಪತ್ರೆಗಳಲ್ಲಿ ಭರ್ತಿ ಮಾಡಲಾದ ಸಿಬ್ಬಂದಿಗಳ ಸಂಖ್ಯೆ ಎಷ್ಟು; (ಹುದ್ದೆವಾರು ವಿವರ ನೀಡುವುದು) ಈ ವರ್ಷದ ಗುರಿ ಎಷ್ಟು?

## ಹುಲಿಗಳು ದಾಳಿ ಮಾಡಿರುವ ವಿವರ

**ಶ್ರೀ ಘೊಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೭೮೬ (೮೯೦) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಹತ್ತು ವರ್ಷಗಳಿಂದ ಎಲ್ಲೆಲ್ಲಿ ಹುಲಿಗಳ ದಾಳಿ ನಡೆದಿವೆ; ಎಷ್ಟು ಪ್ರಕರಣಗಳು ದಾಖಲಾಗಿವೆ; (ದಾಳಿಗಳಿಂದ ಉಂಟಾಗಿರುವ ಹಾನಿ ಕುರಿತು ವಿವರ ನೀಡುವುದು)

(ಆ) ಯಾವ ಯಾವ ಜಿಲ್ಲೆಯಲ್ಲಿ ಅರಣ್ಯ ಇಲಾಖೆ ಸಿಬ್ಬಂದಿ ಕೊರತೆಯನ್ನು ಎದುರಿಸುತ್ತಿದೆ ;

(ಇ) ಹುಲಿ ಹಿಡಿಯಲು ಸಿಬ್ಬಂದಿಗೆ ಯಾವ ರೀತಿಯ ಆಯುಧಗಳನ್ನು ನೀಡಲಾಗಿದೆ ; ಟ್ರ್ಯಾಂಕುಲೈಸರ್ ಎನ್ನುವ ಆಯುಧ ಯಾವ ಕಾಲದ ತಂತ್ರಜ್ಞಾನವನ್ನು ಹೊಂದಿದೆ ; ಇದನ್ನು ಉಪಯೋಗಿಸುವ ಕುರಿತು ಸಿಬ್ಬಂದಿಗಳಿಗೆ ತರಬೇತಿ ನೀಡಲಾಗಿದೆಯೇ ; (ಜಿಲ್ಲಾವಾರು ಮಾಹಿತಿ ನೀಡುವುದು) ಟ್ರ್ಯಾಂಕುಲೈಸರ್ ಉಪಯೋಗಿಸುವ ಬಗ್ಗೆ ತಿಳಿದವರಲ್ಲಿ ಪಶುವೈದ್ಯರು ಎಷ್ಟು ಮತ್ತು ಇತರೆ ಸಿಬ್ಬಂದಿಗಳು ಎಷ್ಟು ; (ವಿವರ ನೀಡುವುದು)

(ಈ) ಇನ್ನಷ್ಟು ಉತ್ತಮ ಆಯುಧಗಳು ಲಭ್ಯವಿಲ್ಲವೇ; ಇದ್ದಲ್ಲಿ, ಅವುಗಳನ್ನು ನೀಡುವ ಬಗ್ಗೆ ಸರ್ಕಾರ ಚಿಂತನೆ ನಡೆಸಿದೆಯೆ; ಯಾವಾಗ ನೀಡಲಾಗುವುದು ?



## ಐ.ಟಿ.ಐ. ಕಾಲೇಜ್‌ನಲ್ಲಿ ಖರೀದಿಸುವ ಸಲಕರಣೆಗಳ ಅವ್ಯವಹಾರ

**ಶ್ರೀ ಘೊಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೭೮೭ (೮೯೧) ವಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರವಾರ ಜಿಲ್ಲೆಯ ಎಲ್ಲಾ ತಾಲ್ಲೂಕಿನಲ್ಲಿರುವ ಐ.ಟಿ.ಐ. ಕಾಲೇಜ್‌ನಲ್ಲಿ ಕಳೆದ ೧೦ ವರ್ಷಗಳಿಂದ ಕಾಲೇಜಿಗೆ ಖರೀದಿಸಿರುವ ಸಲಕರಣೆಗಳಲ್ಲಿ ಅವ್ಯವಹಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಸದರಿ ಸಲಕರಣೆಗಳನ್ನು ಯಾವ ಏಜೆನ್ಸಿ ಮುಖಾಂತರ ಎಷ್ಟು ಮೊತ್ತಕ್ಕೆ ಖರೀದಿ ಮಾಡಲಾಗಿದೆ ; (ಖರೀದಿ ಮಾಡಲು ಇರುವ ನಿಯಮ ಹಾಗೂ ಖರೀದಿದಾರರ ವಿವರ ನೀಡುವುದು)

(ಇ) ಕಳೆದ ೧೦ ವರ್ಷಗಳಲ್ಲಿ ಐ.ಟಿ.ಐ. ಕಾಲೇಜಿನಲ್ಲಿ ವಿದ್ಯಾರ್ಥಿಗಳಿಗೆ ಅಗತ್ಯವಾಗಿ ಬೇಕಾಗಿರುವ (ಲ್ಯಾಬ್) ಪ್ರಾಕ್ಟಿಕಲ್ ಕುರಿತಾದ ಸಲಕರಣೆಗಳನ್ನು ನಿಯಮದಂತೆ ಖರೀದಿಸಿರುತ್ತಾರೆಯೇ ಹಾಗೂ ಯಾವ ಏಜೆನ್ಸಿ ಮುಖಾಂತರ ಖರೀದಿಸಿರುತ್ತಾರೆ ? (ಅವರು ನೀಡಿರುವ ದರಪಟ್ಟಿ ಹಾಗೂ ಖರೀದಿಸಿದ ರಶೀದಿಯ ಸಮೇತ ವರ್ಷವಾರು ವಿವರ ನೀಡುವುದು)

## ಅಸಂಘಟಿತ ಕಾರ್ಮಿಕರಿಗೆ ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಲಭ್ಯವಿರುವ ಸವಲತ್ತುಗಳು

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು):–**

೭೮೮ (೮೯೪) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಂದ ಅಸಂಘಟಿತ ಕಾರ್ಮಿಕರ ಭದ್ರತೆಗೆ ಜಾರಿಯಲ್ಲಿರುವ ಸವಲತ್ತುಗಳೇನು ; (ವಿವರ ನೀಡುವುದು)

(ಆ) ಅಂತಹ ಸವಲತ್ತುಗಳನ್ನು ಪಡೆಯಲು ನಿಯಮವೇನು ಮತ್ತು ಮಾನದಂಡಗಳೇನು ? (ವಿವರ ನೀಡುವುದು)

## ಗೋಮಾಳ ಜಮೀನಿನ ಒತ್ತುವರಿ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೭೮೯ (೯೭೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ, ಮೈಸೂರು, ಹಾಸನ ಹಾಗೂ ಚಾಮರಾಜನಗರ ಜಿಲ್ಲೆಯಲ್ಲಿರುವ ಒಟ್ಟು ಗೋಮಾಳ ಪ್ರದೇಶದ ವಿಸ್ತೀರ್ಣವೆಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ಗೋಮಾಳ ಜಾಗದಲ್ಲಿ ಬೇರೆ ಬೇರೆ ಉದ್ದೇಶಕ್ಕೆ ಬಳಕೆಯಾಗಿರುವ ಹಾಗೂ ಒತ್ತುವರಿಯಾಗಿರುವ ಜಾಗವೆಷ್ಟು;

(ಇ) ಗೋಮಾಳ ಜಮೀನಿನ ರಕ್ಷಣೆ ಹಾಗೂ ಒತ್ತುವರಿ ತಡೆಗೆ ಸರ್ಕಾರ ಕೈಗೊಂಡ ಕ್ರಮಗಳೇನು ?



## ಕೃಷ್ಣಾ ಮೇಲ್ದಂಡೆ ಯೋಜನೆ

**ಶ್ರೀ ಅಲ್ಲಮ ಪ್ರಭುಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೭೯೦ (೮೯೯) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೃಷ್ಣಾ ಮೇಲ್ದಂಡೆ ಯೋಜನೆಯಲ್ಲಿ ಎಷ್ಟು ಹೆಕ್ಟೇರ್ ಜಮೀನು ನೀರಾವರಿಗೆ ಒಳಪಟ್ಟಿದೆ ;

(ಆ) ಯಾವ ವರ್ಷದಲ್ಲಿ ಅಧಿಕೃತ ಗೆಜೆಟ್ ಪ್ರಕಟವಾಗಿದೆ ; ಈವರೆವಿಗೂ ರೈತರಿಂದ ಸಂಗ್ರಹವಾದ ಕರ ಎಷ್ಟು ; ಹಾಗೂ ಬಾಕಿ ಉಳಿದ ಹಣ ಎಷ್ಟು ?

## ಕೃಷ್ಣಾ ಮೇಲ್ದಂಡೆ ಯೋಜನೆಗಾಗಿ ವಶಪಡಿಸಿಕೊಂಡ ಜಮೀನು

**ಶ್ರೀ ಅಲ್ಲಮ ಪ್ರಭುಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೭೯೧ (೯೦೦) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೃಷ್ಣಾ ಮೇಲ್ದಂಡೆ ಯೋಜನೆಯಲ್ಲಿ ಕಾಲುವೆಗಳ ಕೆಲಸಕ್ಕಾಗಿ ವಶಪಡಿಸಿಕೊಂಡ ಜಮೀನಿನ ವಿಸ್ತೀರ್ಣ ಎಷ್ಟು ;

(ಆ) ಆ ಪೈಕಿ ಉಪಯೋಗಿಸದೇ ಉಳಿದಿರುವ ಜಮೀನು ಎಷ್ಟು ;

(ಇ) ಈ ಜಮೀನುಗಳು ಸರ್ಕಾರದ ವಶದಲ್ಲಿದೆಯೋ ಅಥವಾ ರೈತರ ವಶದಲ್ಲಿದೆಯೋ ; ಅವುಗಳನ್ನು ಸರ್ಕಾರದ ವಶಕ್ಕೆ ತೆಗೆದುಕೊಳ್ಳಲು ಯಾವ ಕ್ರಮ ಕೈಗೊಂಡಿದೆ ?

## ಬೀದರ್ ಜಿಲ್ಲೆಯಲ್ಲಿ ಮೀನುಗಾರಿಕೆ ಅಭಿವೃದ್ಧಿ ಯೋಜನೆಗಳು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೭೯೨ (೯೦೪) ಮಾನ್ಯ ಯುವ ಸಬಲೀಕರಣ ಕ್ರೀಡಾ ಮತ್ತು ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಮೀನುಗಾರರ ಅಭಿವೃದ್ಧಿಗೆ ಯಾವ ಯೋಜನೆಗಳನ್ನು ರೂಪಿಸಲಾಗಿದೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಮೀನುಗಾರರ ವಸತಿ ಸೌಕರ್ಯ ಕಲ್ಪಿಸಲು ರೂಪಿಸಿರುವ ಯೋಜನೆಗಳಾವುವು ; (ಮಾಹಿತಿ ಒದಗಿಸುವುದು)

(ಇ) ಈ ಜಿಲ್ಲೆಯಲ್ಲಿ ಎಷ್ಟು ಮೀನುಗಾರರಿಗೆ ವಸತಿ ಸೌಕರ್ಯಗಳನ್ನು ಕಲ್ಪಿಸಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಬೀದರ್ ಜಿಲ್ಲೆಯಲ್ಲಿ ಎಷ್ಟು ಮೀನು ಮಾರಾಟ ಕೇಂದ್ರಗಳನ್ನು ತೆರೆಯಲಾಗಿದೆ ಹಾಗೂ ಬೀದರ್ ಜಿಲ್ಲೆಯಲ್ಲಿ ಯಾವ ಯಾವ ಸ್ಥಳದಲ್ಲಿ ಮೀನು ಸಾಕಣೆ ಮಾಡಲಾಗುತ್ತಿದೆ ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಅರಣ್ಯ ಇಲಾಖೆಯಿಂದ ಕೈಗೊಂಡಿರುವ ಕಾಮಗಾರಿಗಳು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೭೯೩ (೯೦೩) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯ ಎಲ್ಲಾ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಕಳೆದ ೨ ವರ್ಷಗಳಲ್ಲಿ ಅರಣ್ಯ ಇಲಾಖೆಯಿಂದ ಕೈಗೊಂಡಿರುವ ಕಾಮಗಾರಿಗಳು ಎಷ್ಟು ; (ವಿಧಾನಸಭಾ ಕ್ಷೇತ್ರವಾರು, ತಾಲ್ಲೂಕುವಾರು, ವರ್ಷವಾರು, ಕಾಮಗಾರಿವಾರು ವಿವರ ನೀಡುವುದು)



(ಆ) ಸದರಿ ಕಾಮಗಾರಿಗಳಿಗೆ ಬಿಡುಗಡೆ ಮಾಡಲಾಗಿರುವ ಹಣ ಎಷ್ಟು; (ಕಾಮಗಾರಿವಾರು ವಿವರ ನೀಡುವುದು)

(ಇ) ಸದರಿ ಕಾಮಗಾರಿಗಳಿಗೆ ಖರ್ಚಾಗಿರುವ ಹಣ ಎಷ್ಟು ; ಉಳಿಕೆಯಾದ ಮೊತ್ತ ಎಷ್ಟು ; (ಕಾಮಗಾರಿವಾರು, ವರ್ಷವಾರು ಮಾಹಿತಿ ನೀಡುವುದು)

(ಈ) ಮುಕ್ತಾಯಗೊಂಡ ಕಾಮಗಾರಿಗಳ ಸಂಖ್ಯೆ ಎಷ್ಟು ; ಬಾಕಿ ಇರುವ ಕಾಮಗಾರಿಗಳ ಸಂಖ್ಯೆ ಎಷ್ಟು (ವಿವರ ನೀಡುವುದು)

(ಉ) ಪ್ರಗತಿಯಲ್ಲಿರುವ ಕಾಮಗಾರಿಗಳು ಎಷ್ಟು ; ಯಾವ ಕಾಲಮಿತಿಯೊಳಗೆ ಮುಕ್ತಾಯಗೊಳಿಸಲಾಗುವುದು ; ಇದಕ್ಕೆ ರೂಪಿಸಲಾಗಿರುವ ರೂಪರೇಷೆಗಳು ಯಾವುವು ? (ವಿವರ ನೀಡುವುದು)

## ಬೀದರ್ ಜಿಲ್ಲೆಯಲ್ಲಿ ಕಡತ ನಿರ್ವಹಣೆ ಕಾರ್ಯ ಯೋಜನೆ.

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೭೯೪ (೯೦೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೪ನೇ ವರ್ಷದ ಅಂತ್ಯದಲ್ಲಿ "ಕಡತ ವಿಲೇವಾರಿ" ತಿಂಗಳೆಂಬುದಾಗಿ ಸರ್ಕಾರವು ಘೋಷಿಸಿದ್ದಾಗ್ಯೂ ಹಲವಾರು ಜಿಲ್ಲೆಗಳಲ್ಲಿ ಕಡತ ವಿಲೇವಾರಿ ಪ್ರಗತಿ ಆಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬೀದರ್ ಜಿಲ್ಲೆಗಳಲ್ಲಿ ೨೦೧೪ನೇ ಅಂತ್ಯದ ಸಾಲಿನವರೆಗೆ ಎಲ್ಲಾ ತಾಲ್ಲೂಕು ಕಛೇರಿಯಿಂದ ಅಸಿಸ್ಟೆಂಟ್ ಕಮೀಷನರ್‌ರವರ ಕಛೇರಿಗೆ ಕಳುಹಿಸಿರುವ ಸಾರ್ವಜನಿಕ ಉಪಯೋಗಕ್ಕೆ ಸಂಬಂಧಿಸಿದ ಮತ್ತು ಜಮೀನಿನ ಕಡತಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಸಹಾಯಕ ಕಮೀಷನರ್ ಕಛೇರಿಯಿಂದ ಜಿಲ್ಲಾಧಿಕಾರಿಯವರ ಕಛೇರಿಗೆ ಶಿಫಾರಸ್ಸು ಮಾಡಿ ಕಳುಹಿಸಲಾದ ಕಡತಗಳ ಸಂಖ್ಯೆ ಎಷ್ಟು ; (ಕಡತಗಳ ಸಂಖ್ಯೆಯೊಂದಿಗೆ ತಾಲ್ಲೂಕುವಾರು, ವಿಷಯವಾರು ಸಂಪೂರ್ಣ ಮಾಹಿತಿ ನೀಡುವುದು)

(ಈ) ಬೀದರ್ ಜಿಲ್ಲೆಗಳಲ್ಲಿ ೦೫-೦೬-೨೦೧೪ ರಿಂದ ೧೦-೧೨-೨೦೧೪ ರವರೆಗೆ ತಾಲ್ಲೂಕು ಕಛೇರಿಯಿಂದ ಸಹಾಯಕ ಕಮೀಷನರ್‌ರವರ ಕಛೇರಿಗೆ ಕಳುಹಿಸಿರುವ ಆರ್.ಆರ್.ಟಿ. ಕಡತಗಳೆಷ್ಟು ; ಸದರಿ ಕಡತಗಳಿಗೆ ಸಹಾಯಕ ಆಯುಕ್ತರ ಆದೇಶದೊಂದಿಗೆ ಹಿಂದಿರುಗಿಸಿರುವ ಕಡತಗಳೆಷ್ಟು ? (ತಾಲ್ಲೂಕುವಾರು ಮಾಹಿತಿ ಒದಗಿಸುವುದು)

## ಸರ್ಕಾರಿ ಜಮೀನಿನ ಸರ್ವೆ ಹಾಗೂ ಪೋಡಿ ಮಾಡುವಲ್ಲಿನ ವಿಳಂಬ.

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೭೯೫ (೯೦೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯ ವ್ಯಾಪ್ತಿಯಲ್ಲಿರುವ ಸರ್ಕಾರಿ ಜಮೀನಿನ ವಿಸ್ತೀರ್ಣ ಎಷ್ಟು ; (ವಿವರ ನೀಡುವುದು)



(ಆ) ಈ ಜಿಲ್ಲೆಯ ವ್ಯಾಪ್ತಿಯಲ್ಲಿ ಖಾಸಗಿ ವ್ಯಕ್ತಿಗಳು, ಸಂಸ್ಥೆಗಳು, ಸ್ವಯಂ ಸೇವಾ ಸಂಸ್ಥೆಗಳಿಗೆ ಪರಭಾರೆ ಹಾಗೂ ಗುತ್ತಿಗೆ (ಲೀಸ್) ರೂಪದಲ್ಲಿ ನೀಡಿರುವ ಸರ್ಕಾರಿ ಜಮೀನು ಎಷ್ಟು ; (ಎಷ್ಟು ವರ್ಷಕ್ಕೆ ನೀಡಲಾಗಿದೆ ಎಂಬ ಮಾಹಿತಿ ತಾಲ್ಲೂಕುವಾರು ನೀಡುವುದು)

(ಇ) ಈ ಜಿಲ್ಲೆಯ ವ್ಯಾಪ್ತಿಯಲ್ಲಿ ಜಮೀನಿನ ಸರ್ವೆ ಕಾರ್ಯಗಳು ಮಂದಗತಿಯಲ್ಲಿ ಸಾಗಿದ್ದು, ಎಷ್ಟು ಪೋಡಿಗಳು ಉಳಿದಿದೆ ; ಜಿಲ್ಲೆಯಲ್ಲಿ ಸರ್ವೆಯರ್‌ಗಳು ಸರಿಯಾಗಿ ಸರ್ವೆ ಕಾರ್ಯಗಳಲ್ಲಿ ತೊಡಗಿಸಿಕೊಳ್ಳದೆ ಇರುವುದರಿಂದ ಉಂಟಾಗಿರುವ ತೊಂದರೆಗಳ ಬಗ್ಗೆ ಸರ್ಕಾರವು ತೆಗೆದುಕೊಂಡ ಕ್ರಮಗಳೇನು ? (ವಿವರ ನೀಡುವುದು)

## ಸೌಲಭ್ಯಗಳಿಂದ ವಂಚಿತರಾಗಿರುವ ಕಟ್ಟಡ ಕಾರ್ಮಿಕರು.

**ಶ್ರೀ ಬಿ.ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೭೯೬ (೯೦೫) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಟ್ಟಡ ಕಾರ್ಮಿಕರಿಗೆ ಸರ್ಕಾರದಿಂದ ಸಿಗುತ್ತಿರುವ ಸೌಲಭ್ಯಗಳ ಮಾಹಿತಿ ಸಿಗದೆ ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಸೌಲಭ್ಯಗಳಿಂದ ವಂಚಿತರಾಗುತ್ತಿರುವ ಕಟ್ಟಡ ಕಾರ್ಮಿಕರನ್ನು ಗುರುತಿಸಿ ಜಾಗೃತಿ ಮೂಡಿಸುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಸರ್ಕಾರದಿಂದ ಸಿಗುವ ಸೌಲಭ್ಯಗಳೇನು ; (ಆದೇಶದೊಂದಿಗೆ ಪೂರ್ಣ ಮಾಹಿತಿ ನೀಡುವುದು)

(ಈ) ೨೦೧೩–೧೪ನೇ ಸಾಲಿನಲ್ಲಿ ಮಂಡ್ಯ ಜಿಲ್ಲೆಯಲ್ಲಿ ಸೌಲಭ್ಯವನ್ನು ಪಡೆದುಕೊಂಡ ಕಾರ್ಮಿಕರ ಸಂಖ್ಯೆ ಎಷ್ಟು (ತಾಲ್ಲೂಕುವಾರು ಮಾಹಿತಿ ನೀಡುವುದು)

## ಕಾವೇರಿ ಕೊಳ್ಳದ ಯೋಜನೆಗಳ ಆಧುನೀಕರಣ.

**ಶ್ರೀ ಬಿ.ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೭೯೭ (೯೦೬) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಶ್ವೇಶ್ವರಯ್ಯ ನಾಲಾ ಜಾಲದ ಆಧುನೀಕರಣ ಕಾಮಗಾರಿಗಳನ್ನು ೨೦೧೪–೧೫ನೇ ಸಾಲಿನ ಆಯವ್ಯಯ ಪತ್ರದಲ್ಲಿ ನೀಡಿದ್ದ ಭರವಸೆಯಂತೆ ಪೂರ್ಣಗೊಳಿಸಲಾಗಿದೆಯೇ ; ಪೂರ್ಣಗೊಳಿಸಿದ್ದಲ್ಲಿ, ಕಾಮಗಾರಿಗಳ ವಿವರ, ಪ್ರತಿಯೊಂದು ಕಾಮಗಾರಿಗೆ ಮಂಜೂರು ಮಾಡಿದ ಅನುದಾನ ಎಷ್ಟು; ಆ ಪೈಕಿ ಬಿಡುಗಡೆ ಮಾಡಿದ ಅನುದಾನ ಎಷ್ಟು; ಸದರಿ ಕಾಮಗಾರಿಗಳಿಗೆ ಮಾಡಲಾದ ವೆಚ್ಚ ಎಷ್ಟು; ಕಾಮಗಾರಿಗಳ ಪ್ರಗತಿ ಯಾವ ಹಂತದಲ್ಲಿದೆ; (ಕಾಮಗಾರಿವಾರು ವಿವರ ನೀಡುವುದು)

(ಆ) ಕಾವೇರಿ ಕೊಳ್ಳದ ಯೋಜನೆಗಳನ್ನು ಆಧುನೀಕರಿಸಲು ೫೦೦ ಕೋಟಿ ರೂ.ಗಳನ್ನು ಒದಗಿಸುವುದಾಗಿ ೨೦೧೩–೧೪ನೇ ಸಾಲಿನ ಆಯವ್ಯಯದಲ್ಲಿ ಹೇಳಿದ್ದು, ಈ ಪ್ರಕಾರ ಯಾವ ಯಾವ ಯೋಜನೆಗಳನ್ನು ಆಧುನೀಕರಿಸಲಾಗಿದೆ; ವೆಚ್ಚ ಮಾಡಲಾಗಿರುವ ಹಣ ಎಷ್ಟು;

(ಇ) ಭಾರಿ ನೀರಾವರಿ ಮತ್ತು ಜಲಸಂಪನ್ಮೂಲ ಇಲಾಖೆಯಲ್ಲಿ ಖಾಲಿ ಬಿದ್ದರುವ ಎಂಜಿನಿಯರ್‌ಗಳು ಮತ್ತು ಇತರೆ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಇವುಗಳನ್ನು ಭರ್ತಿ ಮಾಡಲು ಕೈಗೊಂಡಿರುವ ಕ್ರಮಗಳೇನು?



## ಮಂಡ್ಯ ಜಿಲ್ಲೆಯ ಯಾವ ತಾಲ್ಲೂಕುಗಳ ಬರಪೀಡಿತ ತಾಲ್ಲೂಕುಗಳ ಬಗ್ಗೆ.

**ಶ್ರೀ ಬಿ.ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೭೯೮ (೯೦೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ವರ್ಷ ಮಂಡ್ಯ ಜಿಲ್ಲೆಯ ಯಾವ ಯಾವ ತಾಲ್ಲೂಕುಗಳಲ್ಲಿ ಮಳೆ ಬೆಳೆ ಇಲ್ಲದೆ ಬರಗಾಲ ಪರಿಸ್ಥಿತಿ ಉಂಟಾಗಿದೆ; ಯಾವ ಯಾವ ತಾಲ್ಲೂಕುಗಳನ್ನು ಬರಪೀಡಿತ ತಾಲ್ಲೂಕುಗಳೆಂದು ಘೋಷಿಸಲಾಗಿದೆ;

(ಆ) ಬರದಿಂದ ಉಂಟಾಗಿರುವ ಬೆಳೆ ಹಾನಿಯನ್ನು ಅಂದಾಜು ಮಾಡಲಾಗಿದೆಯೇ; ಬೆಳೆಹಾನಿಯ ಬಗೆಗೆ ರೈತರಿಗೆ ಪರಿಹಾರ ನೀಡಲಾಗಿದೆಯೇ; (ವಿವರ ಒದಗಿಸುವುದು)

(ಇ) ಜಿಲ್ಲೆಯಲ್ಲಿ ಕೈಗೊಂಡಿರುವ ಬರಪರಿಹಾರ ಕಾಮಗಾರಿಗಳು ಯಾವುವು; ಇದುವರೆಗೆ ಈ ಕಾಮಗಾರಿಗಳಿಗೆ ಮಾಡಿರುವ ವೆಚ್ಚ ಎಷ್ಟು? (ತಾಲ್ಲೂಕುವಾರು ವಿವರ ಒದಗಿಸುವುದು)

## ವನ್ಯ ಜೀವಿಗಳ ದಾಳಿಯಿಂದಾಗಿರುವ ಅನಾಹುತದ ಬಗ್ಗೆ.

**ಶ್ರೀ ಬಿ.ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೭೯೯ (೯೦೭) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಒಂದು ವರ್ಷದಲ್ಲಿ ಮಂಡ್ಯ ಜಿಲ್ಲೆಯಲ್ಲಿ ಚಿರತೆ ಆನೆ ಇತ್ಯಾದಿ ವನ್ಯ ಜೀವಿಗಳಿಂದ ಆಗಿರುವ ದಾಳಿ ಪ್ರಕರಣಗಳು ಎಷ್ಟು; ಮತ್ತು ಎಲ್ಲಿ ಇದರಿಂದ ಉಂಟಾಗಿರುವ ಮಾನವ

ಜಾನುವಾರುಗಳ ಜೀವಹಾನಿ ಬೆಳೆಹಾನಿ ಎಷ್ಟು; (ವಿವರ ಒದಗಿಸುವುದು)

(ಆ) ಈ ಬಗ್ಗೆ ಸೂಕ್ತವಾದ ಪರಿಹಾರವನ್ನು ನೀಡಲಾಗಿದೆಯೇ; (ವಿವರ ಒದಗಿಸುವುದು) ವನ್ಯ ಜೀವಿಗಳ ಹಾವಳಿಯನ್ನು ತಡೆಗಟ್ಟಲು ಕೈಗೊಂಡಿರುವ ಕ್ರಮಗಳೇನು;

(ಇ) ಮಂಡ್ಯ ಜಿಲ್ಲೆಯ ವ್ಯಾಪ್ತಿಯಲ್ಲಿರುವ ಅರಣ್ಯಗಳು ಯಾವುವು; ಈ ಅರಣ್ಯಗಳ ವಿಸ್ತೀರ್ಣ ಎಷ್ಟು; ಇವುಗಳ ಸಂರಕ್ಷಣೆ ಮತ್ತು ಅಭಿವೃದ್ಧಿಗೆ ಕಳೆದ ಮೂರು ವರ್ಷಗಳಲ್ಲಿ ಕೈಗೊಂಡಿರುವ ಕ್ರಮಗಳೇನು; ಇದಕ್ಕೆ ಖರ್ಚಾಗಿರುವ ಮೊತ್ತ ಎಷ್ಟು; (ವಿವರ ಒದಗಿಸುವುದು)

## ತೋಟಿ, ತಳವಾರರಿಗೆ ಸಂಬಳ ಹೆಚ್ಚಿಸುವ ಕುರಿತು.

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):–**

೮೦೦ (೯೦೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ತೋಟಿ, ತಳವಾರರ ಸಂಖ್ಯೆ ಎಷ್ಟು ;

(ಆ) ಇವರಿಗೆ ಸರ್ಕಾರದಿಂದ ಮಾಸಿಕವಾಗಿ ಕೊಡುವ ಸಂಬಳ ಎಷ್ಟು ;

(ಇ) ಇದೇ ಮಾದರಿಯಲ್ಲಿ ಪಟೇಲರಿಗೆ, ಶಾನುಭೋಗರಿಗೆ ಸರ್ಕಾರದಿಂದ ಮಾಸಿಕವಾಗಿ ಕೊಡುವ ಸಂಬಳ ಎಷ್ಟು ;

(ಈ) ತೋಟಿ, ತಳವಾರರಿಗೆ ಸಂಬಳ ಹೆಚ್ಚಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?



## ರಾಜ್ಯದ ಜಲ ಸಂಪನ್ಮೂಲಗಳ ಮಾಹಿತಿ.

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):–**

೮೦೧ (೯೧೦) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅಂದಾಜಿಸಲಾಗಿರುವ ಜಲ ಸಂಪನ್ಮೂಲಗಳು ಎಷ್ಟು ;

(ಆ) ಈ ಜಲ ಸಂಪನ್ಮೂಲಗಳಲ್ಲಿ ಶೇಖರಣಾ ಸಾಮರ್ಥ್ಯವಿರುವ ಅಣೆಕಟ್ಟುಗಳ ಸಂಖ್ಯೆ ಎಷ್ಟು ; ಎಷ್ಟು ಸಾಮರ್ಥ್ಯದ ನೀರನ್ನು ಶೇಖರಿಸಲಾಗುತ್ತಿದೆ ; (ಅಣೆಕಟ್ಟುವಾರು ವಿವರ ನೀಡುವುದು)

(ಇ) ಈ ಜಲ ಸಂಪನ್ಮೂಲಗಳಿಂದ ಎಷ್ಟು ಎಕರೆ ಭೂಮಿಯನ್ನು ನೀರಾವರಿಗೆ ಒಳಪಡಿಸಲಾಗಿದೆ ;(ಅಣೆಕಟ್ಟುವಾರು ಎಕರೆವಾರು ವಿವರ ನೀಡುವುದು)

(ಈ) ಇನ್ನೂ ಎಷ್ಟು ಪ್ರಮಾಣದ ನೀರನ್ನು ಬಳಸಿಕೊಳ್ಳಲು ಲಭ್ಯವಿರುತ್ತದೆ ;

(ಉ) ಲಭ್ಯವಿರುವ ಎಲ್ಲಾ ಜಲಸಂಪನ್ಮೂಲಗಳನ್ನು ಬಳಸಿಕೊಳ್ಳಲು ಸರ್ಕಾರಕ್ಕೆ ತಗಲುವ ವೆಚ್ಚವೆಷ್ಟು ; ಇದರಿಂದ ಎಷ್ಟು ಕೃಷಿ ಭೂಮಿಯು ನೀರಾವರಿಗೆ ಒಳಪಡುತ್ತದೆ ? (ಮಾಹಿತಿ ನೀಡುವುದು)

## ನೀಲಗಿರಿ ಬೆಳೆಯನ್ನು ನಿಷೇಧಿಸುವ ಕುರಿತು.

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):–**

೮೦೨ (೯೧೨) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋಲಾರ–ಚಿಕ್ಕಬಳ್ಳಾಪುರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಲ್ಲಿ ಬೆಳೆದಿರುವ ನೀಲಗಿರಿ ಬೆಳೆಯ ವಿಸ್ತೀರ್ಣವೆಷ್ಟು ;

(ಆ) ಈ ಭಾಗದಲ್ಲಿ ಅಂತರ್ಜಲ ಪಾತಾಳಕ್ಕೆ ಇಳಿದಿದ್ದು, ಈ ನೀಲಗಿರಿ ಬೆಳೆಯಿಂದ ಅಂತರ್ಜಲವೃದ್ಧಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ಮೂರು ಜಿಲ್ಲೆಗಳಲ್ಲಿ ಅರಣ್ಯ ಇಲಾಖೆ ಮತ್ತು ರೈತರು ನೀಲಗಿರಿ ಬೆಳೆ ಬೆಳೆಯುವುದನ್ನು ನಿಷೇಧಿಸಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು ;

(ಈ) ಇನ್ನು ಎಷ್ಟು ಪ್ರಮಾಣದ ನೀರನ್ನು ಬಳಸಿಕೊಳ್ಳಲು ಲಭ್ಯವಿರುತ್ತದೆ ?

## ಕೈಗಾರಿಕಾ ತರಬೇತಿ ಕೇಂದ್ರಗಳಿಗೆ ಅನುದಾನ.

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):–**

೮೦೩ (೯೧೧) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಕೈಗಾರಿಕಾ ತರಬೇತಿ ಕೇಂದ್ರಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಕೈಗಾರಿಕಾ ತರಬೇತಿ ಕೇಂದ್ರವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿ ಸರ್ಕಾರಿ ವೇತನಾನುದಾನಕ್ಕೆ ಒಳಪಡಲು ಅರ್ಹ ಹೊಂದಿರುವ ಖಾಸಗಿ ಕೈಗಾರಿಕಾ ತರಬೇತಿ ಕೇಂದ್ರಗಳ ಸಂಖ್ಯೆ ಎಷ್ಟು ಅವು ಯಾವುವು ;

(ಇ) ಅರ್ಹತೆ ಹೊಂದಿರುವ ಕೈಗಾರಿಕಾ ತರಬೇತಿ ಕೇಂದ್ರಗಳಿಗೆ ಅನುದಾನ ನೀಡಲು ಸರ್ಕಾರಕ್ಕೆ ಇರುವ ತೊಂದರೆ ಏನು ;

(ಈ) ಇದಕ್ಕೆ ತಗಲುವ ಅಂದಾಜು ವೆಚ್ಚವೆಷ್ಟು ; ಯಾವ ಕಾಲಮಿತಿಯೊಳಗೆ ಈ ತರಬೇತಿ ಕೇಂದ್ರಗಳನ್ನು ಅನುದಾನಕ್ಕೆ ಒಳಪಡಿಸಲಾಗುತ್ತದೆ ? (ವಿವರ ನೀಡುವುದು)



## ಕೆರೆಗಳ ದುಸ್ಥಿತಿ ಬಗ್ಗೆ.

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):–**

೮೦೪ (೯೧೩) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಣ್ಣ ನೀರಾವರಿ ಇಲಾಖಾ ವ್ಯಾಪ್ತಿಗೆ ಬರುವ ಕೆರೆಗಳ ಸಂಖ್ಯೆ ಎಷ್ಟು ;

(ಆ) ಈ ಕೆರೆಗಳ ನೀರಿನ ಶೇಖರಣಾ ಸಾಮರ್ಥ್ಯವೆಷ್ಟು ;

(ಇ) ಈ ಕೆರೆಗಳಲ್ಲಿ ಬಹಳ ದುಸ್ಥಿತಿಯಲ್ಲಿರುವ ಕೆರೆಗಳ ಸಂಖ್ಯೆ ಎಷ್ಟು ;

(ಈ) ಈ ದುಸ್ಥಿತಿಯಲ್ಲಿರುವ ಕೆರೆಗಳನ್ನು ಸುಸ್ಥಿತಿಗೆ ತರಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಇದಕ್ಕೆ ತಗಲುವ ಅಂದಾಜು ವೆಚ್ಚವೆಷ್ಟು )

(ಉ) ಈ ಕೆರೆ ಕಟ್ಟೆಗಳ ನಿರ್ವಹಣೆಗಾಗಿ ಕೆಲಸ ನಿರ್ವಹಿಸುತ್ತಿರುವ ನೀರಗಂಟಿಗರ ಸಂಖ್ಯೆ ಎಷ್ಟು ;

(ಊ) ಈ ನೀರುಗಂಟಿಗರಿಗೆ ಸರ್ಕಾರದಿಂದ ಮಾಸಿಕವಾಗಿ ನೀಡಲಾಗುತ್ತಿರುವ ಸಂಭಾವನೆ ಎಷ್ಟು ?

## ವರಾಹಿ ನೀರಾವರಿ ಯೋಜನೆಯಲ್ಲಿ ಕೆ.ಸಿ.ಸಿ., ಮೂಲಕ ನಿರ್ವಹಿಸಲಾದ ಕಾಮಗಾರಿಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೦೫ (೯೧೫) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ನೀರಾವರಿ ನಿಗಮದ ವರಾಹಿ ನೀರಾವರಿ ಯೋಜನೆಯಲ್ಲಿ ಕರ್ನಾಟಕ ಕನ್‌ಸ್ಟ್ರಕ್ಷನ್ ಕಾರ್ಪೋರೇಶನ್

(KCC) ಮೂಲಕ ನಿರ್ವಹಿಸಲಾದ ಕಾಮಗಾರಿಗಳು ಯಾವುವು; ಈ ಕಾಮಗಾರಿಗಳಿಗೆ ತಗುಲಿದ ಅಂದಾಜು ಮೊತ್ತವೆಷ್ಟು; ಟೆಂಡರ್ ಕರಾರು ಮೊತ್ತವೆಷ್ಟು; ಪಾವತಿಸಲಾದ ಮೊತ್ತವೆಷ್ಟು; ಈ ಕಾಮಗಾರಿ ಪ್ರಾರಂಭಗೊಂಡು ಮುಕ್ತಾಯಗೊಂಡ ಅವಧಿ ಯಾವುದು; ಕಾಮಗಾರಿಯನ್ನು ನಿರ್ವಹಿಸಿದ ಅಭಿಯಂತರರು ಯಾರು ಮತ್ತು ಅವರ ಹುದ್ದೆ ಏನು; ಈ ಸಂದರ್ಭದಲ್ಲಿ ಕರ್ನಾಟಕ ಕನ್‌ಸ್ಟ್ರಕ್ಷನ್ ಕಾರ್ಪೋರೇಶನ್‌ನ ವ್ಯವಸ್ಥಾಪಕ ನಿರ್ದೇಶಕರು ಯಾರು ; (ಕಾಮಗಾರಿವಾರು ವಿವರ ನೀಡುವುದು)

(ಆ) ಸದರಿ ಯೋಜನೆಯಲ್ಲಿ ಕರ್ನಾಟಕ ಕನ್‌ಸ್ಟ್ರಕ್ಷನ್ ಕಾರ್ಪೋರೇಶನ್ (KCC) ನಿಂದ ನಿರ್ವಹಿಸಲಾದ ಕಾಮಗಾರಿಗಳ ನಿರ್ವಹಣೆಯನ್ನು ಯಾರಿಗೆ ಹಸ್ತಾಂತರಿಸಲಾಗಿದೆ; ಅವುಗಳ ನಿರ್ವಹಣೆಗೆ ಪ್ರತೀ ವರ್ಷ ತಗಲುವ ವೆಚ್ಚವೆಷ್ಟು ; (ವರ್ಷವಾರು, ಕಾಮಗಾರಿವಾರು ವಿವರ ನೀಡುವುದು)

(ಇ) ಸದರಿ ಯೋಜನೆಯಡಿ ನಿರ್ವಹಿಸಲಾದ ಕಾಮಗಾರಿಗಳಿಂದ ಎಷ್ಟು ರೈತ ಕುಟುಂಬಗಳಿಗೆ ಎಷ್ಟು ಎಕರೆ ಕೃಷಿ ಭೂಮಿಗೆ ನೀರುಣಿಸಲಾಗಿದೆ ? (ಕಾಮಗಾರಿವಾರು ವಿವರ ನೀಡುವುದು)

## ರಾಜ್ಯದಲ್ಲಿ ಕಾರ್ಮಿಕ ಇಲಾಖೆಯ ವಿವಿಧ ಯೋಜನೆಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೮೦೬ (೯೧೮) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಾರ್ಮಿಕ ಇಲಾಖೆಯು ಮೂಲಕ ಅನುಷ್ಠಾನಗೊಳ್ಳುತ್ತಿರುವ ಯೋಜನೆಗಳು ಯಾವುವು ; ಅವುಗಳಿಗಿರುವ ಮಾನದಂಡವೇನು ; (ಯೋಜನೆವಾರು ವಿವರ ನೀಡುವುದು)



(ಆ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಕಾರ್ಮಿಕ ಇಲಾಖೆಯ ವಿವಿಧ ಯೋಜನೆಗಳ ಮೂಲಕ ಕಾರ್ಮಿಕರಿಗೆ ನೀಡಲಾದ ಪರಿಹಾರದ ಒಟ್ಟು ಮೊತ್ತವೆಷ್ಟು ; (ಜಿಲ್ಲಾವಾರು, ವರ್ಷವಾರು ವಿವರ ನೀಡುವುದು)

(ಇ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ವಿವಿಧ ಜಿಲ್ಲೆಗಳಲ್ಲಿ ಬಾಲ ಕಾರ್ಮಿಕರನ್ನು ದುಡಿಸಿಕೊಳ್ಳುತ್ತಿರುವ ಕುರಿತು ಹಾಗೂ ಕನಿಷ್ಠ ಕೂಲಿ ನೀಡದ ಕುರಿತು ದಾಖಲಾದ ಪ್ರಕರಣಗಳ ಸಂಖ್ಯೆ ಎಷ್ಟು ? (ಜಿಲ್ಲಾವಾರು ವರ್ಷವಾರು ವಿವರ ನೀಡುವುದು)

## ಉಡುಪಿ ಜಿಲ್ಲೆಯಲ್ಲಿನ ಕಂದಾಯ ಅದಾಲತ್‌ಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೮೦೭ (೯೧೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ಜಿಲ್ಲೆಯಲ್ಲಿ ಕಂದಾಯ ಅದಾಲತ್ತನ್ನು ಯಾವಾಗ ಪ್ರಾರಂಭ ಮಾಡಲಾಯಿತು; ಈವರೆವಿಗೂ ನಡೆಸಲಾದ ಕಂದಾಯ ಅದಾಲತ್‌ಗಳ ಸಂಖ್ಯೆ ಎಷ್ಟು ; (ಹೋಬಳಿವಾರು ವಿವರ ನೀಡುವುದು)

(ಆ) ಉಡುಪಿ ಜಿಲ್ಲೆಯಲ್ಲಿ ನಡೆಸಲಾದ ಕಂದಾಯ ಅದಾಲತ್‌ಗಳಿಗೆ ಒಟ್ಟು ಬಂದ ಅರ್ಜಿಗಳ ಸಂಖ್ಯೆ ಎಷ್ಟು; ಇತ್ಯರ್ಥಪಡಿಸಲಾದ ಅರ್ಜಿಗಳ ಸಂಖ್ಯೆ ಎಷ್ಟು; ಇತ್ಯರ್ಥ ಪಡಿಸಲು ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು; ವಿಲೆ ಇಡಲಾದ ಅರ್ಜಿಗಳ

ಸಂಖ್ಯೆ ಎಷ್ಟು ; (ಹೋಬಳಿವಾರು ಗ್ರಾಮವಾರು ವಿವರ ನೀಡುವುದು)

(ಇ) ಕಂದಾಯ ಅದಾಲತ್‌ಗಳಿಂದ ರೈತರು ಮತ್ತು ಸಾರ್ವಜನಿಕರ ಅರ್ಜಿಗಳಿಗೆ ಸೂಕ್ತ ಪರಿಹಾರ ದೊರಕದೆ ಇರುವುದನ್ನು ಸರ್ಕಾರ ಗಮನಿಸಿದೆಯೇ; ಗಮನಿಸಿದ್ದಲ್ಲಿ, ಇದನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ವರಾಹಿ ನೀರಾವರಿ ಯೋಜನೆಗೆ ಮಂಜೂರಾದ ಅರಣ್ಯ ಭೂಮಿ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೮೦೮ (೯೧೭) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವರಾಹಿ ನೀರಾವರಿ ಯೋಜನೆಗೆ ಕೇಂದ್ರ ಪರಿಸರ ಮತ್ತು ಅರಣ್ಯ ಇಲಾಖೆಯ ಅನುಮತಿ ಪಡೆದು ಬಿಡುಗಡೆಗೊಳಿಸಲಾದ ಒಟ್ಟು ಅರಣ್ಯ ಭೂಮಿ ಎಷ್ಟು ; (ಪ್ರತಿ ಒದಗಿಸುವುದು)

(ಆ) ವರಾಹಿ ನೀರಾವರಿ ಯೋಜನಾ ಪ್ರದೇಶದ ಹೊರಿಯಟ್ಟೆಯಲ್ಲಿರುವ ಖಾಸಗಿ ವಿದ್ಯುತ್ ಉತ್ಪದನಾ ಘಟಕ ಸ್ಥಾಪಿಸಲು ಕೇಂದ್ರ ಪರಿಸರ ಮತ್ತು ಅರಣ್ಯ ಇಲಾಖೆಯ ಅನುಮತಿ ಪಡೆದು ಬಿಡುಗಡೆಗೊಳಿಸಲಾದ ಒಟ್ಟು ಅರಣ್ಯ ಭೂಮಿ ಎಷ್ಟು ; (ಪ್ರತಿ ಒದಗಿಸುವುದು)

(ಇ) ವರಾಹಿ ನೀರಾವರಿ ಯೋಜನಾ ಪ್ರದೇಶದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಖಾಸಗಿ ವಿದ್ಯುತ್ ಉತ್ಪಾದನಾ ಘಟಕದಿಂದ ಉತ್ಪಾದಿಸಲ್ಪಟ್ಟ ವಿದ್ಯುತ್ತನ್ನು ಹೊರಿಯಟ್ಟೆಯಿಂದ ಹೊಸಂಗಡಿಯ



ಕೆ.ಪಿ.ಸಿ.ಗೆ ಪ್ರಸರಿಸಲು ವಿದ್ಯುತ್ ಲೈನ್ ನಿರ್ಮಾಣಕ್ಕೆ ಕೇಂದ್ರ ಪರಿಸರ ಮತ್ತು ಅರಣ್ಯ ಇಲಾಖೆಯ ಅನುಮತಿ ಪಡೆದು ಬಿಡುಗಡೆಗೊಳಿಸಲಾದ ಒಟ್ಟು ಅರಣ್ಯ ಭೂಮಿ ಎಷ್ಟು ? (ಪ್ರತಿ ಒದಗಿಸುವುದು)

## ಕಟ್ಟಡ ಕಾರ್ಮಿಕ ಕಲ್ಯಾಣ ನಿಧಿ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೦೯ (೯೧೯) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಗ್ರಾಮ ಪಂಚಾಯತ್‌ಗಳು ಮತ್ತು ನಗರಾಡಳಿತ ಸಂಸ್ಥೆಗಳ ಮೂಲಕ ವಸೂಲಾಗಿ ಇಲಾಖೆಗೆ ಜಮೆ ಮಾಡಿದ "ಕಟ್ಟಡ ಕಾರ್ಮಿಕ ಕಲ್ಯಾಣ ನಿಧಿಯ" ಒಟ್ಟು ಮೊತ್ತವೆಷ್ಟು ; ( ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಅ) ಸದರಿ ವಸೂಲಿ ಮಾಡಿದ ನಿಧಿಯನ್ನು ಸಂಸ್ಥೆಗಳು ಇಲಾಖೆಗೆ ನಿಯಮಿತವಾಗಿ ಪಾವತಿಸುತ್ತಿದ್ದಾರೆಯೇ; ಇಲ್ಲವಾದಲ್ಲಿ, ಈ ಬಗ್ಗೆ ಕೈಗೊಂಡ ಕ್ರಮವೇನು ;

(ಇ) ಸ್ಥಳೀಯಾಡಳಿತಗಳು ಕಾರ್ಮಿಕ ಕಲ್ಯಾಣ ನಿಧಿಯನ್ನು ಸಂಗ್ರಹಿಸುತ್ತಿದ್ದರೂ, ಸಂಗ್ರಹವಾದ ಒಟ್ಟು ಮೊತ್ತದಲ್ಲಿ ಶೇ.೫೦ ರಷ್ಟು ಸ್ಥಳೀಯ ಸಂಸ್ಥೆಗಳು ವಿನಿಯೋಗಿಸಲು ರಾಜ್ಯ ಸರ್ಕಾರವನ್ನು ಕೋರುತ್ತಿದ್ದು, ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ; ಈ ಬಗ್ಗೆ ಸರ್ಕಾರದ ನಿಲುವೇನು ;

(ಈ) ನ್ಯಾಯ ಸಮ್ಮತವಾದ ಈ ಬೇಡಿಕೆಯನ್ನು ಸರ್ಕಾರ ಯಾವ ಹಂತದಲ್ಲಿ ಯಾವ ರೀತಿಯಲ್ಲಿ ಬಗೆಹರಿಸಲಿದೆ ? (ವಿವರ ನೀಡುವುದು)

## ಮೀನುಗಾರಿಕೆ ಯಾಂತ್ರಿಕ ದೋಣಿಗಳಿಗೆ ನೀಡುತ್ತಿರುವ ಸಾಧ್ಯತಾ ಪತ್ರ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೧೦ (೯೨೨) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೀನುಗಾರಿಕಾ ಯಾಂತ್ರಿಕ ದೋಣಿಗಳಿಗೆ ನೀಡುತ್ತಿರುವ ಸಾಧ್ಯತಾ ಪತ್ರವನ್ನು ಯಾವ ಮಾನದಂಡದಲ್ಲಿ ನೀಡಲಾಗುವುದು ;

(ಆ) ಪ್ರಸ್ತುತ ವರ್ಷದಲ್ಲಿ ಆ ಪೈಕಿ ಅರ್ಜಿದಾರರಿಗೆ ಎಷ್ಟು ಮಂದಿ ಸಾಧ್ಯತಾ ಪತ್ರಕ್ಕೆ ಅರ್ಜಿ ಸಲ್ಲಿಸಿದ್ದಾರೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ಇಲ್ಲಿಯವರೆಗೆ ಎಷ್ಟು ಸಾಧ್ಯತಾ ಪತ್ರವನ್ನು ನೀಡಲಾಗಿದೆ; ಹಾಗೂ ಎಷ್ಟು ಅರ್ಜಿಯನ್ನು ತಿರಸ್ಕರಿಸಲಾಗಿದೆ ; (ಜಿಲ್ಲಾವಾರು–ಫಲಾನುಭವಿವಾರು ವಿವರ ನೀಡುವುದು)

(ಈ) ಸಾಧ್ಯತಾ ಪತ್ರ ನೀಡುವಾಗ ಫಲಾನುಭವಿಗಳ ಅರ್ಹತೆಯ ಮಾನದಂಡ ಯಾವುದು; (ವಿವರ ನೀಡುವುದು)

(ಉ) ಅರ್ಜಿಯ ಅಂತಿಮ ಸ್ವರೂಪದ ಪ್ರಕಟಣೆ ಹೇಗೆ ? (ವಿವರ ನೀಡುವುದು)



## ಅಮಾಸೆ ಬೈಲು ಮೀನು ಮಾರುಕಟ್ಟೆ ಕಟ್ಟಡ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೧೧ (೯೨೦) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕುಂದಾಪುರ ತಾಲ್ಲೂಕು ಅಮಾಸೆ ಬೈಲು ಗ್ರಾಮ ಪಂಚಾಯತ್ ವ್ಯಾಪ್ತಿಯ ಮೀನು ಮಾರುಕಟ್ಟೆ ಕೇಂದ್ರದ ಕಟ್ಟಡಕ್ಕೆ ಮಂಜೂರಾದ ಹಣವೆಷ್ಟು ;

(ಆ) ಯಾವ ಇಲಾಖೆ ಕಾಮಗಾರಿ ಕೈಗೆತ್ತಿಗೊಂಡಿದೆ; ಮೀನು ಮಾರುಕಟ್ಟೆಯ ಒಟ್ಟು ಅಂದಾಜು ಮೊತ್ತವೆಷ್ಟು ;

(ಇ) ಸದರಿ ಕಾಮಗಾರಿ ಅಪೂರ್ಣವಾಗಿರಲು ಕಾರಣವೇನು ;

(ಈ) ಸದರಿ ಮೀನು ಮಾರುಕಟ್ಟೆ ಕೇಂದ್ರದ ಕಾಮಗಾರಿಯನ್ನು ಪುನಃ ಪ್ರಾರಂಭಿಸಲಾಗುವುದು ಯಾವಾಗ ? (ವಿವರ ನೀಡುವುದು)

## ದೂರಗಾಮಿ ಮತ್ತು ವ್ಯವಸ್ಥಿತ ಯೋಜನೆಯ ಮೂಲಕ ಜಲಸಾರಿಗೆ ಅಭಿವೃದ್ಧಿ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೧೨ (೯೨೧) ಮಾನ್ಯ ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಒಳನಾಡು ಜಲ ಸಾರಿಗೆಯ ಮೂಲಕ ಪ್ರವಾಸೋದ್ಯಮ ಯೋಜನೆ ರೂಪಿಸುವ ಉದ್ದೇಶ ಸರ್ಕಾರಕ್ಕಿದೆಯೇ ;

(ಆ) ಜಲಸಾರಿಗೆಯ ಪ್ರಯಾಣವನ್ನು ಉತ್ತೇಜಿಸಲು ಈಗಿರುವ ವ್ಯವಸ್ಥೆ ಮತ್ತು ಯೋಜನೆಗಳು ಯಾವುವು; ಅಭಿವೃದ್ಧಿ ಪಡಿಸಲು ಉದ್ದೇಶಿಸಿರುವ ಜಲ ಮಾರ್ಗಗಳಾವುವು ; (ಜಿಲ್ಲಾವಾರು ವಿವರ ನೀಡುವುದು)

(ಇ) ದೂರಗಾಮಿ ಮತ್ತು ವ್ಯವಸ್ಥಿತ ಯೋಜನೆಯ ಮೂಲಕ ಜಲಸಾರಿಗೆ ಅಭಿವೃದ್ಧಿಪಡಿಸಿದಲ್ಲಿ ಪ್ರವಾಸೋದ್ಯಮದ ಜೊತೆ ಜೊತೆಗೆ, ರಸ್ತೆ ಸಾರಿಗೆಗಿಂತ ಕಡಿಮೆ ವೆಚ್ಚದ ದರದಲ್ಲಿ ಪ್ರಯಾಣಕ್ಕೆ ಅವಕಾಶವಾಗಲಿದೆ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಬಗ್ಗೆ ಸರ್ಕಾರದ ಮುಂದಿನ ಯೋಜನೆಗಳಾವುವು ? (ವಿವರ ನೀಡುವುದು)

## ಕೈಮಗ್ಗ ನೇಕಾರರಿಗೆ ಪರಿವರ್ತನ ದರ ಹೆಚ್ಚಿಸುವ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೮೧೩ (೯೨೭) ಮಾನ್ಯ ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೈಮಗ್ಗ ಅಭಿವೃದ್ಧಿ ನಿಗಮದಲ್ಲಿ ಹಾಲಿ ಇರುವ ನೇಕಾರರ ಸಂಖ್ಯೆ ಎಷ್ಟು; ಎಲ್ಲಿ ; (ವಿವರ ನೀಡುವುದು)

(ಆ) ನಿಗಮದಲ್ಲಿ ಕೆಲಸ ಮಾಡುತ್ತಿರುವ ನೇಕಾರರಿಗೆ ಈಗ ನೀಡುತ್ತಿರುವ ಪರಿವರ್ತನ ದರಗಳೇನು ;

(ಇ) ನಿಗಮವು ಕೊಡುತ್ತಿರುವ ಪರಿವರ್ತನ ದರವು ಅತಿ ಕಡಿಮೆಯಾದುದೆಂದು ಸರ್ಕಾರವು ಭಾವಿಸಿಲ್ಲವೇ ;



(ಈ) ಈಗ ನೀಡುತ್ತಿರುವ ಪರಿವರ್ತನಾ ದರದ ಎರಡು ಪಟ್ಟು ಜಾಸ್ತಿ ಮಾಡಿ ನೇಕಾರರಿಗೆ ಅನುಕೂಲ ಮಾಡಿಕೊಡಲಾಗುವುದೆ; ಹಾಗಿದ್ದಲ್ಲಿ ಯಾವಾಗ ಮಾಡಲಾಗುವುದು ?

## ಜವಳಿ ಇಲಾಖೆಯಲ್ಲಿ ನೇಕಾರರಿಗೆ ಮೀಸಲಿಟ್ಟ ಹಣ ವಾಪಸ್ಸು ಹೋಗುತ್ತಿರುವ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೮೧೪ (೯೨೮) ಮಾನ್ಯ ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಐದು ವರ್ಷದಲ್ಲಿ ನೇಕಾರರಿಗೆ ಒದಗಿಸಲಾದ ಆಯ–ವ್ಯಯದ ಹಣ ವಾಪಸ್ಸು ಹೋಗಿರುವುದು ನಿಜವೇ ;

(ಆ) ಆಯ–ವ್ಯಯದಲ್ಲಿ ಒದಗಿಸಲಾಗಿದ್ದ ಹಣ ಎಷ್ಟು; ಆ ಪೈಕಿ ಎಷ್ಟು; ಬಳಕೆಯಾಗದೆ ಹಿಂತಿರುಗಿಸಿರುವ ಹಣವೆಷ್ಟು ; (ವಿವರ ನೀಡುವುದು)

(ಇ) ಇಲಾಖೆಯಲ್ಲಿ ಸಮಗ್ರವಾದ ಬಡ ನೇಕಾರರನ್ನು ಗುರುತಿಸಿ ಆಯ–ವ್ಯಯದಲ್ಲಿ ನೀಡಲಾದ ಹಣವನ್ನು ಖರ್ಚು ಮಾಡದಿರಲು ಕಾರಣವೇನು ;

(ಈ) ಪ್ರತಿ ವರ್ಷ ಯೋಜನೆ ಮಾಡುವಾಗ ಸಮರ್ಥ ನೇಕಾರ ಸಂಘಗಳು, ಎಲ್ಲಾ ಜಿಲ್ಲೆಯ ನೇಕಾರರ ಪ್ರಮುಖರನ್ನು ಸಭೆ ಕರೆದು ಆಯ–ವ್ಯಯದಲ್ಲಿ ನೀಡಿರುವ ಹಣವನ್ನು ಮುಂದಿನ ದಿನಗಳಲ್ಲಿ ಸಮರ್ಪಕವಾಗಿ ನೇಕಾರರ ಉದ್ಯೋಗಕ್ಕೆ ತಕ್ಕಂತೆ ವಿನಿಯೋಗಿಸಿಕೊಳ್ಳಲು ಕ್ರಮಕೈಗೊಳ್ಳಲಾಗುವುದೆ ;

(ಉ) ಮುಂದಿನ ಆಯ–ವ್ಯಯಕ್ಕೆ ವ್ಯತ್ಯಾಸವಾಗದಂತೆ ಪೂರ್ವಭಾವಿಯಾಗಿ ಕ್ರಮಕೈಗೊಳ್ಳಲಾಗುವುದೇ ?

## ಬಾಗಲಕೋಟೆ ಜಿಲ್ಲೆಯಲ್ಲಿ ಜವಳಿ ಪಾರ್ಕ್ ನಿರ್ಮಾಣ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೮೧೫ (೯೨೬) ಮಾನ್ಯ ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಾಗಲಕೋಟೆ ಜಿಲ್ಲೆಯಲ್ಲಿ ಅತೀ ಹೆಚ್ಚು ನೇಕಾರರು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಇದೂವರೆಗೂ ಜವಳಿ ಪಾರ್ಕ್ ನಿರ್ಮಾಣ ಮಾಡದಿರಲು ಕಾರಣವೇನು ;

(ಇ) ಈ ವರ್ಷದ ಆಯ–ವ್ಯಯದಲ್ಲಿ ಬಾಗಲಕೋಟೆ ಜಿಲ್ಲೆಗೆ ಉತ್ತಮವಾದ ಒಂದು ಜವಳಿ ಪಾರ್ಕ್ ನಿರ್ಮಾಣ ಮಾಡಲು ಘೋಷಣೆ ಮಾಡಲಾಗುವುದೆ ?

## ತುರುವೇಕೆರೆ ಕ್ಷೇತ್ರಕ್ಕೆ ಹೆಚ್ಚಿನ ಅನುದಾನ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೮೧೬ (೯೨೮) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುಮಕೂರು ಜಿಲ್ಲೆ ತುರುವೇಕೆರೆ ಕ್ಷೇತ್ರದಲ್ಲಿ ಸುಮಾರು ವರ್ಷಗಳಿಂದ ಜಲಸಂಪನ್ಮೂಲ ಇಲಾಖೆಗೆ ಸಂಬಂಧಿಸಿದ ಕಾಮಗಾರಿಗಳು ಕುಂಠಿತವಾಗಿರುವುದು ನಿಜವೇ; ಇದಕ್ಕೆ ಕಾರಣವೇನು ;



(ಆ) ಹಲವಾರು ವರ್ಷಗಳಿಂದ ಕೆಲವು ಕಾಮಗಾರಿಗಳು ಅಪೂರ್ಣಗೊಂಡಿದ್ದು ಈವರೆವಿಗೂ ಕೈಗೊಳ್ಳದಿರಲು ಕಾರಣವೇನು ; (ಕಾಮಗಾರಿವಾರು ವರ್ಷಾವಾರು ವಿವರ ನೀಡುವುದು)

(ಇ) ಚಾನಲ್‌ಗಳ ಮೇಲೆ ಹಾದು ಹೋಗುವ ರಸ್ತೆಗಳು ಹಾಗೂ ಸೇತುವೆಗಳು ಹಾಳಾಗಿದ್ದರೂ ಸರಿಪಡಿಸದಿರಲು ಕಾರಣವೇನು ;

(ಈ) ವಶಪಡಿಸಿಕೊಂಡಿರುವ ಜಮೀನುಗಳಿಗೆ ಇದುವರೆಗೆ ಹಣ ನೀಡದಿರಲು ಕಾರಣವೇನು ? (ಜಮೀನುದಾರರ ಹೆಸರು ಮತ್ತು ಮೊತ್ತದ ವಿವರ ನೀಡುವುದು)

## ರಾಜ್ಯದಲ್ಲಿ ಜವಳಿ ಪಾರ್ಕ್‌ಗಳ ಸ್ಥಾಪನೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೮೧೭ (೯೩೨) ಮಾನ್ಯ ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ನೇಕಾರರ ಅನುಕೂಲಕ್ಕೆ ಹಾಗೂ ಅವರಿಗೆ ಉದ್ಯೋಗವಕಾಶ ಒದಗಿಸಲು ರಾಜ್ಯದಲ್ಲಿ ಜವಳಿ ಪಾರ್ಕ್‌ಗಳನ್ನು ಸ್ಥಾಪಿಸಲು ಉದ್ದೇಶಿಸಲಾಗಿದೆಯೇ ;

(ಆ) ಹಾಗಿದ್ದಲ್ಲಿ ಯಾವ ಯಾವ ಪ್ರದೇಶಗಳಲ್ಲಿ ಜವಳಿ ಪಾರ್ಕ್‌ಗಳನ್ನು ಸ್ಥಾಪಿಸಲು ಸರ್ಕಾರ ನಿರ್ಧರಿಸಿದೆ ;

(ಇ) ಈ ಪಾರ್ಕ್‌ಗಳ ನಿರ್ಮಾಣಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಇಲ್ಲಿಯವರೆಗೆ ಜವಳಿ ಪಾರ್ಕ್‌ಗಳ ನಿರ್ಮಾಣಕ್ಕೆ ಸರ್ಕಾರ ಖರ್ಚು ಮಾಡಿರುವ ಅನುದಾನವೆಷ್ಟು;

(ಉ) ಜವಳಿ ಪಾರ್ಕ್‌ಗಳ ನಿರ್ಮಾಣದಿಂದ ಎಷ್ಟು ಜನರಿಗೆ ಉದ್ಯೋಗವಕಾಶ ದೊರೆತಿದೆ ;

(ಊ) ಜವಳಿ ಪಾರ್ಕ್‌ಗಳಿಂದ ಹಾಗೂ ಜವಳಿ ರಫ್ತಿನಿಂದ ರಾಜ್ಯಕ್ಕೆ ಬಂದ ಆದಾಯವೆಷ್ಟು ?

## ರಕ್ಷಿತಾರಣ್ಯಗಳಿಗೆ ಹೊಂದಿಕೊಂಡಿರುವ ರೈತರ ಜಮೀನು ವಶಪಡಿಸಿಕೊಳ್ಳುವ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೮೧೮ (೯೨೯) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಕ್ಷಿತಾರಣ್ಯಗಳಿಗೆ ಹೊಂದಿಕೊಂಡಿರುವ ರೈತರ ಜಮೀನುಗಳನ್ನು ವಶಪಡಿಸಿಕೊಳ್ಳಲು ಸುಪ್ರೀಂಕೋರ್ಟ್ ಹಾಗೂ ಹೈಕೋರ್ಟ್‌ಗಳು ಆದೇಶ ನೀಡಿವೆಯೆ ;

(ಆ) ಹಾಗಿದ್ದಲ್ಲಿ, ಈ ಆದೇಶಗಳನ್ನು ಜಾರಿಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಯಾವ ಕಾಲಮಿತಿಯೊಳಗೆ ಜಾರಿಗೊಳಿಸಲಾಗುವುದು ;

(ಇ) ಪಶ್ಚಿಮಘಟ್ಟ ಅರಣ್ಯ ವ್ಯಾಪ್ತಿಯನ್ನು ವಿಸ್ತರಿಸಲು ಸರ್ಕಾರ ಉದ್ದೇಶಿಸಿದೆಯೇ; ಹಾಗಿದ್ದಲ್ಲಿ ಈ ಕುರಿತು ಕೈಗೊಂಡ ಕ್ರಮಗಳೇನು ?

## ಕಾಡು ಪ್ರಾಣಿಗಳ ಹಾವಳಿ ನಿಯಂತ್ರಿಸುವ ಬಗ್ಗೆ.

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೮೧೯ (೯೩೧) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾಸನ ಜಿಲ್ಲೆ ಸಕಲೇಶಪುರ ತಾಲ್ಲೂಕಿನಲ್ಲಿ ಕಾಡು ಪ್ರಾಣಿಗಳ ಹಾವಳಿ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;



(ಆ) ಸಕಲೇಶಪುರ ತಾಲ್ಲೂಕಿನ ೭ ಗ್ರಾಮಗಳ ರೈತರು ಕೃಷಿ ಚಟುವಟಿಕೆಗಳನ್ನು ನಡೆಸಲು ಸಾಧ್ಯವಿಲ್ಲ ಎಂದು ಸರ್ಕಾರಕ್ಕೆ ತಿಳಿಸಿರುವುದು ನಿಜವೇ ;

(ಇ) ಹಾಗಿದ್ದಲ್ಲಿ, ಕಾಡುಪ್ರಾಣಿಗಳಿಂದ ಕೃಷಿ ಚಟುವಟಿಕೆಗಳಿಗೆ ಆಗಿರುವ ತೊಂದರೆ ಪರಿಹರಿಸಲು ವಾರ್ಷಿಕವಾಗಿ ಸರ್ಕಾರವು ಪರಿಹಾರ ಧನ ನೀಡಲು ಚಿಂತನೆ ನಡೆಸಿದೆಯೇ ;

(ಈ) ತೊಂದರೆಗೊಳಗಾದ ರೈತರು ತಮ್ಮ ಜಮೀನುಗಳನ್ನು ಸರಿಯಾದ ಪರಿಹಾರ ಕೊಟ್ಟರೆ ಹಸ್ತಾಂತರಿಸಲು ಸಿದ್ಧರಿರುವುದಾಗಿ ತಿಳಿಸಿರುವುದು ನಿಜವೇ ;

(ಉ) ಹಾಗಿದ್ದಲ್ಲಿ, ಈ ಗಂಭೀರ ಸಮಸ್ಯೆಗೆ ಸರ್ಕಾರ ಯಾವುದಾದರೂ ಪರಿಹಾರೋಪಾಯಗಳನ್ನು ರೂಪಿಸಿದೆಯೇ ;

(ಊ) ಹಾಸನ ಜಿಲ್ಲಾಧಿಕಾರಿಗಳು ರೈತರ ಪ್ರದೇಶದ ಜಮೀನುಗಳನ್ನು ಗುರುತಿಸಲು ಸರ್ವೇ ಕಾರ್ಯ ನಡೆಸಿರುವುದು ನಿಜವೇ ;

(ಋ) ಹಾಗಿದ್ದಲ್ಲಿ, ಅದು ಈಗ ಯಾವ ಹಂತದಲ್ಲಿದೆ ?

## ರಾಜ್ಯದಲ್ಲಿನ ಜೀತದಾಳುಗಳನ್ನು ಗುರುತಿಸುವುದು

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೨೦ (೯೪೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಜೀತದಾಳುಗಳನ್ನು ಗುರುತಿಸುವ ಸಮೀಕ್ಷಾ ಕಾರ್ಯ ಪ್ರಗತಿಯಲ್ಲಿದೆಯೇ; ಇದ್ದಲ್ಲಿ ಇದುವರೆಗೂ ಎಷ್ಟು ಜನ ಜೀತದಾಳುಗಳನ್ನು ಗುರುತಿಸಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಜೀತದಾಳುಗಳನ್ನು ಗುರುತಿಸಲು ಮತ್ತು ಅವರಿಗೆ ಪುನರ್ವಸತಿ ಕಲ್ಪಿಸಲು ಜಿಲ್ಲಾ ಮತ್ತು ಉಪವಿಭಾಗ ಮಟ್ಟದಲ್ಲಿ ಜಾಗೃತ ಸಮಿತಿಗಳನ್ನು ರಚಿಸಲಾಗಿದೆಯೇ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಇಲ್ಲವಾದಲ್ಲಿ, ಜಾಗೃತ ಸಮಿತಿಗಳ ರಚನೆಯ ವಿಳಂಬಕ್ಕೆ ಕಾರಣವೇನು ;

(ಈ) ಗುರುತಿಸಲಾದ ಜೀತದಾಳುಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಉ) ಇವರುಗಳಿಗೆ ಪುನರ್ವಸತಿ ಕಲ್ಪಿಸಲು ಇದುವರೆಗೂ ಕೈಗೊಂಡ ಕ್ರಮಗಳೇನು ;

(ಊ) ಕೊಪ್ಪಳ ಜಿಲ್ಲೆಯೊಂದರಲ್ಲಿಯೇ ೨೦೧೩ಕ್ಕೆ ೧೪೦ ಜೀತದಾಳುಗಳನ್ನು ಗುರುತಿಸಲಾಗಿತ್ತು ಇವರಿಗೆ ಪುನರ್ವಸತಿಗಾಗಿ ಕೈಗೊಂಡ ಕ್ರಮಗಳಾವುವು ? (ಮಾಹಿತಿಯನ್ನು ನೀಡುವುದು)

## ಕೊಪ್ಪಳ ಏತ ನೀರಾವರಿ ಯೋಜನೆ

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೨೧ (೯೪೩) ಮಾನ್ಯ ಭಾರಿ ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೃಷ್ಣಾ ಬಿ. ಸ್ಕೀಂನಲ್ಲಿರುವ ಕೊಪ್ಪಳ ಏತ ನೀರಾವರಿ ಯೋಜನೆಯ ಕಾಮಗಾರಿಗಳ ಪ್ರಗತಿ ಯಾವ ಹಂತದಲ್ಲಿವೆ ;

(ಆ) ಸದರಿ ಯೋಜನೆಯಲ್ಲಿ ನೀರಾವರಿಗೊಳಪಡುವ ಕ್ಷೇತ್ರ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಸದರಿ ಕಾಮಗಾರಿಯಲ್ಲಿ ೩ನೇ ಹಂತದ ಕಾಮಗಾರಿ ಇದುವರೆಗೂ ಪ್ರಾರಂಭವಾಗದೇ ಇರುವುದಕ್ಕೆ ಕಾರಣಗಳೇನು ;



(ಈ) ಕೊಪ್ಪಳ ಏತ ನೀರಾವರಿ ಯೋಜನೆಯ ಪ್ರಾರಂಭದಿಂದ ವ್ಯಯಿಸಲಾದ ಅನುದಾನದ ಪ್ರಮಾಣ ಎಷ್ಟು ;

(ಉ) ಇನ್ನೂ ಎಷ್ಟು ಅನುದಾನದ ನಿರೀಕ್ಷೆಯನ್ನು ಯೋಜನೆ ಹೊಂದಿದೆ ? (ವಿವರಗಳನ್ನು ನೀಡುವುದು)

## ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿರುವ ರಕ್ಷಿತ ಅರಣ್ಯದ ವಿಸ್ತಾರ ಮತ್ತು ಸಂರಕ್ಷಣೆ

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೮೨೨ (೯೪೮) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಇರುವ ರಕ್ಷಿತ ಅರಣ್ಯದ ವಿಸ್ತಾರವೆಷ್ಟು; ಕಳೆದ ಎರಡು ವರ್ಷಗಳಲ್ಲಿ ಎಷ್ಟು ಪ್ರಮಾಣದಲ್ಲಿ ಅರಣ್ಯ ಪ್ರದೇಶವು ಕಡಿತಗೊಂಡಿದೆ ;

(ಆ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಇರುವ ಅರಣ್ಯವನ್ನು ಕಾಪಾಡಲು ಸರ್ಕಾರ ಏನು ಕ್ರಮ ಕೈಗೊಂಡಿದೆ; ಈ ಅರಣ್ಯ ಪ್ರದೇಶದ ರಕ್ಷಣೆಗೆ ಎಷ್ಟು ಅಧಿಕಾರಿ ಮತ್ತು ಸಿಬ್ಬಂದಿಗಳ ಹುದ್ದೆ ಮಂಜೂರಾಗಿದೆ; ಆ ಪೈಕಿ ಖಾಲಿ ಇರುವ ಹುದ್ದೆಗಳು ಎಷ್ಟು; ಸದರಿ ಹುದ್ದೆಗಳನ್ನು ತುಂಬಲು ಸರ್ಕಾರವು ಯಾವ ಕ್ರಮ ಕೈಗೊಂಡಿದೆ ;

(ಇ) ಈ ಜಿಲ್ಲೆಗಳಲ್ಲಿ ಭಾರೀ ಪ್ರಮಾಣದಲ್ಲಿ ಮರಗಳನ್ನು ಕಡಿಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಬಂದಿದ್ದಲ್ಲಿ ಇದುವರೆಗೆ ಈ ಅಕ್ರಮದ ಕುರಿತು ಎಷ್ಟು ಪ್ರಕರಣಗಳು ದಾಖಲಾಗಿವೆ; ಈ ನಿಟ್ಟಿನಲ್ಲಿ ಯಾವ ಕ್ರಮ ಕೈಗೊಳ್ಳಲಾಗಿದೆ ?

## ರಾಜ್ಯದಲ್ಲಿರುವ ಜಲಸ್ಥಾವರಗಳು

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೮೨೩ (೯೪೭) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಬೃಹತ್ ಅಣೆಕಟ್ಟುಗಳ ಸಂಖ್ಯೆ ಎಷ್ಟು ;

(ಆ) ಈ ಅಣೆಕಟ್ಟುಗಳಲ್ಲಿ ಶೇಖರಿಸಲು ಯೋಜಿಸಿದ ನೀರಿನ ಪ್ರಮಾಣವೆಷ್ಟು ; (ಡ್ಯಾಂವಾರು ಮಾಹಿತಿ ಒದಗಿಸುವುದು)

(ಇ) ಈ ಜಲಸ್ಥಾವರಗಳಲ್ಲಿ ಈಗ ಶೇಖರಣೆಯಾಗುತ್ತಿರುವ ನೀರಿನ ಪ್ರಮಾಣವೆಷ್ಟು ;

(ಈ) ಈ ಜಲಸ್ಥಾವರಗಳಲ್ಲಿ ಹೆಚ್ಚಿನ ಮಣ್ಣು ಶೇಖರಣೆಯಾಗಿದ್ದು, ನೀರಿನ ಪ್ರಮಾಣ ಕಡಿಮೆಯಾಗುತ್ತಿರುವ ಹಿನ್ನೆಲೆಯಲ್ಲಿ ಶೀಘ್ರವಾಗಿ ಹೂಳೆತ್ತುವ ಕ್ರಮ ಕೈಗೊಳ್ಳಲು ಯೋಜಿಸಲಾಗಿದೆಯೇ ;

(ಉ) ಯೋಜಿಸಿದ್ದಲ್ಲಿ ಅದರ ರೂಪುರೇಷೆಗಳನ್ನು ತಿಳಿಸುವುದು ?

## ಐ.ಟಿ.ಐ. ಕೋರ್ಸುಗಳಿಗೆ ವಾರ್ಷಿಕ ಪರೀಕ್ಷಾ ಪದ್ಧತಿ

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೮೨೪ (೯೪೬) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಐ.ಟಿ.ಐ. ಕೋರ್ಸ್‌ಗಳಿಗೆ ವಾರ್ಷಿಕ ಪರೀಕ್ಷಾ ಪದ್ಧತಿಯನ್ನು ಅನುಸರಿಸಲಾಗುತ್ತಿದೆಯೇ; ಅಥವಾ ಸೆಮಿಸ್ಟರ್ ಪದ್ಧತಿಯನ್ನು ಅನುಸರಿಸಲಾಗುತ್ತಿದೆಯೇ ; (ವಿವರ ನೀಡುವುದು)



(ಆ) ೨೦೧೩ನೇ ಸಾಲಿನ ವಿದ್ಯಾರ್ಥಿಗಳಿಗೆ (೨ ವರ್ಷದ ಕೋರ್ಸಿನ ಪರೀಕ್ಷೆ) ಆಗಸ್ಟ್ ೨೦೧೩ರಲ್ಲಿ ಪರೀಕ್ಷೆ ನಡೆಸಬೇಕಾಗಿದ್ದು, ಈ ಪರೀಕ್ಷೆ ಈವರೆವಿಗೂ ನಡೆಯದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಪರೀಕ್ಷೆಯನ್ನು ಯಾವಾಗ ನಡೆಸಲಾಗುವುದು ;

(ಇ) ಈ ರೀತಿ ಪರೀಕ್ಷಾ ಪದ್ಧತಿಯ ಅನಿಶ್ಚಿತತೆಯಿಂದ ಮಕ್ಕಳ ಭವಿಷ್ಯ ಹಾಳಾಗುವುದನ್ನು ತಡೆಯಲು ಸರ್ಕಾರ ನಿಗಧಿತ ವೇಳಾಪಟ್ಟಿಯನ್ನು ತಯಾರಿಸಿ ಅದರಂತೆ ತಪ್ಪದೆ ಅನುಸರಿಸಲು ಕ್ರಮಕೈಗೊಳ್ಳುವುದೇ ?

## ರಬ್ಬರ್ ಬೆಳೆಯುವ ಅರಣ್ಯ ಭೂಮಿ

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೮೨೫ (೯೪೯) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ, ಉಡುಪಿ ಮತ್ತು ಚಿಕ್ಕಮಗಳೂರು ಜಿಲ್ಲೆಗಳಲ್ಲಿ ಹೊರ ರಾಜ್ಯಗಳ ರಬ್ಬರ್ ಬೆಳೆಗಾರರಿಂದ ಅತಿಕ್ರಮಿಸಲ್ಪಟ್ಟ ಅರಣ್ಯ ಭೂಮಿ ಎಷ್ಟು (ಜಿಲ್ಲಾವಾರು ವಿವರ ನೀಡುವುದು) ;

(ಆ) ಹೊರ ರಾಜ್ಯದ ಬೆಳೆಗಾರರಿಂದ ಆಕ್ರಮಿತ ರಬ್ಬರ್ ಬೆಳೆಯುವ ಅರಣ್ಯ ಭೂಮಿಯನ್ನು ತೆರವುಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳಾವುವು ? (ವಿವರ ನೀಡುವುದು)

## ಕಟ್ಟಡ ಕಾರ್ಮಿಕರ ಕ್ಷೇಮಾಭಿವೃದ್ಧಿ

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೮೨೫(ಎ) (೯೫೦) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಟ್ಟಡ ಕಾರ್ಮಿಕರ ಕ್ಷೇಮಾಭಿವೃದ್ಧಿ ಶೀರ್ಷಿಕೆಯಲ್ಲಿ ೨೦೧೩–೧೪ನೇ ಸಾಲಿನಲ್ಲಿ ಎಷ್ಟು ಹಣ ಸಂಗ್ರಹವಾಗಿದೆ ;

(ಆ) ಕಾರ್ಮಿಕ ಕ್ಷೇಮಾಭಿವೃದ್ಧಿ ನಿಯಮದನ್ವಯ ರಾಜ್ಯದಲ್ಲಿ ಈವರೆಗೆ ಒಟ್ಟು ಎಷ್ಟು ಹಣವನ್ನು ಕ್ರೂಢೀಕರಿಸಲಾಗಿದೆ ;

(ಇ) ಈ ಹಣವನ್ನು ವಿನಿಯೋಗಿಸಲು ರೂಪಿಸಿರುವ ಯೋಜನೆಗಳಾವುವು ?

## ದಕ್ಷಿಣ ಕನ್ನಡ, ಉಡುಪಿ ಮತ್ತು ಕಾರವಾರ ಜಿಲ್ಲೆಗಳಲ್ಲಿ ಬಂದರುಗಳ ಅಭಿವೃದ್ಧಿ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೮೨೬ (೯೫೧) ಮಾನ್ಯ ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ, ಉಡುಪಿ, ಕಾರವಾರ ಜಿಲ್ಲೆಗಳಲ್ಲಿ ಬಂದರುಗಳ ಅಭಿವೃದ್ಧಿಗೆ ಮೀಸಲಿಟ್ಟ ಒಟ್ಟು ಅನುದಾನವೆಷ್ಟು ;

(ಆ) ಬಂದರು ಪ್ರದೇಶದಲ್ಲಿ ಮೀನುಗಾರರಿಗೆ ದೊರಕಿಸಿಕೊಟ್ಟ ಒಟ್ಟು ಸ್ಥಳಾವಕಾಶ ಎಷ್ಟು ;

(ಇ) ಮಂಗಳೂರು ನಗರದ ಬೆಂಗ್ರೆ ಪ್ರದೇಶದಲ್ಲಿ ಮೀನುಗಾರರಿಗೆ ಜೆಟ್ಟಿಯನ್ನು ಸ್ಥಾಪಿಸಲು ಯಾವ ಕ್ರಮಗಳನ್ನು ಕೈಗೊಂಡಿದೆ ? (ವಿವರ ನೀಡುವುದು)



## ಮಂಗಳೂರು ನಗರದ ಗುಜ್ಜರಕೆರೆಯ ಪುನಶ್ಚೇತನ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೮೨೭ (೯೫೫) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಗಳೂರು ನಗರದ ಗುಜ್ಜರಕೆರೆಯ ಪುನಶ್ಚೇತನಕ್ಕೆ ಮಂಜೂರು ಮಾಡಿದ ಅನುದಾನ ಎಷ್ಟು ; (ವಿವರ ನೀಡುವುದು)

(ಆ) ಗುಜ್ಜರಕೆರೆ ನೀರನ್ನು ಸ್ಥಳೀಯ ನಗರ ಪ್ರದೇಶದ ಜನರಿಗೆ ಕುಡಿಯುವ ನೀರು ಸರಬರಾಜಿಗೆ ಬಳಕೆ ಮಾಡುವ ಬಗ್ಗೆ ಏನು ಕ್ರಮ ಕೈಗೊಂಡಿದೆ ; (ವಿವರ ನೀಡುವುದು)

(ಇ) ಪ್ರಸ್ತುತ ಈ ಕೆರೆಯ ನೀರು ಕಲುಷಿತಗೊಂಡು ಮಲೇರಿಯಾ, ಡೆಂಗ್ಯೂ, ಚಿಕನ್ ಗುನ್ಯ ಮುಂತಾದ ರೋಗಗಳು ಹರಡುತ್ತಿದ್ದು, ಪರಿಸರ ಮಾಲಿನ್ಯಗೊಂಡಿದ್ದರು ; ಈ ಕೆರೆಯ ಅಭಿವೃದ್ಧಿಗೆ ಕ್ರಮ ಕೈಗೊಳ್ಳದಿರಲು ಕಾರಣವೇನು ; (ವಿವರ ನೀಡುವುದು)

(ಈ) ಈ ಕೆರೆಯ ಪುನಶ್ಚೇತನ ಕಾಮಗಾರಿ ಎಂದು ಪೂರ್ಣಗೊಳ್ಳುವುದು ; ಈ ಕೆರೆಯ ಅಭಿವೃದ್ಧಿಗೆ ಮಹಾನಗರ ಪಾಲಿಕೆಯ ಸಹಾಯ ಪಡೆಯಲಾಗಿದೆಯೆ ; ಇದರಲ್ಲಿ ಮಹಾನಗರ ಪಾಲಿಕೆಯ ಪಾಲು ಎಷ್ಟು ? (ವಿವರ ನೀಡುವುದು)

## ರಾಜ್ಯದಲ್ಲಿ ಅಕ್ರಮವಾಗಿ ವಾಸಿಸುತ್ತಿರುವ ಅರ್ಹರಿಗೆ ೯೪ಸಿ ಕಾಯ್ದೆಯ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೮೨೮ (೯೫೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅಕ್ರಮವಾಗಿ ವಾಸಿಸುತ್ತಿರುವ ಅರ್ಹರಿಗೆ ೯೪ಸಿ ಕಾಯ್ದೆಯನ್ವಯ ಸಕ್ರಮಗೊಳಿಸುವ ಅರ್ಜಿಗಳನ್ನು ಇತ್ಯರ್ಥಪಡಿಸಲು ತಾಲ್ಲೂಕು ಕೇಂದ್ರಗಳಲ್ಲಿ ಹೊಸ ಸಮಿತಿ ರಚಿಸಲು ಕೈಗೊಂಡಿರುವ ಕ್ರಮಗಳೇನು ;

(ಆ) ನಗರ ಪ್ರದೇಶಗಳಲ್ಲಿನ ಸಲ್ಲಿಸಿರುವ ೯೪ಸಿಸಿ ಕಾಯ್ದೆಯನ್ವಯ ಅರ್ಜಿಗಳನ್ನು ಇತ್ಯರ್ಥಗೊಳಿಸಲು ಸ್ಥಳೀಯ ಮಟ್ಟದಲ್ಲಿ ಸಮಿತಿಯನ್ನು ರಚಿಸುವ ಮುಖಾಂತರ ಶೀಘ್ರವಾಗಿ ಅರ್ಜಿಗಳನ್ನು ಇತ್ಯರ್ಥಪಡಿಸಲು ಕ್ರಮ ಕೈಗೊಳ್ಳುವುದೇ ;

(ಇ) ೯೪ಸಿ ಮತ್ತು ೯೪ಸಿಸಿ ಕಾನೂನಿನನ್ವಯ ರಾಜ್ಯದಲ್ಲಿ ಒಟ್ಟು ಎಷ್ಟು ಅರ್ಜಿಗಳು ಸ್ವೀಕೃತವಾಗಿವೆ (ಜಿಲ್ಲಾವಾರು ವಿವರ ನೀಡುವುದು) ; ಈ ಅರ್ಜಿಗಳ ಇತ್ಯರ್ಥಕ್ಕೆ ಅನುಸರಿಸಬೇಕಾದ ಮಾನದಂಡಗಳೇನು ? (ವಿವರ ಒದಗಿಸುವುದು)



## ಉಡುಪಿ ತಾಲ್ಲೂಕಿನ ಸಿದ್ದಾಪುರದಲ್ಲಿ ೩೫ ವರ್ಷಗಳ ಹಿಂದೆ ಆರಂಭಗೊಂಡ "ವರಾಹಿ" ನೀರಾವರಿ ಯೋಜನೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೮೨೯ (೯೫೪) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ಕೆಳಕಂಡ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ತಾಲ್ಲೂಕಿನ ಸಿದ್ದಾಪುರದಲ್ಲಿ ೩೫ ವರ್ಷಗಳ ಹಿಂದೆ ಆರಂಭಗೊಂಡ "ವರಾಹಿ" ನೀರಾವರಿ ಯೋಜನೆಯು ವಿಳಂಬಗೊಳ್ಳಲು ಕಾರಣಗಳೇನು ; ಈ ಯೋಜನೆಗೆ ಎಷ್ಟು ಎಕರೆ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲಾಗಿದೆ ; ಈ ಯೋಜನೆಯ ಪ್ರಾರಂಭಿಕ ಅಂದಾಜು ವೆಚ್ಚ ಎಷ್ಟು ; ಈ ಯೋಜನೆ ಸಂಪೂರ್ಣಗೊಳ್ಳಲು ಬೇಕಾಗಿರುವ ಮೊತ್ತ ಎಷ್ಟು ; (ವಿವರ ನೀಡುವುದು)

(ಆ) ಈ ಯೋಜನೆಗಾಗಿ ಸ್ವಾಧೀನ ಪಡಿಸಲು ಉದ್ದೇಶಿಸಿರುವ ಭೂಮಿಯನ್ನು ಸ್ವಾಧೀನಪಡಿಸಿ ಉಳಿಕೆ ಭೂಮಿಯನ್ನು ರೈತರಿಗೆ ಬಿಟ್ಟು ಕೊಡದೇ ರೈತರಿಗೆ ಉಂಟಾದ ಅನಾನುಕೂಲ ನಿವಾರಿಸಲು ಕೈಗೊಂಡ ಕ್ರಮಗಳೇನು ;

(ಇ) ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಓರ್ವ ನಿರ್ದೇಶಕರನ್ನು ಯೋಜನೆ ಸಂಪೂರ್ಣವಾಗುವವರೆಗೆ ನೇಮಿಸಲು ಸರ್ಕಾರ ಕ್ರಮ ಕೈಗೊಳ್ಳಲಾಗಿದೆಯೇ ;

(ಈ) ಈ ಯೋಜನೆಯಿಂದ ನೀರನ್ನು ೩೩ ಗ್ರಾಮಗಳಿಗಾಗಿ ಒದಗಿಸಲು ಸಾಧ್ಯವಾಗುವುದೇ ; ಈ ಯೋಜನೆಯನ್ನು ಯಾವ ಕಾಲಮಿತಿಯಲ್ಲಿ ಅನುಷ್ಠಾನಕ್ಕೆ ತರಲಾಗುವುದು ; ಈ ಯೋಜನೆಯ ಅನುಷ್ಠಾನಕ್ಕೆ ಇರುವ ಅಡ್ಡಿ ಆತಂಕಗಳೇನು ? (ವಿವರ ನೀಡುವುದು)

## ರೈತರಿಗೆ ಪ್ರತಿ ವರ್ಷ ಗಣಕೀಕೃತ ಕಡ, ಉತಾರ ಪೂರೈಸುವುದು

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೮೩೦ (೯೫೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರತಿ ವರ್ಷ ಪುಕ್ಕಟೆಯಾಗಿ ರೈತರಿಗೆ ರಿಕಾರ್ಡ್ ಆಫ್ ರೈಟ್ಸ್‌ನ್ನು (ಗಣಕೀಕೃತ ಕಡ, ಉತಾರ) ಪ್ರತಿಯನ್ನು ಸರ್ಕಾರ ಉಚಿತವಾಗಿ ನೀಡಬೇಕೆಂಬ ನಿಯಮವಿದೆಯೇ ;

(ಆ) ಹಾಗಿದ್ದಲ್ಲಿ, ಬೆಳಗಾವಿ, ಬಾಗಲಕೋಟೆ ಹಾಗೂ ವಿಜಯಪುರ ಜಿಲ್ಲೆಗಳಲ್ಲಿ ತಹಶೀಲ್ದಾರ್‌ರರು ರೈತರಿಗೆ ಪುಕ್ಕಟೆಯಾಗಿ ರಿಕಾರ್ಡ್ ಆಫ್ ರೈಟ್ಸ್ (ಗಣಕೀಕೃತ ಕಡ, ಉತಾರ) ಕೊಡದೇ ಇದ್ದ ಸಂಗತಿ ನಿಜವೇ ;

(ಇ) ಎಷ್ಟು ವರ್ಷಗಳಿಂದ ರಿಕಾರ್ಡ್ ಆಫ್ ರೈಟ್ಸ್ (ಗಣಕೀಕೃತ ಕಡ, ಉತಾರ) ಗಳನ್ನು ಕೊಟ್ಟಿರುವುದಿಲ್ಲ (ತಾಲ್ಲೂಕುವಾರು ವಿವರ ನೀಡುವುದು) ;

(ಈ) ತಹಶೀಲ್ದಾರರು ಗ್ರಾಮ ಲೆಕ್ಕಾಧಿಕಾರಿಗಳಿಗೂ ಸಹ ಒಂದು ಪ್ರತಿ ಕಳುಹಿಸಬೇಕೆಂಬ ನಿಯಮವಿದ್ದು ಅವರಿಗೂ ಸಹ ಕಳುಹಿಸದೇ ಇದ್ದ ಸಂಗತಿ ನಿಜವೇ ;

(ಉ) ಹಾಗಿದ್ದಲ್ಲಿ, ಕೂಡಲೇ ರೈತರಿಗೆ ಪುಕ್ಕಟೆಯಾಗಿ ರಿಕಾರ್ಡ್ ಆಫ್ ರೈಟ್ಸ್ (ಗಣಕೀಕೃತ ಕಡ, ಉತಾರ) ಪೂರೈಸಲು ಕ್ರಮ ಕೈಗೊಳ್ಳಲಾಗುವುದೇ ?



## ಶ್ರೀ ಮೈಲಾರಲಿಂಗೇಶ್ವರ ದೇವಸ್ಥಾನದ ಜಾಗವನ್ನು ಸಂರಕ್ಷಿಸುವ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೮೩೦ಎ (೯೬೦) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನ ದೊಡ್ಡವಾಡ–ನನಗುಂಡಿಕೊಪ್ಪ ಗ್ರಾಮದ ಆನಂದಗಿರಿಯಲ್ಲಿ ಶ್ರೀ ಮೈಲಾರಲಿಂಗೇಶ್ವರ ದೇವಸ್ಥಾನವಿರುವ ಸಂಗತಿ ನಿಜವೇ ;

(ಆ) ಈ ದೇವಸ್ಥಾನದ ಸುತ್ತಲಿನ ೧೦ ಎಕರೆ ಜಾಗ ಅತಿಕ್ರಮಣವಾಗಬಾರದೆಂಬ ಉದ್ದೇಶದಿಂದ ಈ ಜಾಗದಲ್ಲಿ ಉಪಯುಕ್ತವಾದ ಹುಣಸೆ, ಮಾವು, ನೇರಲೆ, ಇಲಾಚಿ, ಬಾರಿ, ಬೇವು, ಆಲ ಮುಂತಾದ ಗಿಡಮರಗಳನ್ನು ಬೆಳೆಸಲು ಸರ್ಕಾರಕ್ಕೆ ಮನವಿ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಕೈಗೊಂಡಿರುವ ಕ್ರಮವೇನು ;

(ಇ) ಈ ದೇವಸ್ಥಾನದ ಜಮೀನನ್ನು ಸಂರಕ್ಷಿಸಲು ಸುತ್ತಲೂ ತಂತಿಬೇಲಿಯನ್ನು ಹಾಕಿ ಅರಣ್ಯ ಇಲಾಖೆಯಿಂದ ಹಚ್ಚಿದ ಗಿಡಗಳನ್ನು ಸಂರಕ್ಷಣೆ ಮಾಡಲು ಕ್ರಮ ಕೈಗೊಳ್ಳಲಾಗುವುದೇ ?

## ಭೂಮಿಗಳ ಸರ್ವೆ ಕೆಲಸ ವಿಳಂಬವಾಗುತ್ತಿರುವ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೮೩೧ (೯೫೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸರ್ವೆ ಮಾಡುವ ಅಧಿಕಾರಿಗಳ ಕೊರತೆಯಿಂದಾಗಿ ಸರ್ವೆ ಕಾರ್ಯವು ಬಹಳ ವಿಳಂಬವಾಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸರ್ವೆ ವಿಳಂಬವಾಗುವುದನ್ನು ತಪ್ಪಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ ;

(ಇ) ಬೇರೆ ರಾಜ್ಯಗಳಲ್ಲಿ ಇದ್ದಂತೆ ಇಲ್ಲಿಯೂ ಸಹ ಆಧುನಿಕ ತಂತ್ರಜ್ಞಾನದಿಂದ ಸರ್ವೆ ಕೆಲಸ ಮಾಡಿಸಲಾಗುವುದೇ ;

(ಈ) ಸರ್ಕಾರಿ ಆಸ್ತಿ ಅತಿ ಕ್ರಮಣ ಆಗುತ್ತಿದ್ದು ಕೂಡಲೇ ಅದನ್ನು ಸಂರಕ್ಷಣೆ ಮಾಡಲು ಸರ್ವೆಮಾಡಿಸಿ ಸರ್ಕಾರಿ ಸ್ಥಳ ಎಂದು ಬೋರ್ಡ್ ಹಾಕಿಸಿ ಸರ್ಕಾರಿ ಆಸ್ತಿ ಸಂರಕ್ಷಿಸಲು ಕೈಗೊಳ್ಳುವ ಕ್ರಮಗಳೇನು ?

## ಚಚಡಿ–ಮುರಗೋಡ ಏತ ನೀರಾವರಿ ಯೋಜನೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೮೩೨ (೯೫೬) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಚಡಿ–ಮುರಗೋಡ ಏತ ನೀರಾವರಿ ಯೋಜನೆಯ ಕಾಮಗಾರಿಗಳು ಪ್ರಗತಿ ಯಾವ ಹಂತದಲ್ಲಿದೆ ;

(ಆ) ಈ ಕೆಲಸಕ್ಕೆ ಆಡಳಿತಾತ್ಮಕ ಹಾಗೂ ತಾಂತ್ರಿಕ ಮಂಜೂರಾತಿಯನ್ನು ಯಾವ ದಿನಾಂಕಗಳಂದು ನೀಡಲಾಗಿದೆ ; ಹಾಗೂ ಎಷ್ಟು ಮೊತ್ತಕ್ಕೆ ನೀಡಲಾಗಿದೆ; ಮಂಜೂರಾತಿಯನ್ನು ನೀಡದಿದ್ದಲ್ಲಿ ಇನ್ನು ಎಷ್ಟು ದಿನಗಳೊಳಗಾಗಿ ಕೊಡಲಾಗುವುದು;

(ಇ) ಈ ಯೋಜನೆ ಕೈಗೊಳ್ಳುವುದರಿಂದ ಎಷ್ಟು ಎಕರೆ ಜಮೀನು ನೀರಾವರಿಗೆ ಒಳಪಡುತ್ತದೆ ; (ವಿವರ ಒದಗಿಸುವುದು)



(ಈ) ಈ ಕಾಮಗಾರಿಗೆ ಟೆಂಡರ್ ಕರೆಯಲಾಗಿದೆಯೇ ; ಕರೆಯದೇ ಇದ್ದಲ್ಲಿ ಎಷ್ಟು ದಿನಗಳೊಳಗಾಗಿ ಟೆಂಡರ್ ಕರೆದು ಪ್ರಕ್ರಿಯೆ ಪೂರ್ಣಗೊಳಿಸಲಾಗುವುದು ?

## ರಾಜ್ಯದಲ್ಲಿ ಹುಲಿಗಳ ಸಂರಕ್ಷಣೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೮೩೩ (೯೫೮) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಗಣನೀಯ ಪ್ರಮಾಣದಲ್ಲಿ ಹುಲಿಗಳ ಸಂಖ್ಯೆ ಏರುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸಮೀಕ್ಷೆ ಪ್ರಕಾರ ರಾಜ್ಯದಲ್ಲಿರುವ ಹುಲಿಗಳ ಸಂಖ್ಯೆ ಎಷ್ಟು ;

(ಇ) ಈ ಹುಲಿಗಳನ್ನು ಸಂರಕ್ಷಿಸಲು ಹಾಗೂ ಸಂತತಿ ಹೆಚ್ಚಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ ;

(ಈ) ಹುಲಿಗಳ ಫೋಟೋ ತೆಗೆಯುತ್ತಿರುವ ಸಂಗತಿ ನಿಜವೇ ; ಗಣತಿಯನ್ನು ಯಾವ ಪ್ರಕಾರ ಮಾಡಲಾಗುತ್ತಿದೆ ;

(ಉ) ಹುಲಿಗಳಿಗೆ ಬಲಿಯಾದವರ ಸಂಖ್ಯೆ ಹೆಚ್ಚುತ್ತಿರುವುದು ನಿಜವೇ ; ಹುಲಿಗಳು ಕಾಡನ್ನು ಬಿಟ್ಟು ನಾಡಿಗೆ ಬರುತ್ತಿರುವುದನ್ನು ತಡೆಗಟ್ಟಲು ಯಾವ ಕ್ರಮ ಕೈಗೊಳ್ಳಲಾಗಿದೆ ;

(ಊ) ಮಧ್ಯಪ್ರದೇಶದಲ್ಲಿ ಪೆನ್ನಾಹುಲಿ ಸಂರಕ್ಷಣಾ ಕೇಂದ್ರ ಹಾಗೂ ತಮಿಳುನಾಡಿನ ಅನ್ನಾಮಲೈ ಸಂರಕ್ಷಣಾ ಕೇಂದ್ರ ಸ್ಥಾಪಿಸಿದಂತೆ ರಾಜ್ಯದಲ್ಲಿಯೂ ಇಂತಹ ಕೇಂದ್ರ ಸ್ಥಾಪಿಸಲು ಕ್ರಮ ಕೈಗೊಳ್ಳಲಾಗುವುದೇ ;

(ಋ) ಬೆಳಗಾವಿ ಜಿಲ್ಲೆ ಖಾನಾಪೂರ ಅರಣ್ಯಕ್ಕೆ ಹುಲಿಯನ್ನು ಯಾರು, ಯಾವ ನಿಯಮಗಳ ಮೇಲೆ ತಂದು ಬಿಟ್ಟಿದ್ದರು ; ಇದಕ್ಕೆ ತಪ್ಪಿತಸ್ಥ ಅಧಿಕಾರಿಗಳು ಯಾರು ; ಹಾಗೂ ಇವರ ಮೇಲೆ ಕೈಗೊಂಡಿರುವ ಕ್ರಮಗಳೇನು ?

## ಮಹಿಳಾ ಕಾರ್ಮಿಕರಿಗೆ ಕನಿಷ್ಠ ಕೂಲಿ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೮೩೪ (೯೬೩) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗಾರ್ಮೆಂಟ್ಸ್‌ಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಮಹಿಳಾ ಕಾರ್ಮಿಕರಿಗೆ ಕನಿಷ್ಠ ಕೂಲಿಯನ್ನು ನಿಗದಿಪಡಿಸಲಾಗಿದೆಯೇ ; ನಿಗದಿಪಡಿಸಲಾಗಿದ್ದಲ್ಲಿ, ನಿಗದಿಪಡಿಸಿರುವ ಕೂಲಿ ಎಷ್ಟು ;

(ಆ) ರಾಜ್ಯ ಮಹಿಳಾ ಆಯೋಗದಿಂದ ಕನಿಷ್ಠ ಕೂಲಿ ವೇತನವನ್ನು ಹೆಚ್ಚಿಸುವಂತೆ ಶಿಫಾರಸ್ಸು ಮಾಡಲಾಗಿದೆಯೇ ;

(ಇ) ಮಾಡಿದ್ದಲ್ಲಿ, ವಿವರ ನೀಡುವುದು ;

(ಈ) ಗಾರ್ಮೆಂಟ್ಸ್ ಮಹಿಳಾ ಕಾರ್ಮಿಕರ ಕನಿಷ್ಠ ಕೂಲಿ ಹೆಚ್ಚಳ ಕುರಿತ ಸರ್ಕಾರದ ನಿಲುವೇನು ;

(ಉ) ಈ ಕುರಿತು ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ ?



## ಜಟ್ರೋಪಾ ಗಿಡದ ಪ್ರಯೋಜನ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೮೩೫ (೯೬೭) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಜಟ್ರೋಪಾವನ್ನು ಬೆಳೆಯಲು ಪ್ರಾರಂಭಿಸುತ್ತಿರುವುದು ನಿಜವೇ ; ನಿಜವಾದಲ್ಲಿ, ಯಾವಾಗಿನಿಂದ ಬೆಳೆಯಲು ಪ್ರಾರಂಭಿಸಲಾಯಿತು ; ಇದನ್ನು ಇಲ್ಲಿಯವರೆಗೆ ಎಷ್ಟು ಎಕರೆ ವಿಸ್ತೀರ್ಣದಲ್ಲಿ ಎಷ್ಟು ಗಿಡಗಳನ್ನು ನೆಡಲಾಗಿದೆ ;

(ಆ) ಜಟ್ರೋಪಾದಿಂದ ಆಗುವ ಪ್ರಯೋಜನಗಳೇನು ; ತೊಂದರೆಗಳಾವುವು ;

(ಇ) ಈ ಗಿಡವನ್ನು ನೆಟ್ಟ ಎಷ್ಟು ವರ್ಷದಿಂದ ಪ್ರಯೋಜನ ಪಡೆಯಬಹುದಾಗಿದೆ ;

(ಈ) ಪ್ರಸ್ತುತ, ಈಗಾಗಲೇ ನೆಟ್ಟಿರುವ ಗಿಡಗಳಿಂದ ಯಾವ ರೀತಿಯ ಪ್ರಯೋಜನ ಪಡೆಯಲಾಗಿತ್ತಿದೆ ? (ವಿವಿರ ನೀಡುವುದು)

## ಜಮೀನುಗಳ ಆರ್.ಟಿ.ಸಿ. ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೮೩೬ (೯೬೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜಮೀನುಗಳ ಆರ್.ಟಿ.ಸಿ. ಯಲ್ಲಿ ತಪ್ಪಾಗಿ ನಮೂದಾಗಿದ್ದಲ್ಲಿ, ತಿದ್ದುಪಡಿ ಮಾಡುವ ಅಧಿಕಾರವನ್ನು ಯಾವ ಯಾವ ಅಧಿಕಾರಿಗಳಿಗೆ ಎಷ್ಟೆಷ್ಟು ವರ್ಷಗಳ ಅವಧಿಗೆ ನೀಡಲಾಗಿದೆ ;

(ಆ) ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಗಳಲ್ಲಿ ಸದರಿ ತಿದ್ದುಪಡಿ ಅಧಿಕಾರವನ್ನು ಯಾರಿಗೆ ನೀಡಲಾಗಿದೆ ;

(ಇ) ಇದನ್ನು ಹೊರತು ಪಡಿಸಿದಂತೆ ಇತರೆ ಜಿಲ್ಲೆಗಳಲ್ಲಿ ಈ ರೀತಿಯ ತಿದ್ದುಪಡಿ ಅಧಿಕಾರವನ್ನು ಆಯಾ ತಾಲ್ಲೂಕಿನ ತಹಶೀಲ್ದಾರ್‌ಗಳಿಗೆ ನೀಡಿರುವುದು ನಿಜವೇ ;

(ಈ) ಹಾಗಿದ್ದಲ್ಲಿ, ಬೆಂಗಳೂರು ಜಿಲ್ಲೆ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿಯೂ ಈ ರೀತಿಯ ತಿದ್ದುಪಡಿ ಅಧಿಕಾರವನ್ನು ಆಯಾ ತಾಲ್ಲೂಕುಗಳ ತಹಶೀಲ್ದಾರ್‌ರವರಿಗೆ ನೀಡದಿರಲು ಕಾರಣವೇನು ; ಈ ಕುರಿತು ಸರ್ಕಾರ ಮರುಚಿಂತಿಸುವುದೇ ?

## ಕ್ರೀಡಾ ಮನೋಭಾವ ಉಳಿಸಲು ಕಾರ್ಯಕ್ರಮಗಳು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೮೩೭ (೯೬೪) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ನೌಕರರಲ್ಲಿ ಕ್ರೀಡಾ ಮನೋಭಾವ ಉಳಿಸಲು, ಬೆಳೆಸಲು ಮತ್ತು ಪ್ರೋತ್ಸಾಹಿಸಲು ಯಾವ ರೀತಿಯ ಕಾರ್ಯಕ್ರಮಗಳನ್ನು ಹಾಕಿಕೊಳ್ಳಲಾಗಿದೆ ; ಇಲ್ಲವಾದಲ್ಲಿ, ಕಾರಣಗಳೇನು ; ಇರುವ ಅಡ್ಡಿಗಳೇನು ;

(ಆ) ಸ್ಪೋರ್ಟ್ಸ್ ಕೋಟಾದಡಿಯಲ್ಲಿ ಸರ್ಕಾರಿ ಉದ್ಯೋಗ ಪಡೆದ ಸರ್ಕಾರಿ ನೌಕರರ ಕ್ರೀಡಾ ಪ್ರತಿಭೆಯನ್ನು ಯಾವ ರೀತಿಯಲ್ಲಿ



ಬಳಸಿಕೊಳ್ಳಲಾಗಿದೆ ; ಇಲ್ಲವಾದಲ್ಲಿ, ಕಾರಣಗಳೇನು ; ಇರುವ ಅಡ್ಡಿಗಳೇನು ;

(ಇ) ನೋಂದಾಯಿತ ಸರ್ಕಾರಿ ನೌಕರರ ಸಂಘಗಳು ಸರ್ಕಾರಿ ನೌಕರಿಗಾಗಿಯೇ ಕ್ರೀಡೆಗಳನ್ನು ಏರ್ಪಡಿಸಿದ್ದಲ್ಲಿ ಅವರುಗಳಿಗೆ ಯಾವ ರೀತಿಯ ಸಹಾಯ ನೀಡಲಾಗುವುದು ? (ಈ ರೀತಿ ಸಹಾಯ ನೀಡಿದ್ದಲ್ಲಿ, ಕಳೆದ ಎರಡು ವರ್ಷಗಳ ವಿವರ ನೀಡುವುದು)

## ರಾಜ್ಯದಲ್ಲಿ ಶ್ರೀಗಂಧದ ಪ್ರಮಾಣ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೮೩೮ (೯೬೫) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹಾಲಿ ಲಭ್ಯವಿರುವ ಶ್ರೀಗಂಧದ ಪ್ರಮಾಣವೆಷ್ಟು ; ಇದನ್ನು ಬೆಳೆಸಲು ಯಾವ ರೀತಿಯ ಪ್ರೋತ್ಸಾಹ ನೀಡಲಾಗುತ್ತಿದೆ;

(ಆ) ಸರ್ಕಾರಿ ಅರಣ್ಯಗಳಲ್ಲಿ ಬೆಳೆಸಲು ಯಾವ ರೀತಿಯ ಕ್ರಮ ಕೈಗೊಳ್ಳಲಾಗುತ್ತಿದೆ ;

(ಇ) ಕಳೆದ ಐದು ವರ್ಷಗಳಲ್ಲಿ ಎಷ್ಟು ಶ್ರೀಗಂಧದ ಗಿಡಗಳನ್ನು ನೆಡಲಾಗಿದೆ ಹಾಗೂ ಬೆಳೆಸಲಾಗಿದೆ ;

(ಈ) ಶ್ರೀಗಂಧದ ಮರ ಬೆಳೆಸಿದ ರೈತರ ಮರ ಕಳುವಾದಲ್ಲಿ ಪರಿಹಾರ ನೀಡಲಾಗುವುದೇ ?

## ಸೌರಶಕ್ತಿ ಚಾಲಿತ ಪಂಪ್‌ಗಳನ್ನು ಅಳವಡಿಸುವ ಕ್ರಮದ ಕುರಿತು

**ಶ್ರೀ ಅರುಣ ಶಹಾಪುರ ( ಶಿಕ್ಷಕರ ಕ್ಷೇತ್ರ ) :–**

೮೩೯ (೯೬೭) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸೂರ್ಯಜ್ಯೋತಿ ರೈತರ ಬಾಳಿನ ಪರಂಜ್ಯೋತಿ ಕಾರ್ಯಕ್ರಮದಡಿ ಸೌರಶಕ್ತಿ ಚಾಲಿತ ಪಂಪ್‌ಗಳನ್ನು ಅಳವಡಿಸಲು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ; ಈ ಕಾರ್ಯಕ್ರಮಗಳು ಯಾವ ಹಂತದಲ್ಲಿದೆ (ಫಲಾನುಭವಿಗಳ ಹೆಸರು, ವಿಳಾಸ, ಒದಗಿಸಿದ ಸೌಲಭ್ಯದ ವಿವರ ನೀಡುವುದು) ;

(ಆ) ಸಣ್ಣ ನೀರಾವರಿ ಇಲಾಖೆಯಡಿ ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಮಂಜೂರು ಮಾಡಿದ ಬಾವಿ ಹಾಗೂ ಕೊಳವೆ ಬಾವಿಗಳ ಸಂಖ್ಯೆ ಎಷ್ಟು (ಫಲಾನುಭವಿಗಳ ಹೆಸರು ಹಾಗೂ ವಿಳಾಸದ ವಿವರ ನೀಡುವುದು) ?

## ಡೋಣಿ ನದಿ ಮತ್ತು ಬೆಣ್ಣೆ ಹಳ್ಳ ಪ್ರವಾಹ ನಿಯಂತ್ರಣದ ಕುರಿತು

**ಶ್ರೀ ಅರುಣ ಶಹಾಪುರ ( ಶಿಕ್ಷಕರ ಕ್ಷೇತ್ರ ) :–**

೮೪೦ (೯೭೦) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ಕೆಳಕಂಡ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಡೋಣಿ ನದಿ ಮತ್ತು ಬೆಣ್ಣೆ ಹಳ್ಳ ಪ್ರವಾಹ ನಿಯಂತ್ರಣ ಪ್ರಸ್ತಾವನೆ ತಯಾರಿಸಲಾಗಿದೆಯೇ (ಅದರ ವಿವರ ಒದಗಿಸುವುದು) ;

(ಆ) ಅದಕ್ಕೆ ಬೇಕಾಗುವ ಹಣದ ಮೊತ್ತವೆಷ್ಟು ; ಈ ಯೋಜನೆಯ ಕಾರ್ಯಾನ್ವಯಕ್ಕೆ ಯೋಚಿಸಿದ ಕಾಲಮಿತಿ ಎಷ್ಟು ;



(ಇ) ಈ ಯೋಜನೆಗೆ ಅಗತ್ಯವಿರುವ ಭೂಮಿ ಎಷ್ಟು; ಭೂಸ್ವಾಧೀನ ಪ್ರಸ್ತಾವನೆ ಇದೆಯೇ ?

## ಕೈಗಾರಿಕಾ ಉದ್ದೇಶಕ್ಕೆ ಜಮೀನಿನ ಸ್ವಾಧೀನ ಪ್ರಕ್ರಿಯೆ ಕುರಿತು

**ಶ್ರೀ ಅರುಣ ಶಹಾಪುರ ( ಶಿಕ್ಷಕರ ಕ್ಷೇತ್ರ ) :–**

೮೪೧ (೯೬೯) ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ ಜಿಲ್ಲೆಯಲ್ಲಿ ಕೈಗಾರಿಕಾ ಉದ್ದೇಶಕ್ಕಾಗಿ ಎಷ್ಟು ಎಕರೆ ಜಮೀನನ್ನು ಸ್ವಾಧೀನ ಪಡಿಸಿಕೊಳ್ಳಲಾಗಿದೆ ; ಅಥವಾ ಸ್ವಾಧೀನ ಪಡಿಸಿಕೊಳ್ಳಲಾಗುತ್ತಿದೆ (ಯೋಜನಾವಾರು/ಗ್ರಾಮವಾರು ವಿವರ ನೀಡುವುದು) ;

(ಆ) ಇದರಲ್ಲಿ ಯಾವ ಯಾವ ರೀತಿಯ ಎಷ್ಟು ವಿಸ್ತೀರ್ಣದ ಪೋರ್ಟ್ ಖರಾಬು ಜಮೀನು ಇದೆ ; (ಸರ್ವೆ ನಂಬರ್‌ವಾರು/ಗ್ರಾಮವಾರು ವಿವರ ನೀಡುವುದು)

(ಇ) ಒಟ್ಟು ಪೋರ್ಟ್ ಖರಾಬು ಜಮೀನಿನ ವಿಸ್ತೀರ್ಣ ಎಷ್ಟು ?

## ನದಿ, ಕೆರೆಗಳಿಗೆ ರಾಸಾಯನಿಕ ತ್ಯಾಜ್ಯ ಬಗ್ಗೆ

**ಶ್ರೀ ಅರುಣ ಶಹಾಪುರ ( ಶಿಕ್ಷಕರ ಕ್ಷೇತ್ರ ) :–**

೮೪೨ (೯೬೬) ಮಾನ್ಯ ಅರಣ್ಯ ಸಚಿವರು ಈ ಕೆಳಕಂಡ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ನದಿ, ಕೆರೆ ಪಾತ್ರಗಳಿಗೆ ಕಾರ್ಖಾನೆಗಳ ತ್ಯಾಜ್ಯ/ ರಾಸಾಯನಿಕ ತ್ಯಾಜ್ಯ ಸೇರುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ರೀತಿ ಎಷ್ಟು ಪ್ರಕರಣಗಳು ಕಂಡು ಬಂದಿದೆ ; ತೆಗೆದುಕೊಂಡ ಕ್ರಮ ಏನು ;

(ಇ) ಇದರಿಂದ ಅಂತರ್ಜಲವು ಕಲುಷಿತಗೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಯಾವ ಯಾವ ಕಾರ್ಖಾನೆಯ ತ್ಯಾಜ್ಯ ನದಿ ಪಾತ್ರಗಳಲ್ಲಿ ಸೇರುತ್ತವೆ ? (ಕಾರ್ಖಾನೆಗಳವಾರು ಪ್ರಮಾಣವಾರು ವಿವರ ನೀಡುವುದು)

## ತುಂಗಭದ್ರಾ ಜಲಾಶಯದಿಂದ ಹೂಳೆತ್ತುವ ಕುರಿತು

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೮೪೩ (೯೮೫) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುಂಗಭದ್ರಾ ಅಣೆಕಟ್ಟೆಯಲ್ಲಿ ತುಂಬಿರುವ ಹೂಳಿನಿಂದಾಗಿ ಸುಮಾರು ೩೫ ಟಿ.ಎಂ.ಸಿ ಯಷ್ಟು ನೀರು ಸಂಗ್ರಹಣೆ ಕಡಿಮೆ ಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ತುಂಗಭದ್ರಾ ಅಣೆಕಟ್ಟೆಯಲ್ಲಿ ತುಂಬಿರುವ ಹೂಳನ್ನು ತೆಗೆಯಲು ಗ್ಲೋಬಲ್ ಟೆಂಡರ್ ಕರೆದಿದ್ದು ಸದರಿ ಕಾಮಗಾರಿಯು ಯಾವ ಹಂತದಲ್ಲಿದೆ; ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು ?



## ರಾಯಚೂರು ನಗರಕ್ಕೆ ನೀರು ಒದಗಿಸುವ ಕುರಿತು

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೮೪೪ (೯೮೬) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ನಗರ ಹಾಗೂ ಸುತ್ತಲಿನ ಹಲವು ಗ್ರಾಮಗಳಿಗೆ ನೀರು ಒದಗಿಸಲು ಉದ್ದೇಶಿಸಿರುವ ಗಣೇಕಲ್ ಹತ್ತಿರವಿರುವ 'ಸಮತೋಲನ ಜಲಾಶಯಕ್ಕೆ' ನೀರು ತುಂಬಿಸುವ ಯೋಜನೆ ಎನ್.ಆರ್.ಬಿ.ಸಿ. ಯಿಂದ ೧೦೬ ಕಿ.ಮೀ.ನಲ್ಲಿ ಲಿಂಕ್ ಚಾನಲ್ ನಿರ್ಮಾಣ ಮಾಡುವ ಪ್ರಸ್ತಾವನೆ ವಿಳಂಬವಾಗಲು ಕಾರಣವೇನು ;

(ಆ) ಸದರಿ ಮಹತ್ವಪೂರ್ಣವಾದ ಯೋಜನೆಯು ಯಾವ ಹಂತದಲ್ಲಿದೆ; ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು ? (ವಿವರ ಒದಗಿಸುವುದು)

## ಕೆರೆಗಳ ಅಭಿವೃದ್ಧಿ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೮೪೫ (೯೮೭) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯಲ್ಲಿ ಸಣ್ಣ ನೀರಾವರಿ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಒಟ್ಟು ಕೆರೆಗಳ ಸಂಖ್ಯೆ ಎಷ್ಟು; ಸದರಿ ಕೆರೆಗಳನ್ನು ಅಭಿವೃದ್ಧಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ರಾಯಚೂರು, ಮಾನ್ವಿ ಹಾಗೂ ದೇವದುರ್ಗ ತಾಲ್ಲೂಕುಗಳಲ್ಲಿ ಇರುವ ಒಟ್ಟು ಕೆರೆಗಳ ಸಂಖ್ಯೆ ಎಷ್ಟು; ಸದರಿ ಕೆರೆಗಳನ್ನು ಅಭಿವೃದ್ಧಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ಒದಗಿಸುವುದು)

(ಇ) ರಾಯಚೂರು ತಾಲ್ಲೂಕಿನ ಕೆರೆಗಳಿಗೆ ಕೃಷ್ಣಾ ಹಾಗೂ ತುಂಗಭದ್ರಾ ನದಿಗಳಿಂದ ನೀರು ತುಂಬಿಸುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ ;

(ಈ) ಹಾಗಿದ್ದಲ್ಲಿ, ಈ ಭಾಗದ ರೈತರ ಕೃಷಿ ಭೂಮಿಗಳಿಗೆ ನೀರು ಒದಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರ ಒದಗಿಸುವುದು)

(ಉ) ಸದರಿ ಕೆರೆಗಳಿಗೆ ನೀರು ತುಂಬಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ಒದಗಿಸುವುದು)

## ಖಾಲಿ ಹುದ್ದೆಗಳ ಭರ್ತಿ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೮೪೬ (೯೮೩) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನೀರಾವರಿ ಇಲಾಖೆಯಲ್ಲಿ ಸಾಕಷ್ಟು ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;



(ಆ) ಹಾಗಿದ್ದಲ್ಲಿ, ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಯಾವ ಕಾಲಮಿತಿಯಲ್ಲಿ ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದು ? (ವಿವರ ಒದಗಿಸುವುದು)

## ಮಾನ್ವಿ ಹಾಗೂ ರಾಯಚೂರು ಭಾಗದ ರೈತರಿಗೆ ನೀರು ಒದಗಿಸುವ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೮೪೭ (೯೮೪) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುಂಗಭದ್ರಾ ಎಡದಂಡೆ ಮುಖ್ಯ ಕಾಲುವೆಯ ಎಡಭಾಗದಲ್ಲಿ ಅನಧಿಕೃತವಾಗಿ ಬೆಳೆ ಬೆಳೆಯುತ್ತಿರುವ ಪ್ರದೇಶ ಹೆಚ್ಚಾಗಿದ್ದು ಮುಖ್ಯ ಕಾಲುವೆಯ ಕೊನೆಯ ಭಾಗದ ಮಾನ್ವಿ ತಾಲ್ಲೂಕು ಹಾಗೂ ರಾಯಚೂರು ತಾಲ್ಲೂಕಿಗೆ ನೀರು ಹರಿಯದೆ ರೈತರು ಸಂಕಷ್ಟಕ್ಕೊಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಮಾನ್ವಿ ತಾಲ್ಲೂಕು ಮತ್ತು ರಾಯಚೂರು ತಾಲ್ಲೂಕುಗಳ ಕೊನೆಯ ಭಾಗದ ರೈತರುಗಳಿಗೆ ನೀರು ಒದಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ಒದಗಿಸುವುದು)

## ಅರಣ್ಯ ಒತ್ತುವರಿ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೪೮ (೯೮೯) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ನಾನಾ ಉದ್ದೇಶಗಳಿಗಾಗಿ ಖಾಸಗಿಯವರು ಒತ್ತುವರಿ ಮಾಡಿಕೊಂಡಿರುವ ಅರಣ್ಯ ಪ್ರದೇಶದ ಭೂಮಿ ಎಷ್ಟು; (ಒತ್ತುವರಿದಾರರ ಹೆಸರು, ಪೂರ್ಣ ವಿಳಾಸ, ಪ್ರದೇಶವಾರು ವಿಸ್ತೀರ್ಣದ ವಿವರ ನೀಡುವುದು)

(ಆ) ಹಾಗಿದ್ದಲ್ಲಿ, ಇದುವರೆವಿಗೂ ಒತ್ತುವರಿ ಮಾಡಿಕೊಂಡಿರುವ ಎಷ್ಟು ಅರಣ್ಯ ಜಮೀನನ್ನು ಸರ್ಕಾರ ಸ್ವಾಧೀನಪಡಿಸಿಕೊಂಡಿದೆ ;

(ಇ) ಇನ್ನೂ ಉಳಿದ ಒತ್ತುವರಿ ಜಮೀನನ್ನು ವಶಪಡಿಸಿಕೊಳ್ಳಲು ಸರ್ಕಾರಕ್ಕೆ ಎಷ್ಟು ಕಾಲಾವಕಾಶ ಬೇಕಾಗುವುದು ;

(ಈ) ಅರಣ್ಯ ಪ್ರದೇಶವನ್ನು ಅಕ್ರಮವಾಗಿ ರೆಸಾರ್ಟ್‌ಗಳನ್ನು ಮಾಡಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಹಾಗಿದ್ದಲ್ಲಿ, ಇದುವರೆವಿಗೂ ಇಂತಹ ಎಷ್ಟು ರೆಸಾರ್ಟ್‌ಗಳನ್ನು ಸರ್ಕಾರ ಗುರುತಿಸಿದೆ; ಇಲಾಖೆಯ ಅಧಿಕಾರಿಗಳು ಇವರೊಂದಿಗೆ ಶಾಮೀಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಹಾಗಿದ್ದಲ್ಲಿ, ಇಂತಹ ಅಕ್ರಮಗಳಲ್ಲಿ ಪಾಲ್ಗೊಂಡ ಅಧಿಕಾರಿಗಳ ವಿರುದ್ಧ ಸರ್ಕಾರ ಕ್ರಮ ಜರುಗಿಸಿದೆಯೇ ? (ವಿವರ ನೀಡುವುದು)



## ಕೆರೆಗಳ ಹೂಳೆತ್ತುವ ಕಾಮಗಾರಿ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೪೯ (೯೯೦) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ಒಂದು ವರ್ಷದಿಂದ ಎಷ್ಟು ಕೆರೆಗಳಲ್ಲಿ ಹೂಳೆತ್ತುವ ಕಾರ್ಯ ನಡೆದಿದೆ ;

(ಆ) ಇದಕ್ಕೆ ಸರ್ಕಾರ ವೆಚ್ಚ ಮಾಡಿರುವ ಮೊತ್ತವೆಷ್ಟು ;

(ಇ) ಕೆರೆಗಳಲ್ಲಿ ಹೂಳೆತ್ತುವ ಕಾಮಗಾರಿಯನ್ನು ಗುತ್ತಿಗೆದಾರರು ಕಳಪೆ ಮಟ್ಟದಲ್ಲಿ ನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅಂತಹವರ ವಿರುದ್ಧ ಸರ್ಕಾರ ಯಾವ ಕ್ರಮಗಳನ್ನು ಜರುಗಿಸಿದೆ ? (ವಿವರ ನೀಡುವುದು)

## ಬೆಂಗಳೂರಿನಲ್ಲಿರುವ ಗಾರ್ಮೆಂಟ್ಸ್‌ಗಳು

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೫೦ (೯೮೮) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರಿನಲ್ಲಿರುವ ಒಟ್ಟು ಗಾರ್ಮೆಂಟ್ಸ್ ಕಾರ್ಖಾನೆಗಳ ಸಂಖ್ಯೆ ಎಷ್ಟು ;

(ಆ) ಇವುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರ್ಮಿಕರ ಸಂಖ್ಯೆ ಎಷ್ಟು ;

(ಇ) ಗ್ರಾಮೀಣ ಪ್ರದೇಶಗಳಲ್ಲಿ ದುಡಿಯುತ್ತಿರುವ ಮಹಿಳಾ ಕಾರ್ಮಿಕರಿಗೆ ರಕ್ಷಣೆ ಇಲ್ಲದಿರುವುದು, ಮೂಲ ಸೌಕರ್ಯಗಳ ಕೊರತೆ ಇರುವುದು ಹಾಗೂ ಮಾನಸಿಕ ಕಿರುಕುಳ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದರೆ, ಇಂತಹ ಎಷ್ಟು ಗಾರ್ಮೆಂಟ್ಸ್ ಕಾರ್ಖಾನೆಗಳನ್ನು ಸರ್ಕಾರ ಇದುವರೆವಿಗೆ ಗುರುತಿಸಿದೆ ;

(ಉ) ಅಂತಹ ಗಾರ್ಮೆಂಟ್ಸ್ ಕಾರ್ಖಾನೆಗಳ ಮುಖ್ಯಸ್ಥರ ವಿರುದ್ಧ ಸರ್ಕಾರ ಯಾವ ರೀತಿ ಕ್ರಮ ಜರುಗಿಸಿದೆ ?

## ಹೊಸದಾಗಿ ಸೃಜಿಸುವ ಕೈಗಾರಿಕಾ ತರಬೇತಿ ಸಂಸ್ಥೆಗಳಿಗೆ ಹುದ್ದೆ ಮಂಜೂರಾತಿ

**ಶ್ರೀ ಜಗ್ಗೇಶ್ (ನಾಮನಿರ್ದೇಶನ) :–**

೮೫೧ (೯೮೧) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ೧೦೦ ಹೊಸ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳನ್ನು ಸ್ಥಾಪಿಸುವುದಾಗಿ ಸರ್ಕಾರ ಮಾಡಿದ ಘೋಷಣೆ ಯಾವ ಹಂತದಲ್ಲಿದೆ ;

(ಆ) ಹೊಸದಾಗಿ ಸ್ಥಾಪನೆಯಾಗುವ ಕೈಗಾರಿಕಾ ತರಬೇತಿ ಸಂಸ್ಥೆಗಳಿಗೆ ಅಗತ್ಯವಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; ಸದರಿ ಹುದ್ದೆಗಳ ಮಂಜೂರಾತಿ ಆಗಿದೆಯೆ ;

(ಇ) ಹಾಗಾದರೆ, ಯಾವ ಯಾವ ವೃಂದದ ಎಷ್ಟೆಷ್ಟು ಹುದ್ದೆಗಳು ಮಂಜೂರಾಗಿವೆ ? (ವಿವರ ನೀಡುವುದು)



## ಕೆರೆಗಳ ಪುನರುಜ್ಜೀವನ

**ಶ್ರೀ ಜಗ್ಗೇಶ್ (ನಾಮನಿರ್ದೇಶನ) :–**

೮೫೨ (೯೮೨) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುಮಕೂರು ಜಿಲ್ಲೆ, ತುರುವೇಕೆರೆ ತಾಲ್ಲೂಕಿನಲ್ಲಿ ಈವರೆಗೆ ಎಷ್ಟು ಕೆರೆಗಳನ್ನು ಪುನರುಜ್ಜೀವನಗೊಳಿಸಲಾಗಿದೆ ; (ಕೆರೆಗಳವಾರು ವಿವರ ನೀಡುವುದು)

(ಆ) ಈ ಕೆರೆಗಳನ್ನು ಅಭಿವೃದ್ಧಿಗೊಳಿಸಲು ಸರ್ಕಾರದಿಂದ ಮಂಜೂರಾದ ಒಟ್ಟು ಹಣವೆಷ್ಟು ; ಖರ್ಚಾದ ಹಣವೆಷ್ಟು ? (ಕೆರೆಗಳವಾರು ವಿವರ ನೀಡುವುದು)

## ಕೈಗಾರಿಕಾ ತರಬೇತಿ ಸಂಸ್ಥೆಗಳು

**ಶ್ರೀ ಜಗ್ಗೇಶ್ (ನಾಮನಿರ್ದೇಶನ) :–**

೮೫೩ (೯೮೦) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಕೈಗಾರಿಕಾ ತರಬೇತಿ ಸಂಸ್ಥೆಗಳು ಎಷ್ಟು; ಅವುಗಳಲ್ಲಿ ಸರ್ಕಾರಿ ಸಂಸ್ಥೆಗಳು ಎಷ್ಟು ; ಅನುದಾನಿತ ಸಂಸ್ಥೆಗಳು ಎಷ್ಟು ; ಯಾವುವು ; (ವಿವರ ನೀಡುವುದು)

(ಆ) ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ ತರಬೇತಿ ಪಡೆಯುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ? (ವಿವರ ನೀಡುವುದು)

## "ಯುವ ನೀತಿ" ಯಡಿ ಚಿತ್ರದುರ್ಗ, ದಾವಣಗೆರೆ ಜಿಲ್ಲೆಗಳಲ್ಲಿ ಹಮ್ಮಿಕೊಂಡ ಕಾರ್ಯಕ್ರಮಗಳು

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೫೪ (೮೬೪) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರ ನೂತನವಾಗಿ ಜಾರಿಗೊಳಿಸಿರುವ "ಯುವನೀತಿ" ಯಡಿ ಚಿತ್ರದುರ್ಗ ಮತ್ತು ದಾವಣಗೆರೆ ಜಿಲ್ಲೆಗಳಲ್ಲಿ ಅನುಷ್ಠಾನಗೊಂಡಿರುವ ಯುವಜನ ಕಾರ್ಯಕ್ರಮಗಳು ಯಾವುವು ; (ಮಾಹಿತಿ ಒದಗಿಸುವುದು)

(ಆ) ಕಳೆದ ೨ ವರ್ಷಗಳಲ್ಲಿ ವೆಚ್ಚ ಮಾಡಿರುವ ಅನುದಾನ ಎಷ್ಟು ? (ಮಾಹಿತಿ ನೀಡುವುದು)

## ಚಿತ್ರದುರ್ಗ ಮತ್ತು ದಾವಣಗೆರೆ ಜಿಲ್ಲೆಯಲ್ಲಿ ಬಾಲ ಕಾರ್ಮಿಕರ ಸಮಸ್ಯೆ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೫೫ (೮೬೬) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿತ್ರದುರ್ಗ ಹಾಗೂ ದಾವಣಗೆರೆ ಜಿಲ್ಲೆಗಳಲ್ಲಿ ಬಾಲ ಕಾರ್ಮಿಕರ ಸಮಸ್ಯೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;



(ಆ) ಬಂದಿದ್ದಲ್ಲಿ, ಅಂತಹ ಬಾಲಕಾರ್ಮಿಕರನ್ನು ಸಮಾಜದ ಮುಖ್ಯವಾಹಿನಿಗೆ ತರಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಈ ಎರಡು ಜಿಲ್ಲೆಗಳಲ್ಲಿ ಕಳೆದ ೩ ವರ್ಷಗಳಲ್ಲಿ ಎಷ್ಟು ಮಂದಿ ಬಾಲ ಕಾರ್ಮಿಕರನ್ನು ಗುರುತಿಸಿ ಶಾಲೆಗೆ ದಾಖಲು ಮಾಡಲಾಗಿದೆ ? (ಮಾಹಿತಿ ಒದಗಿಸುವುದು)

## ಚಿತ್ರದುರ್ಗ ದಾವಣಗೆರೆ ಜಿಲ್ಲೆಗಳಲ್ಲಿನ ಅಸಂಘಟಿತ ಕಾರ್ಮಿಕರು

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೫೬ (೮೬೫) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿತ್ರದುರ್ಗ ಹಾಗೂ ದಾವಣಗೆರೆ ಜಿಲ್ಲೆಗಳಲ್ಲಿರುವ ಅಸಂಘಟಿತ ವಲಯದ ಕಾರ್ಮಿಕರ ಸಂಖ್ಯೆ ಎಷ್ಟು ; (ಅಂಕಿ ಅಂಶ ಒದಗಿಸುವುದು)

(ಆ) ಇವರಲ್ಲಿ ಎಷ್ಟು ಮಂದಿಯನ್ನು ರಾಷ್ಟ್ರೀಯ ಸ್ವಾಸ್ಥ್ಯ ವಿಮಾ ಯೋಜನೆಯಡಿ ನೋಂದಾಯಿಸಲಾಗಿದೆ; ಬಾಕಿಯವರನ್ನು ವಿಮಾದಾರರನ್ನಾಗಿಸಲು ಇಲಾಖೆ ಕೈಗೊಂಡಿರುವ ಕ್ರಮವೇನು ? (ಮಾಹಿತಿ ಒದಗಿಸುವುದು)

## ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳಿಗೆ ಸ್ಮಶಾನ.

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೫೭ (೮೭೬) ಮಾನ್ಯ ಕಂದಾಯ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ಕಂದಾಯ ಇಲಾಖೆಯ ವತಿಯಿಂದ ಯಾವ ಯಾವ ಗ್ರಾಮಗಳಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳಿಗೆ ಸ್ಮಶಾನಕ್ಕೆ ಜಾಗವಿಲ್ಲದಿರುವುದನ್ನು ಗುರುತಿಸಲಾಗಿದೆ; ಇವರಿಗೆ ಸ್ಮಶಾನ ಜಾಗ ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮವೇನು ?

## ಕ್ರೀಡಾ ಇಲಾಖೆಯ ಕಾರ್ಯಕ್ರಮಗಳು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೫೮ (೮೭೮) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಲ್ಲಿ ಇರುವ ಕಾರ್ಯಕ್ರಮಗಳು ಯಾವುವು ;

(ಆ) ಈ ಕಾರ್ಯಕ್ರಮಗಳಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳಿಗೆ ಎಷ್ಟೆಷ್ಟು ಹಣ ನೀಡಲಾಗಿದೆ ;

(ಇ) ಇಲಾಖೆಗೆ ೨೦೧೪–೧೫ರಲ್ಲಿ ನಿಗದಿಗೊಳಿಸಿದ ಹಣ ಎಷ್ಟು; ಇದುವರೆಗೆ ಖರ್ಚಾಗಿರುವ ಹಣ ಎಷ್ಟು ;



(ಈ) ಇದರಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳಿಗೆ ಖರ್ಚಾಗಿರುವ ಹಣ ಎಷ್ಟು ? (ವಿವರ ನೀಡುವುದು)

## ಕಂದಾಯ ಇಲಾಖೆ ವತಿಯಿಂದ ಶೈಕ್ಷಣಿಕ ಮತ್ತು ಧಾರ್ಮಿಕ ಸಂಸ್ಥೆಗಳಿಗೆ ಜಮೀನು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೫೯ (೮೭೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಐದು ವರ್ಷಗಳಿಂದ ಕಂದಾಯ ಇಲಾಖೆಯು ಸರ್ಕಾರಿ ಜಮೀನನ್ನು ಯಾವ ಯಾವ ಶೈಕ್ಷಣಿಕ ಮತ್ತು ಧಾರ್ಮಿಕ ಸಂಸ್ಥೆಗಳಿಗೆ ಎಷ್ಟೆಷ್ಟು ವಿಸ್ತೀರ್ಣದ ಜಮೀನು ನೀಡಿದೆ ;

(ಆ) ಖರೀದಿಸಲಾಗಿರುವ ಮೊತ್ತ ಎಷ್ಟು; ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗಗಳ ಹಾಗೂ ಹಿಂದುಳಿದ ವರ್ಗಗಳು ನಡೆಸುತ್ತಿರುವ ಶಿಕ್ಷಣ ಹಾಗೂ ಧಾರ್ಮಿಕ ಸಂಸ್ಥೆಗಳಿಗೆ ಮಂಜೂರು ಮಾಡಿರುವ ಭೂಮಿಯ ವಿಸ್ತೀರ್ಣ ಎಷ್ಟು; ಯಾವ ದರದಲ್ಲಿ ನೀಡಲಾಗಿದೆ ?

**ವಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಘಟಕ–2, ಬೆಂಗಳೂರು–59/ಕಾ.ಸೂ.03490 / 1000 ಪ್ರತಿಗಳು/09–02–15